VOLUME: 16 | 24 MAY 2026 | ಭಾನುವಾರ | RS: 2 | PAGE: 06 ISSUE: 104 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಅನನ್ಯಾ ಪಾಂಡೆ ನಟನೆಯ 'ಚಾಂದ್ ಮೇರಾ ದಿಲ್' ಚಿತ್ರದ ಭರತನಾಟ್ಯ ದೃಶ್ಯ ವೈರಲ್ ಆಗಿದ್ದು, ಭಾರಿ ಟೀಕೆಗೆ ಗುರಿಯಾಗಿದೆ. ಅನನ್ಯಾ ನೃತ್ಯವನ್ನು 'ಸಾಂಸ್ಕೃತಿಕ ಅವಮಾನ' ಎಂದು ನೆಟ್ಟಿಗರು ಟೀಕಿಸಿದ್ದಾರೆ. ಈ ಘಟನೆ ಬಾಲಿವುಡ್‌ನಲ್ಲಿ ನೆಪೋಟಿಸಂ ಕುರಿತು ಹಳೆಯ ಚರ್ಚೆಯನ್ನು ಮತ್ತೆ ಹುಟ್ಟುಹಾಕಿದೆ.



BHARATHA SARATHI
KANNADA DAILY NEWS PAPER
CALL 9740160669

# ಭಾರತ ಸಾರಥಿ

RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ಕನ್ನಡಿಗರ ಸ್ವಾಭಿಮಾನ ಪರೀಕ್ಷಿಸುತ್ತಿರುವ ವಿಜಯ್..!

ಚೆನ್ನೈ: ಡಿಸಿಎಂ ಡಿಕೆ ಶಿವಕುಮಾರ್ ಶೀಘ್ರವೇ ಗುದ್ದಲಿ ಪೂಜೆ ಮಾಡಲಾಗುವುದು ಎಂದು ಹೇಳಿದ ಬೆನ್ನಲ್ಲೇ ಮೇಕೆದಾಟು ಯೋಜನೆ ವಿರುದ್ಧ ಕಾನೂನು ಹೋರಾಟ ಮುಂದುವರಿಸಲು ಸಿಎಂ ಜೋಸೆಫ್ ವಿಜಯ್ ಖಡಕ್ ಸೂಚನೆ ನೀಡಿದ್ದಾರೆ.

ಕರ್ನಾಟಕದ ಮಹತ್ವಾಕಾಂಕ್ಷೆಯ ಮೇಕೆದಾಟು ಜಲಾಶಯ ಯೋಜನೆಯನ್ನು ಯಾವುದೇ ಕಾರಣಕ್ಕೂ ಅನುಷ್ಠಾನಕ್ಕೆ ತರಲು ಬಿಡಬಾರದು ಎಂದು ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದ್ದಾರೆ. ಮೇಕೆದಾಟು ವಿರುದ್ಧದ ಕಾನೂನು ಹೋರಾಟವನ್ನು ತ್ವರಿತಗತಿಯಲ್ಲಿ ಮುಂದುವರಿಸುವಂತೆ ಹಾಗೂ ರಾಜ್ಯದ ನೀರಾವರಿ ಹಕ್ಕುಗಳನ್ನು ರಕ್ಷಿಸುವಲ್ಲಿ ಯಾವುದೇ ರಾಜಿ ಮಾಡಿಕೊಳ್ಳದಂತೆ ಅವರು ನಿರ್ದೇಶನ ನೀಡಿದ್ದಾರೆ.

ಚೆನ್ನೈನಲ್ಲಿ ಕಾವೇರಿ ಜಲವಿವಾದ ಮತ್ತು ಕಾನೂನು ತಜ್ಞರೊಂದಿಗೆ ಉನ್ನತ ಮಟ್ಟದ ತುರ್ತು ಸಭೆ ನಡೆಸಿದ ವಿಜಯ್, ಜಲ ವಿವಾದದ ಇತಿಹಾಸ, ಹಾಲಿ ನೀರು ಹಂಚಿಕೆ ಪ್ರಕ್ರಿಯೆ ಮತ್ತು ಮೇಕೆದಾಟು ಆಣೆಕಟ್ಟು ನಿರ್ಮಾಣ ಮಾಡಲು ಕರ್ನಾಟಕ ಸರ್ಕಾರ ನಡೆಸುತ್ತಿರುವ ಪ್ರಸ್ತಾಪಗಳ ಬಗ್ಗೆ



ಸುದೀರ್ಘ ಮಾಹಿತಿ ಪಡೆದುಕೊಂಡರು.

ಸಭೆಯ ವೇಳೆ ಕಾನೂನು ತಜ್ಞರು ಸುಪ್ರೀಂ ಕೋರ್ಟ್‌ನಲ್ಲಿ ಮೇಕೆದಾಟು ಜಲವಿವಾದಕ್ಕೆ ಸಂಬಂಧಿಸಿದಂತೆ ನಡೆದಿರುವ ಇತ್ತೀಚಿನ ಬೆಳವಣಿಗೆಗಳನ್ನು ಮುಖ್ಯಮಂತ್ರಿಗಳ ಗಮನಕ್ಕೆ ತಂದಿದ್ದಾರೆ.

2025ರ ನವೆಂಬರ್ 13ರಂದು ನಡೆದಿದ್ದ ವಿಚಾರಣೆಯಲ್ಲಿ ಸುಪ್ರೀಂ ಕೋರ್ಟ್ ಮೇಕೆದಾಟು ಯೋಜನೆಗೆ ಯಾವುದೇ ನೇರ ಅನುಮತಿ ನೀಡಿರಲಿಲ್ಲ. ಯೋಜನೆ ಇನ್ನೂ ಪ್ರಾಥಮಿಕ ಹಂತದಲ್ಲಿದೆ ಎಂದು ಹೇಳಿದ್ದ ನ್ಯಾಯಾಲಯ, "ಈ ಯೋಜನೆ ಹಿಂದಿನ ತೀರ್ಪಿನ ವ್ಯಾಪ್ತಿಗೆ ಬರುತ್ತದೆಯೇ ಎಂಬುದನ್ನು ಕೇಂದ್ರ ಜಲ ಆಯೋಗವೇ ನಿರ್ಧರಿಸಬೇಕು" ಎಂದು ಅಭಿಪ್ರಾಯಪಟ್ಟು ತಮಿಳುನಾಡಿನ ಪ್ರಕರಣಗಳನ್ನು ವಜಾಗೊಳಿಸಿತ್ತು.

ಸುಪ್ರೀಂ ಕೋರ್ಟ್‌ನ ಈ ಆದೇಶವನ್ನು ಪ್ರಶ್ನಿಸಿ ತಮಿಳುನಾಡು ಸರ್ಕಾರವು ಸುಪ್ರೀಂನಲ್ಲಿ ಮರುಪರಿಶೀಲನಾ ಅರ್ಜಿ ಸಲ್ಲಿಸಿತ್ತು. ಈ ಅರ್ಜಿಯು ಚೇಂಬರ್ ವಿಚಾರಣೆಗೆ ಒಳಗಾಗಿ ತೀರ್ಪು ಕಾಯ್ದಿರಿಸಲ್ಪಟ್ಟಿತ್ತು.

ಆದರೆ, ಇದೀಗ ಸುಪ್ರೀಂ ಕೋರ್ಟ್ ತಮಿಳುನಾಡು ಸರ್ಕಾರದ ಆ ಮರುಪರಿಶೀಲನಾ ಅರ್ಜಿಯನ್ನೂ ಸಹ ತಿರಸ್ಕರಿಸಿದೆ ಎಂದು ಸಭೆಯಲ್ಲಿ ಅಧಿಕಾರಿಗಳು ಸಿಎಂಗೆ ವಿವರಿಸಿದರು.

## ಸಿದ್ದರಾಮಯ್ಯ ದೆಹಲಿಗೆ

ನವದೆಹಲಿ: ರಾಜ್ಯದಲ್ಲಿ ನಾಯಕತ್ವ ಬದಲಾವಣೆಗೆ ಕೊನೆಗೂ ಮುಹೂರ್ತ ಫಿಕ್ಸ್ ಆಯ್ತಾ,,? ಇಂತಹದ್ದೊಂದು ಪ್ರಶ್ನೆಗೆ ಕಾರಣ ಸಿಎಂ ಸಿದ್ದರಾಮಯ್ಯ ಅವರಿಗೆ ಹೈಕಮಾಂಡ್ ನಾಯಕರು ಬುಲಾವ್ ನೀಡಿದ್ದು. ಮಂಗಳವಾರ (ಮೇ 26) ದೆಹಲಿಗೆ ಬರುವಂತೆ ಸಿಎಂ ಸಿದ್ದರಾಮಯ್ಯಗೆ ಹೈಕಮಾಂಡ್ ಸೂಚನೆ ನೀಡಿದೆ. ಹೀಗಾಗೀ ಈ ವಿಚಾರದ ಬಗ್ಗೆ ಚರ್ಚೆ ಕುತೂಹಲ ಹೆಚ್ಚಿಸಿದೆ.

ದೆಹಲಿ ಭೇಟಿ ವೇಳೆ ನಾಯಕತ್ವ ಬದಲಾವಣೆ ಬಗ್ಗೆ ಚರ್ಚೆ ಆಗಲಿದ್ಯಾ ಅಥಾವ ಸಂಪುಟ ಪುನರ್ ರಚನೆ ಬಗ್ಗೆ ಚರ್ಚೆ ಆಗಲಿದ್ಯಾ ಎನ್ನುವ ಪ್ರಶ್ನೆ ಇದೆ. ಈ ನಡುವೆ ಇದ್ಯಾವುದು ಅಲ್ಲ ಅಂತಾ ರಾಜ್ಯಸಭೆ ವಿಧಾನಪರಿಷತ್ ಅಭ್ಯರ್ಥಿಗಳ ಆಯ್ಕೆ ಬಗ್ಗೆ ಚರ್ಚೆ ನಡೆಲಿದ್ಯಾ ಎನ್ನುವ ಕುತೂಹಲವೂ ಹೆಚ್ಚಿದೆ.

ರಾಜ್ಯದಲ್ಲಿ ನಾಯಕತ್ವದ ಬದಲಾವಣೆ ಬಗ್ಗೆ ಹಲವು ತಿಂಗಳಿಂದ ಚರ್ಚೆ ನಡೆಯುತ್ತಿದೆ. ಇಂದು ನಾಳೆ ಎನ್ನುವಂತಿದ್ದ ಪರಿಸ್ಥಿತಿ ಈಗ ಬದಲಾದಂತೆ ಕಾಣ್ತಿದೆ. ಸಿಎಂ ಸಿದ್ದರಾಮಯ್ಯ ಅವರಿಗೆ ಹೈಕಮಾಂಡ್ ನಾಯಕರು ಬುಲಾವ್ ನೀಡಿದ್ದಾರೆ ಎಂದು ಉನ್ನತ ಮೂಲಗಳು ಹೇಳಿವೆ. ಹೀಗಾಗೀ ಹೈಕಮಾಂಡ್ ನಾಯಕರು ಯಾವ ವಿಚಾರದ ಬಗ್ಗೆ ಸಿಎಂ ಜೊತೆಗೆ ಚರ್ಚಿಸಲಿದ್ದಾರೆ ಎನ್ನುವ ಕುತೂಹಲ ಹೆಚ್ಚಿಸಿದೆ.

ಮೂಲಗಳ ಪ್ರಕಾರ ಮಂಗಳವಾರ ಬೆಳಗ್ಗೆ 11 ಗಂಟೆಗೆ ಸಭೆ ಕರೆಯಲಾಗಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಹಾಗೂ ಸಂಘಟನಾ ಪ್ರಧಾನ ಕಾರ್ಯದರ್ಶಿ ಕೆ.ಸಿ ವೇಣುಗೋಪಾಲ್ ಸಮ್ಮುಖದಲ್ಲಿ ಸಭೆ ನಡೆಯಲಿದೆ ಎನ್ನಲಾಗುತ್ತಿದೆ.

ಈ ನಡುವೆ ಡಿ.ಕೆ ಶಿವಕುಮಾರ್ ಗೆ ಬುಲಾವ್ ನೀಡಿದೆ ಎನ್ನಲಾಗುತ್ತಿದೆ ಆದರೂ ಸಭೆಯಲ್ಲಿ ಭಾಗಿಯಾಗಲೂ ಅವರು ನಿರಾಕರಿಸಿದ್ದಾರೆ ಎನ್ನಲಾಗುತ್ತಿದೆ. ಹೈಕಮಾಂಡ್ ರಾಜ್ಯಸಭೆ ಚುನಾವಣೆಗೆ ಅಭ್ಯರ್ಥಿಗಳ ಆಯ್ಕೆ ಹಿನ್ನಲೆ ಕರೆದಿದೆ ಎಂದು ಡಿಸಿಎಂ ಮೂಲಗಳು ಹೇಳ್ತಿದ್ದು, ಕೆಪಿಸಿಸಿ ಅಧ್ಯಕ್ಷರು ಆಗಿರುವ ಹಿನ್ನಲೆ ಅವರಿಗೆ ಆಹ್ವಾನ ನೀಡಿದೆ ಎನ್ನಲಾಗಿದೆ.

ಇನ್ನೂ ಹೈಕಮಾಂಡ್ ಬುಲಾವ್ ಬಗ್ಗೆ ಮಾತನಾಡಿದ ಡಿಸಿಎಂ ಡಿಕೆ ಶಿವಕುಮಾರ್, ನನಗೆ ಯಾವುದೇ ಕರೆ ಬಂದಿಲ್ಲ. ಸಿಎಂಗೆ ಕರೆಸಿದ್ದಾರೆ ಅನ್ನೋದೂ ಗೊತ್ತಿಲ್ಲ. ನನಗಂತೂ ಕರೆದಿಲ್ಲ, ಸಿಎಂನ ಕರೆದಿರೋದು ಗೊತ್ತಿಲ್ಲ. ಯಾವ ವಿಚಾರಕ್ಕೆ ಕರೆದಿದ್ದಾರೆ ಗೊತ್ತಿಲ್ಲ ಅಂತ ಹೇಳಿ ಜಾರಿಕೊಂಡಿದ್ದಾರೆ.

## ಮೂರು ದಿನ ನಿಷೇಧಾಜ್ಞೆ

ಕಾರವಾರ: ಉತ್ತರ ಕನ್ನಡ ಜಿಲ್ಲೆಯ ಭಟ್ಕಳದಲ್ಲಿ ಮೂರಿನಕಟ್ಟೆ ಮರುನಿರ್ಮಾಣದ ವಿಚಾರವಾಗಿ ಎರಡು ಸಮುದಾಯಗಳ ನಡುವೆ ತೀವ್ರ ಉದ್ವಿಗ್ನ ವಾತಾವರಣ ನಿರ್ಮಾಣವಾಗಿದೆ. ಕ್ಷಣಕ್ಷಣಕ್ಕೂ ಉದ್ವಿಗ್ನ ವಾತಾವರಣ ಸೃಷ್ಟಿಯಾಗುತ್ತಿರುವ ಹಿನ್ನಲೆ ಇಂದಿನಿಂದ ಮೂರು ದಿನಗಳವರೆಗೆ ನಿಷೇಧಾಜ್ಞೆ ಜಾರಿ ಮಾಡಲಾಗಿದೆ.

ಮೇ 25ರಿಂದ 27ರವರೆಗೆ ಭಟ್ಕಳ ಪಟ್ಟಣ ಹಾಗೂ ಜಾಲಿ ಪಂಚಾಯತ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿ ಮಾಡಲಾಗಿದ್ದು, ಐದು ಅಥವಾ ಅದಕ್ಕಿಂದ ಹೆಚ್ಚು ಜನರು ಗುಂಪುಗೂಡುವುದನ್ನು ನಿಷೇಧಿಸಿ ಭಟ್ಕಳ ಎಸಿಯಿಂದ ಆದೇಶಿಸಿದ್ದಾರೆ.

ಮೂರಿನಕಟ್ಟೆಯನ್ನು ರಾಷ್ಟ್ರೀಯ ಹೆದ್ದಾರಿ ಚತುಷ್ಪಥ ಕಾಮಗಾರಿಯ ಅಗಲೀಕರಣದ ಸಂದರ್ಭದಲ್ಲಿ ತೆರವುಗೊಳಿಸಲಾಗಿತ್ತು. ಆದರೆ, ಹೆದ್ದಾರಿ ಕಾಮಗಾರಿ ಮುಕ್ತಾಯಗೊಂಡ ಬಳಿಕ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಸುಪರ್ದಿಯಲ್ಲಿರುವ ಅದೇ ಜಾಗದಲ್ಲಿ ಹಿಂದೂ ಕಾರ್ಯಕರ್ತರು ಕಟ್ಟೆಯನ್ನು ಮರುನಿರ್ಮಾಣ ಮಾಡಿದ್ದರು. ಈ ಮರುನಿರ್ಮಾಣಕ್ಕೆ ಮುಸ್ಲಿಂ ಸಂಘಟನೆಗಳು ಹಾಗೂ ಸಮುದಾಯದ ಪ್ರಮುಖರಿಂದ ತೀವ್ರ ವಿರೋಧ ವ್ಯಕ್ತವಾಗಿ, ಕಟ್ಟೆಯನ್ನು ತೆರವುಗೊಳಿಸುವಂತೆ ಆಗ್ರಹಿಸಿದರು.

ಪದ್ಮ ವಿಭೂಷಣ ಪ್ರಶಸ್ತಿ ಪಡೆದವರಲ್ಲಿ ಖ್ಯಾತ ನಟ ಧರ್ಮೇಂದ್ರ ಸಿಂಗ್ ದಿಯೋಲ್ (ಮರಣೋತ್ತರ) ಪ್ರಮುಖರಾಗಿದ್ದಾರೆ. ಆರು ದಶಕಗಳ ಕಾಲ ಭಾರತೀಯ ಚಿತ್ರರಂಗದಲ್ಲಿ ಅಪಾರ ಜನಪ್ರಿಯತೆ ಪಡೆದಿದ್ದ ಅವರು 300ಕ್ಕೂ ಹೆಚ್ಚು ಚಿತ್ರಗಳಲ್ಲಿ ಅಭಿನಯಿಸಿದ್ದರು. 'ಶೋಲೆ' ಚಿತ್ರದಲ್ಲಿನ ಅವರ ಪಾತ್ರ ವಿಶೇಷವಾಗಿ ಜನಮನ ಗೆದ್ದಿತ್ತು. ಭಾರತೀಯ ಶಾಸ್ತ್ರೀಯ ಸಂಗೀತ ಕ್ಷೇತ್ರಕ್ಕೆ ಅಮೂಲ್ಯ ಕೊಡುಗೆ ನೀಡಿದ ವೈಯೊಲಿನ್ ವಾದಕಿ ಡಾ. ಎನ್. ರಾಜಂ ಅವರಿಗೆ ಪದ್ಮ ವಿಭೂಷಣ ಪ್ರಶಸ್ತಿ ಪ್ರದಾನ ಮಾಡಲಾಯಿತು.

# 66 ಗಣ್ಯರಿಗೆ ಪದ್ಮಪ್ರಶಸ್ತಿ







ನವದೆಹಲಿ: ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸೋಮವಾರ ರಾಷ್ಟ್ರಪತಿ ಭವನದಲ್ಲಿ ನಡೆದ ನಾಗರಿಕ ಗೌರವ ಪ್ರದಾನ ಸಮಾರಂಭದಲ್ಲಿ ಕಲೆ, ಸಾಹಿತ್ಯ, ಸಾರ್ವಜನಿಕ ಜೀವನ, ವೈದ್ಯಕೀಯ, ಶಿಕ್ಷಣ, ಕ್ರೀಡೆ, ಉದ್ಯಮ ಹಾಗೂ ಸಮಾಜಸೇವೆಯ ವಿವಿಧ ಕ್ಷೇತ್ರಗಳಲ್ಲಿ ಅಪೂರ್ವ ಸೇವೆ ಸಲ್ಲಿಸಿದ ಗಣ್ಯರಿಗೆ ಪದ್ಮ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು.

ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಗಳಲ್ಲೊಂದಾದ ಪದ್ಮ ಪ್ರಶಸ್ತಿಗಳು ಸಮಾಜ ಹಾಗೂ ರಾಷ್ಟ್ರದ ಅಭಿವೃದ್ಧಿಗೆ ವಿಶಿಷ್ಟ ಕೊಡುಗೆ ನೀಡಿದ ಸಾಧಕರನ್ನು ಗುರುತಿಸಿ ಗೌರವಿಸುವ ಉದ್ದೇಶ ಹೊಂದಿವೆ. ಈ ವರ್ಷದ ಸಮಾರಂಭದಲ್ಲಿ ಪದ್ಮ ವಿಭೂಷಣ, ಪದ್ಮ ಭೂಷಣ ಮತ್ತು ಪದ್ಮಶ್ರೀ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗಿದ್ದು, ನಿಧನರಾದ ಕೆಲ ಗಣ್ಯರಿಗೂ ಮರಣೋತ್ತರವಾಗಿ ಪ್ರಶಸ್ತಿಗಳನ್ನು ನೀಡಲಾಗಿದೆ.

ಈ ಬಾರಿ ಕೇಂದ್ರ ಸರ್ಕಾರ ಒಟ್ಟು 131 ಪದ್ಮ ಪ್ರಶಸ್ತಿಗಳನ್ನು ಘೋಷಿಸಿದ್ದು, ಅವುಗಳಲ್ಲಿ 5 ಪದ್ಮ ವಿಭೂಷಣ, 13 ಪದ್ಮ ಭೂಷಣ ಮತ್ತು 113 ಪದ್ಮಶ್ರೀ ಪ್ರಶಸ್ತಿಗಳು ಸೇರಿವೆ. ಸಮಾರಂಭದ ಮೊದಲ ಹಂತದಲ್ಲಿ 66 ಗಣ್ಯರಿಗೆ ಪ್ರಶಸ್ತಿಗಳನ್ನು ವಿತರಿಸಲಾಯಿತು.

ಪದ್ಮ ವಿಭೂಷಣ ಪ್ರಶಸ್ತಿ ಪಡೆದವರಲ್ಲಿ ಖ್ಯಾತ ನಟ ಧರ್ಮೇಂದ್ರ ಸಿಂಗ್ ದಿಯೋಲ್ (ಮರಣೋತ್ತರ) ಪ್ರಮುಖರಾಗಿದ್ದಾರೆ. ಆರು ದಶಕಗಳ ಕಾಲ ಭಾರತೀಯ ಚಿತ್ರರಂಗದಲ್ಲಿ ಅಪಾರ ಜನಪ್ರಿಯತೆ ಪಡೆದಿದ್ದ ಅವರು 300ಕ್ಕೂ ಹೆಚ್ಚು ಚಿತ್ರಗಳಲ್ಲಿ ಅಭಿನಯಿಸಿದ್ದರು. 'ಶೋಲೆ' ಚಿತ್ರದಲ್ಲಿನ ಅವರ ಪಾತ್ರ ವಿಶೇಷವಾಗಿ ಜನಮನ ಗೆದ್ದಿತ್ತು.

ಭಾರತೀಯ ಶಾಸ್ತ್ರೀಯ ಸಂಗೀತ ಕ್ಷೇತ್ರಕ್ಕೆ ಅಮೂಲ್ಯ ಕೊಡುಗೆ ನೀಡಿದ ವೈಯೊಲಿನ್ ವಾದಕಿ ಡಾ. ಎನ್. ರಾಜಂ ಅವರಿಗೆ ಪದ್ಮ ವಿಭೂಷಣ ಪ್ರಶಸ್ತಿ ಪ್ರದಾನ ಮಾಡಲಾಯಿತು. "ಗಾಯಕಿ ಅಂಗ" ಶೈಲಿಯನ್ನು ವೈಯೊಲಿನ್‌ನಲ್ಲಿ ರೂಪಿಸಿ ಜಗತ್ತಿನ ಮೆಚ್ಚುಗೆ ಪಡೆದ ಅವರು "ಸಿಂಗಿಂಗ್ ವೈಯೊಲಿನ್" ಎಂದೇ ಪ್ರಸಿದ್ಧರಾಗಿದ್ದಾರೆ.

ಪ್ರಾಚೀನ ಅವಧಾನ ಕಲೆಯನ್ನು ಪುನರುಜ್ಜೀವನಗೊಳಿಸಿ ಜನಪ್ರಿಯಗೊಳಿಸಿದ ಪಂಡಿತ, ಲೇಖಕ ಹಾಗೂ ಸಾಂಸ್ಕೃತಿಕ ಚಿಂತಕ ಶತಾವಧಾನಿ ಡಾ. ಆರ್. ಗಣೇಶ್ ಅವರಿಗೆ ಪದ್ಮ ಭೂಷಣ ಪ್ರಶಸ್ತಿ ನೀಡಿ ಗೌರವಿಸಲಾಯಿತು. 1,300ಕ್ಕೂ ಹೆಚ್ಚು ಅವಧಾನ ಕಾರ್ಯಕ್ರಮಗಳನ್ನು ನಡೆಸಿರುವ ಅವರು ಸಾಹಿತ್ಯ, ರಂಗಭೂಮಿ ಹಾಗೂ ಸಂಸ್ಕೃತಿ ಸಂರಕ್ಷಣೆಯಲ್ಲಿ ಮಹತ್ವದ ಸೇವೆ ಸಲ್ಲಿಸಿದ್ದಾರೆ.

ಉತ್ತರಾಖಂಡದ ಮಾಜಿ ರಾಜ್ಯಪಾಲ ಭಗತ್ ಸಿಂಗ್ ಕೊಶ್ಯಾರಿ, ಉದ್ಯಮಿ ಉದಯ್ ಕೋಟಕ್, ಹಿರಿಯ ವೈದ್ಯ ಡಾ. ಕೆ.ಆರ್. ಪಳನಿಸ್ವಾಮಿ ಹಾಗೂ ಜಾಹೀರಾತು ಕ್ಷೇತ್ರದ ಖ್ಯಾತ ವ್ಯಕ್ತಿ ಪಿಯೂಷ್ ಪಾಂಡೆ (ಮರಣೋತ್ತರ) ಸೇರಿದಂತೆ ಅನೇಕ ಗಣ್ಯರಿಗೆ ಪದ್ಮ ಭೂಷಣ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರ ಪಟ್ಟಿಯಲ್ಲಿ ನಟ ಪ್ರೊಸೆಂಜಿತ್ ಚಟರ್ಜಿ, ಭಾರತೀಯ ಮಹಿಳಾ ಕ್ರಿಕೆಟ್ ತಂಡದ ನಾಯಕಿ ಹರ್ಮನ್‌ಪ್ರೀತ್ ಕೌರ್, ತಬಲಾ ವಿದ್ವಾಂಸ ಕುಮಾರ್ ಬೋಸ್, ನೃತ್ಯಗಾರ್ತಿ ದೀಪಿಕಾ ರೆಡ್ಡಿ, ವಿಜ್ಞಾನಿ ಡಾ. ಎ.ಇ. ಮುತ್ತುನಾಯಗಂ, ಲೇಖಕಿ ಶಿವಶಂಕರಿ ಸೇರಿದಂತೆ ವಿವಿಧ ಕ್ಷೇತ್ರಗಳ ಸಾಧಕರು ಸ್ಥಾನ ಪಡೆದಿದ್ದಾರೆ.

ಇದರ ಜೊತೆಗೆ ಸಮಾಜಸೇವಕರು, ಜಾನಪದ ಕಲಾವಿದರು, ವೈದ್ಯರು, ಪರಿಸರ ಹೋರಾಟಗಾರರು ಹಾಗೂ ಗ್ರಾಮೀಣ ಮಟ್ಟದಲ್ಲಿ ಸೇವೆ ಸಲ್ಲಿಸಿದ ಅನೇಕ ಸಾಧಕರನ್ನು ಪದ್ಮಶ್ರೀ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

## ಎನ್‌ಟಿಎ ವಿರುದ್ಧ ಸುಪ್ರೀಂ ತೀವ್ರ ಅಸಮಾಧಾನ

ನವದೆಹಲಿ: ನೀಟ್–ಯುಜಿ 2026 ಪರೀಕ್ಷೆಯಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ ಆರೋಪಗಳ ಹಿನ್ನೆಲೆ ಸುಪ್ರೀಂ ಕೋರ್ಟ್ ರಾಷ್ಟ್ರೀಯ ಪರೀಕ್ಷಾ ಏಜೆನ್ಸಿ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ.

2024ರ ಪ್ರಕರಣದಲ್ಲಿ ನೀಡಿದ್ದ ನಿರ್ದೇಶನಗಳ ಹೊರತಾಗಿಯೂ ರಾಷ್ಟ್ರೀಯ ಪರೀಕ್ಷಾ ಏಜೆನ್ಸಿ ಯಾವುದೇ ಪಾಠ ಕಲಿತಿಲ್ಲ ಎಂಬುದು ದುಃಖಕರ ಸಂಗತಿ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

ನ್ಯಾಯಮೂರ್ತಿಗಳಾದ ಪಿ.ಎಸ್. ನರಸಿಂಹ ಹಾಗೂ ಅಲೋಕ್ ಅರಾಧೆ ಅವರ ವಿಭಾಗೀಯ ಪೀಠವು ಕೇಂದ್ರ ಸರ್ಕಾರ ಹಾಗೂ ರಾಷ್ಟ್ರೀಯ ಪರೀಕ್ಷಾ ಏಜೆನ್ಸಿಗೆ ನೋಟಿಸ್ ಜಾರಿ ಮಾಡಿದೆ.

ಯುನೈಟೆಡ್ ಡಾಕ್ಟರ್ಸ್ ಫ್ರಂಟ್ ಸೇರಿದಂತೆ ಹಲವು ಅರ್ಜಿಗಳ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ನಡೆಸುತ್ತಿದೆ. ಅರ್ಜಿಯಲ್ಲಿ ರಾಷ್ಟ್ರೀಯ ಪರೀಕ್ಷಾ ಏಜೆನ್ಸಿಯನ್ನು ವಿಸರ್ಜನೆಗೊಳಿಸಿ, ಮುಂದಿನ ಪರೀಕ್ಷಾ ಪ್ರಕ್ರಿಯೆಯನ್ನು ನಿವೃತ್ತ ಸುಪ್ರೀಂ ಕೋರ್ಟ್ ನ್ಯಾಯಾಧೀಶರ ನೇತೃತ್ವದಲ್ಲಿ ಮೇಲ್ವಿಚಾರಣೆ ನಡೆಸುವಂತೆ ಮನವಿ ಮಾಡಲಾಗಿದೆ.

ಇದಲ್ಲದೆ, 2024ರಲ್ಲಿ ನೀಡಿದ್ದ ನಿರ್ದೇಶನಗಳು ಮತ್ತು ಸಮಿತಿಯ ಶಿಫಾರಸುಗಳ ಅನುಸರಣೆಯ ಕುರಿತು ಸಂಪೂರ್ಣ ವಿವರ ನೀಡುವಂತೆ ನ್ಯಾಯಾಲಯ ಎನ್‌ಟಿಎಗೆ ಸೂಚಿಸಿದೆ. ಆ ಶಿಫಾರಸುಗಳನ್ನು ಜಾರಿಗೆ ತರಲು ಕೈಗೊಂಡ ಕ್ರಮಗಳ ಬಗ್ಗೆ ವಿವರಿಸುವ ಅಫಿಡವಿಟ್ ಸಲ್ಲಿಸುವಂತೆ ಆದೇಶಿಸಿದೆ.

ಫೆಡರೇಷನ್ ಆಫ್ ಆಲ್ ಇಂಡಿಯಾ ಮೆಡಿಕಲ್ ಅಸೋಸಿಯೇಷನ್ ಸಲ್ಲಿಸಿದ ಅರ್ಜಿಯಲ್ಲಿ ಎನ್‌ಟಿಎಯನ್ನು ಪುನರ್‌ರಚನೆ ಮಾಡುವುದು ಅಥವಾ ಅದರ ಬದಲಿಗೆ ಹೊಸ ಸ್ವಾಯತ್ತ ಸಂಸ್ಥೆ ರಚಿಸುವಂತೆ ಕೋರಲಾಗಿದೆ.

ಅರ್ಜಿಯಲ್ಲಿ ಉನ್ನತ ಮಟ್ಟದ ಮೇಲ್ವಿಚಾರಣಾ ಸಮಿತಿಯನ್ನು ರಚಿಸುವ ಬೇಡಿಕೆಯೂ ಇದ್ದು, ಆ ಸಮಿತಿಯಲ್ಲಿ ನಿವೃತ್ತ ಸುಪ್ರೀಂ ಕೋರ್ಟ್ ನ್ಯಾಯಾಧೀಶರು, ಸೈಬರ್ ಭದ್ರತಾ ತಜ್ಞರು ಹಾಗೂ ಫಾರೆನ್ಸಿಕ್ ವಿಜ್ಞಾನಿಗಳನ್ನು ಸೇರಿಸಬೇಕು ಎಂದು ಮನವಿ ಮಾಡಲಾಗಿದೆ.

ನೀಟ್ ಪರೀಕ್ಷಾ ಪ್ರಕ್ರಿಯೆಯ ಪಾರದರ್ಶಕತೆ ಮತ್ತು ವಿಶ್ವಾಸಾರ್ಹತೆಯನ್ನು ಕಾಪಾಡುವ ನಿಟ್ಟಿನಲ್ಲಿ ಸುಪ್ರೀಂ ಕೋರ್ಟ್ ಕೈಗೊಳ್ಳುವ ಮುಂದಿನ ಕ್ರಮಗಳತ್ತ ವಿದ್ಯಾರ್ಥಿಗಳು ಮತ್ತು ಪೋಷಕರು ಹೆಚ್ಚಿನ ನಿರೀಕ್ಷೆಯಿಂದ ಕಾಯುತ್ತಿದ್ದಾರೆ.



ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವನ್ನು ನಿರ್ವಹಿಸುತ್ತಿರುವ ಬಿಐಎಎಲ್ ಸಂಸ್ಥೆಯಲ್ಲಿ ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮ ಹೊಂದಿರುವ 13 ಶೇಕಡಾ ಹೂಡಿಕೆಗೆ 2025-26ನೇ ಸಾಲಿನಲ್ಲಿ 16.49 ಕೋಟಿ ಲಾಭಾಂಶ ಲಭಿಸಿದೆ. ಈ ಹಿನ್ನೆಲೆಯಲ್ಲಿ ಲಾಭಾಂಶದ ಚೆಕ್ ಅನ್ನು ಕಾವೇರಿ ನಿವಾಸದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಹಸ್ತಾಂತರಿಸಲಾಯಿತು. ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮದ ಪರವಾಗಿ ಬಿಐಎಎಲ್ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಡಾ. ಹರಿ ಕೆ. ಮರಾರ್ ಅವರು ಚೆಕ್ ಹಸ್ತಾಂತರಿಸಿದರು.

## ಮತ್ತೆ ತೈಲ ಬೆಲೆ ಏರಿಕೆ



ನವದೆಹಲಿ: ದೇಶದಲ್ಲಿ ಮತ್ತೆ ಇಂಧನ ದರ ಏರಿಕೆಯ ಹೊರೆ ಜನರ ಮೇಲೆ ಬಿದ್ದಿದೆ. ಸೋಮವಾರ ಪೆಟ್ರೋಲ್ ದರವನ್ನು ಲೀಟರ್‌ಗೆ ರೂ.2.61 ಹಾಗೂ ಡೀಸೆಲ್ ದರವನ್ನು ರೂ.2.71 ಹೆಚ್ಚಿಸಲಾಗಿದ್ದು, ಕಳೆದ ಎರಡು ವಾರಗಳಲ್ಲಿ ಇದು ನಾಲ್ಕನೇ ಬಾರಿ ನಡೆದ ದರ ಏರಿಕೆಯಾಗಿದೆ.

ಮೇ 15ರಿಂದ ಆರಂಭವಾದ ಈ ಸರಣಿ ಏರಿಕೆಯಿಂದ ಒಟ್ಟಾರೆ ಪೆಟ್ರೋಲ್ ಮತ್ತು ಡೀಸೆಲ್ ದರಗಳಲ್ಲಿ ಸುಮಾರು ರೂ.7.5ರಷ್ಟು ಹೆಚ್ಚಳವಾಗಿರುವುದು ಸಾಮಾನ್ಯ ಜನರಲ್ಲಿ ಆತಂಕ ಮೂಡಿಸಿದೆ.

ಇಂಧನ ದರ ಏರಿಕೆಯಿಂದ ಸಾರಿಗೆ ವೆಚ್ಚ, ಆಹಾರ ವಸ್ತುಗಳ ಬೆಲೆ, ಕೈಗಾರಿಕಾ ಉತ್ಪಾದನಾ ವೆಚ್ಚ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಬೆಲೆ ಏರಿಕೆಯ ಭೀತಿ ಎದುರಾಗಿದೆ.

ಹೊಸ ದರ ಪರಿಷ್ಕರಣೆಯ ನಂತರ ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಪೆಟ್ರೋಲ್ ದರ ಲೀಟರ್‌ಗೆ ರೂ.102.12ಕ್ಕೆ ಏರಿಕೆಯಾದರೆ, ಡೀಸೆಲ್ ರೂ.95.20ಕ್ಕೆ ತಲುಪಿದೆ. ಮುಂಬೈನಲ್ಲಿ ಪೆಟ್ರೋಲ್ ರೂ.111.21 ಹಾಗೂ ಡೀಸೆಲ್ ರೂ.97.83 ಆಗಿದೆ.

ಕೊಲ್ಕತ್ತಾದಲ್ಲಿ ಪೆಟ್ರೋಲ್ ರೂ.113.51 ಮತ್ತು ಡೀಸೆಲ್ ರೂ.99.82 ದರಕ್ಕೆ ಮಾರಾಟವಾಗುತ್ತಿದೆ. ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಪೆಟ್ರೋಲ್ ದರ ರೂ.108.09 ಹಾಗೂ ಡೀಸೆಲ್ ರೂ.108.09 ಏರಿಕೆಯಾಗಿದೆ. ಇದೇ ರೀತಿ ಚೆನ್ನೈನಲ್ಲಿ ಪೆಟ್ರೋಲ್ ರೂ, 107.77 ಹಾಗೂ ಡೀಸೆಲ್ ರೂ.99.55ಕ್ಕೆ ಏರಿಕೆಯಾಗಿದೆ.

ರಾಜ್ಯ ಸರ್ಕಾರಗಳ ಸ್ಥಳೀಯ ತೆರಿಗೆಗಳು ಬೇರೆಬೇರೆ ಇರುವುದರಿಂದ ಪ್ರತಿ ರಾಜ್ಯದಲ್ಲೂ ದರಗಳಲ್ಲಿ ವ್ಯತ್ಯಾಸ ಕಂಡು ಬರುತ್ತಿದೆ. ಮೇ 15ರಂದು ಮೊದಲ ಬಾರಿಗೆ ಪೆಟ್ರೋಲ್ ಮತ್ತು ಡೀಸೆಲ್ ದರಗಳನ್ನು ತಲಾ ರೂ.3ರಷ್ಟು ಹೆಚ್ಚಿಸಲಾಗಿತ್ತು. ಬಳಿಕ ಮೇ 19ರಂದು ಸುಮಾರು 90 ಪೈಸೆ ಏರಿಕೆ ಮಾಡಲಾಗಿತ್ತು. ಮೇ 23ರಂದು ಮತ್ತೆ ಪೆಟ್ರೋಲ್‌ಗೆ 87 ಪೈಸೆ ಮತ್ತು ಡೀಸೆಲ್‌ಗೆ 91 ಪೈಸೆ ಹೆಚ್ಚಳವಾಗಿತ್ತು.

## ಗೃಹಲಕ್ಷ್ಮಿಗೆ ಬಯೋಮೆಟ್ರಿಕ್

ಬೆಂಗಳೂರು: ಸರ್ಕಾರದ ಐದು ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹಲಕ್ಷ್ಮೀ ಯೋಜನೆಯಲ್ಲಿ ಮೇಜರ್ ಬದಲಾವಣೆ ತರುವುದಕ್ಕೆ ಸರ್ಕಾರ ಮುಂದಾಗಿದೆ. ಗೃಹಲಕ್ಷ್ಮೀ ಯೋಜನೆ ಹಣ ದುರ್ಬಳಕೆ ಆಗುವುದನ್ನು ತಡೆಗಟ್ಟಲು ಬಯೋಮೆಟ್ರಿಕ್ ಜಾರಿಗೆ ನಿರ್ಧಾರ ಮಾಡಿದೆ.

ಗೃಹಲಕ್ಷ್ಮೀ ಹಣ ದುರಪಯೋಗ ತಡೆಗಟ್ಟಲು ಬಯೋಮೆಟ್ರಿಕ್ ಬರಲಿದೆ. ಬಯೋಮೆಟ್ರಿಕ್ ತರಲು ಎಲ್ಲಾ ತಯಾರಿ ಮುಕ್ತಾಯ ಆಗಿದೆ. ಶೀಘ್ರದಲ್ಲೇ ಬಯೋಮೆಟ್ರಿಕ್ ಜಾರಿ ಆಗಲಿದೆ. ಅನರ್ಹರಿಗೆ ಗೃಹಲಕ್ಷ್ಮಿ ಹಣ ಪಾವತಿಯಾಗೋದನ್ನ ತಡೆಗಟ್ಟಲು ಈ ಕ್ರಮ ಕೈಗೊಳ್ಳಲಾಗಿದೆ. ಸತ್ತವರ ಅಕೌಂಟ್‌ಗೆ ಹಣ ಪಾವತಿ ಆಗೋದನ್ನ ತಡೆಗಟ್ಟಲು ಸರ್ಕಾರ ಈ ವ್ಯವಸ್ಥೆ ಜಾರಿಗೆ ಮುಂದಾಗಿದೆ. 2 ಲಕ್ಷ ಮಂದಿ ಮೃತಪಟ್ಟಿದ್ದರೂ ಫಲಾನುಭವಿಗಳಾಗಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ತಿಳಿಸಿದೆ. ಸುಮಾರು 125 ಕೋಟಿ ಹಣ ಫಲಾನುಭವಿಗಳ ಖಾತೆಯಿಂದ ಡ್ರಾ ಆಗಿಲ್ಲ. ಹೀಗಾಗಿ, ಗೃಹಲಕ್ಷ್ಮೀ ಯೋಜನೆಗೆ ಬಯೋಮೆಟ್ರಿಕ್ ಜಾರಿಗೆ ನಿರ್ಧಾರ ಮಾಡಲಾಗಿದೆ. ಇದು ಒನ್ ಟೈಂ ಬಯೋಮೆಟ್ರಿಕ್ ಪದ್ಧತಿ.

ಭಾರತ ಸಾರಥಿ
24/05/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಬಿದ್ದ ಮರ ಹಾಗೂ ಅಪಾಯಕಾರಿ ರೆಂಬೆ-ಕೊಂಬೆ ತೆರವು ಕಾರ್ಯ ಚುರುಕು



ಬೆಂಗಳೂರು

ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಮಳೆ-ಗಾಳಿಯಿಂದ ಬಿದ್ದ ಮರಗಳು ಹಾಗೂ ಅಪಾಯಕಾರಿ ರೆಂಬೆ-ಕೊಂಬೆಗಳನ್ನು ತೆರವು ಮಾಡುವ ಕಾರ್ಯವನ್ನು ಚುರುಕುಗೊಳಿಸಲಾಗಿದೆ ಎಂದು ಕೇಂದ್ರ ನಗರ ಪಾಲಿಕೆ ಆಯುಕ್ತ ರಾಜೇಂದ್ರ ಚೋಳನ್ ತಿಳಿಸಿದ್ದಾರೆ.

ಆಯುಕ್ತರ ಕಟ್ಟುನಿಟ್ಟಿನ ನಿರ್ದೇಶನದ ಮೇರೆಗೆ ಅಗತ್ಯ ಸಲಕರಣೆಗಳು, ನುರಿತ ಸಿಬ್ಬಂದಿ ಹಾಗೂ ಕ್ರೇನ್‌ಗಳ ಸಹಾಯದಿಂದ ತೆರವು ಕಾರ್ಯವನ್ನು ವೇಗವಾಗಿ ಕೈಗೊಳ್ಳಲಾಗುತ್ತಿದೆ ಎಂದು ಅವರು ಹೇಳಿದರು.

"2026ರ ಏಪ್ರಿಲ್ 29ರಿಂದ ಇಲ್ಲಿಯವರೆಗೆ ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿ 260 ಮರಗಳು ಹಾಗೂ 761 ರೆಂಬೆ-ಕೊಂಬೆಗಳು ಧರೆಗುರುಳಿವೆ. ಈಗಾಗಲೇ ಬಹುತೇಕ ಎಲ್ಲಾ ಮರ ಹಾಗೂ ರೆಂಬೆ-ಕೊಂಬೆಗಳನ್ನು ತೆರವುಗೊಳಿಸಲಾಗಿದೆ. ಉಳಿದಿರುವ ಸ್ಥಳಗಳಲ್ಲೂ ಕಾರ್ಯ ಮುಂದುವರಿದಿದೆ," ಎಂದು ಮಾಹಿತಿ ನೀಡಿದರು.

ಸಾರ್ವಜನಿಕರ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು, ಮಳೆ-ಗಾಳಿಯಿಂದ ಬೀಳುವ ಅಪಾಯ ಇರುವ ಮರಗಳು ಹಾಗೂ ರೆಂಬೆ-ಕೊಂಬೆಗಳನ್ನು ಮುಂಜಾಗ್ರತಾ ಕ್ರಮವಾಗಿ ತೆರವುಗೊಳಿಸಲಾಗುತ್ತಿದೆ ಎಂದು ಹೇಳಿದರು.

ಇನ್ನೂ ಹಲವು ಪ್ರದೇಶಗಳಲ್ಲಿ ಅಪಾಯಕಾರಿ ಮರ ಹಾಗೂ ಬಿದ್ದ ರೆಂಬೆ-ಕೊಂಬೆಗಳನ್ನು ತೆರವುಗೊಳಿಸಿ ಸಾರ್ವಜನಿಕ ಸಂಚಾರಕ್ಕೆ ಅನುವು ಮಾಡಿಕೊಡಲಾಗಿದೆ ಎಂದು ಪಾಲಿಕೆ ತಿಳಿಸಿದೆ.

# ರೈತರು ಸರ್ಕಾರದ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಳ್ಳಲು ಕರೆ



ಗುಡಿಬಂಡೆ

ರೈತರ ಅಭಿವೃದ್ದಿಗಾಗಿ ಸರ್ಕಾರಗಳು ಅನೇಕ ಯೋಜನೆಗಳನ್ನು ಜಾರಿ ಮಾಡಿದ್ದು, ಅವುಗಳನ್ನು ರೈತರು ಸದ್ಬಳಕೆ ಮಾಡಿಕೊಂಡು ಆರ್ಥಿಕವಾಗಿ ಅಭಿವೃದ್ದಿ ಹೊಂದಬೇಕು ಎಂದು ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಕರೆ ನೀಡಿದರು.

ಪಟ್ಟಣದಲ್ಲಿ ರೇಷ್ಮೇ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಅರ್ಹ ರೈತರಿಗೆ ವಿವಿಧ ಕೃಷಿ ಸಲಕರಣೆಗಳ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ದೇಶದ ಆರ್ಥಿಕತೆಯಲ್ಲಿ ರೈತರು ಪ್ರಮುಖ ಪಾತ್ರ ವಹಿಸುತ್ತಾರೆ. ಇಂದು ರೈತ ಇಲ್ಲವಾದರೇ ವಿಶ್ವಕ್ಕೆ ಆಹಾರವೇ ಇಲ್ಲದಂತಾಗುತ್ತದೆ. ಈ ಉದ್ದೇಶದಿಂದ ರೈತರಿಗೆ ಕೃಷಿ, ತೋಟಗಾರಿಕೆ ಹಾಗೂ ರೇಷ್ಮೆ ಇಲಾಖೆಗಳ ಮೂಲಕ ವಿವಿಧ ಸೌಲಭ್ಯಗಳನ್ನು ನೀಡುತ್ತಿದೆ. ಕೃಷಿ ಯಾಂತ್ರೀಕರಣ ಸೇರಿದಂತೆ ಹನಿ ನೀರಾವರಿ, ತುಂತುರು ನೀರಾವರಿ ಘಟಕಗಳನ್ನು ಸಬ್ಸಿಡಿ ದರದಲ್ಲಿ ನೀಡಲಾಗುತ್ತಿದೆ. ಇವುಗಳನ್ನು ಪಡೆಯಲು ರೈತರು ನೇರವಾಗಿ ಅಧಿಕಾರಿಗಳನ್ನು ಭೇಟಿ ಮಾಡಬೇಕು. ಯಾವುದೇ ಮಧ್ಯವರ್ತಿಗಳನ್ನು ನಂಬಿ ಮೋಸ ಹೋಗಬಾರದು. ಅಧಿಕಾರಿಗಳೂ ಸಹ ಅರ್ಹ ರೈತರನ್ನು ಗುರ್ತಿಸಿ ಅವರಿಗೆ ಸೌಲಭ್ಯಗಳನ್ನು ಒದಗಿಸಿಕೊಡಬೇಕು ಎಂದರು. ಈ ವೇಳೆ ತಹಸೀಲ್ದಾರ್‌ಸಿಗ್ಬತ್ತುಲ್ಲಾ, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಕೇಶವರೆಡ್ಡಿ, ರೇಷ್ಮೇ ಇಲಾಖೆಯ ಗಂಗರಾಜು, ಮುಖಂಡರಾದ ಆದಿರೆಡ್ಡಿ, ವಿಕಾಸ್, ಬಾಬು, ಅಂಬರೀಶ್, ದಪ್ಪರ್ತಿ ನಂಜುಂಡ, ಲಕ್ಷ್ಮೀನಾರಾಯಣ, ರಿಯಾಜ್ ಪಾಷ, ನಾಗರಾಜು, ನಾರಾಯಣಸ್ವಾಮಿ ಸೇರಿದಂತೆ ಹಲವರು ಹಾಜರಿದ್ದರು.

## ಮತ್ತೆ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ

ನವದೆಹಲಿ

ವಾಹನ ಸವಾರರಿಗೆ ಮತ್ತೆ ಶಾಕ್ ಎದುರಾಗಿದೆ. 10 ದಿನಗಳಲ್ಲಿ ಮೂರನೇ ಬಾರಿಗೆ ಪೆಟ್ರೋಲ್, ಡೀಸೆಲ್ ದರ ಏರಿಕೆ ಮಾಡಲಾಗಿದೆ. ಶನಿವಾರ ಪೆಟ್ರೋಲ್ 87 ಪೈಸೆ ಮತ್ತು ಡೀಸೆಲ್ 91 ಪೈಸೆ ಏರಿಕೆಯಾಗಿದೆ. ಬೆಂಗಳೂರಿನಲ್ಲಿ ಪೆಟ್ರೋಲ್ ಬೆಲೆ 107.14 ರೂ. ಹಾಗೂ ಡೀಸೆಲ್ ಬೆಲೆ 95.04 ರೂ. ಆಗಿದೆ. ಪೆಟ್ರೋಲ್ ಬೆಲೆ ಈಗ ಲೀಟರ್‌ಗೆ 99.51 ರೂ., ಡೀಸೆಲ್ ಬೆಲೆ ಲೀಟರ್‌ಗೆ 92.49 ರೂ. ಆಗಿದೆ. ಮಧ್ಯಪ್ರಾಚ್ಯ ಸಂಘರ್ಷದಿಂದಾಗಿ ಜಾಗತಿಕ ಮಟ್ಟದಲ್ಲಿ ತೈಲ ಬೆಲೆ ಏರಿಕೆಯಾಗಿದೆ. ಈ ಹಿನ್ನೆಲೆ ಮೇ 15 ರಿಂದ ಈಚೆಗೆ ಸರ್ಕಾರಿ ಸ್ವಾಮ್ಯದ ತೈಲ ಕಂಪನಿಗಳು ದರವನ್ನು ಹೆಚ್ಚಿಸಿವೆ.

# ಬುದ್ಧ ಮತ್ತು ಅಂಬೇಡ್ಕರ್ ತತ್ವ ಆದರ್ಶಗಳನ್ನು ಪ್ರತಿಯೊಬ್ಬರೂ ಪಾಲಿಸಬೇಕು: ಪ್ರೇಮಿಳಾ ನೇಸರ್ಗಿ

**ಬೆಂಗಳೂರು:** ಜಗತ್ತಿಗೆ ಜ್ಞಾನದ ಜ್ಯೋತಿಯನ್ನು ಬೆಳಗಿದ ಬುದ್ಧ ಮತ್ತು ಭಾರತದ ಸಂವಿಧಾನ ಶಿಲ್ಪಿ ಬಿ. ಆರ್. ಅಂಬೇಡ್ಕರ್ ಅವರ ತತ್ವ ಆದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹಿರಿಯ ವಕೀಲರಾದ ಪ್ರೇಮಿಳಾ ನೇಸರ್ಗಿ ಹೇಳಿದರು.

ನಗರದ ನಯನ ಸಭಾಂಗಣದಲ್ಲಿ "ಇದು ನಿಮ್ಮ ವಾಹಿನಿ ಕಲಾ ವೇದಿಕೆ" ವತಿಯಿಂದ ಹಮ್ಮಿಕೊಂಡಿದ್ದ ಬುದ್ಧ ಹಾಗೂ ಬಿ. ಆರ್. ಅಂಬೇಡ್ಕರ್ ಅವರ ಜಯಂತೋತ್ಸವ ಮತ್ತು 22ನೇ ಸಾಂಸ್ಕೃತಿಕ ಸಿಂಚನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

"ಬುದ್ಧನು ಶಾಂತಿಯ ಮೂಲಕವೇ ಜಗತ್ತಿನ ಮನಸ್ಸುಗಳನ್ನು ಗೆದ್ದು ಜ್ಞಾನಜ್ಯೋತಿಯಾಗಿ ಬೆಳಗಿದ ಮಹಾನ್ ವ್ಯಕ್ತಿ. ಅದೇ ರೀತಿ ಬುದ್ಧನ ಮಾರ್ಗದಲ್ಲಿ ನಡೆದ ಬಿ. ಆರ್. ಅಂಬೇಡ್ಕರ್ ಅವರು ಶೋಷಿತರ ಪರವಾಗಿ ಕಾನೂನುಗಳನ್ನು ಜಾರಿಗೆ ತಂದು ಮಹಾನ್ ಚೇತನರಾಗಿದ್ದಾರೆ. ಇವರಿಬ್ಬರ ತತ್ವ ಮತ್ತು ಆದರ್ಶಗಳು ಇಂದಿನ ಪೀಳಿಗೆಗೆ ಅತ್ಯಂತ ಅವಶ್ಯಕ," ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಉಪ ಪೊಲೀಸ್ ಆಯುಕ್ತರಾದ ಡಾ. ಹೆಚ್. ಮಂಜುನಾಥ್ ಬಾಬು ಮಾತನಾಡಿ,





"ನಾವೆಲ್ಲರೂ ಇಂದು ಕಾನೂನಿನ ಅಡಿಯಲ್ಲಿ ಬದುಕುತ್ತಿದ್ದೇವೆ ಎಂದರೆ ಅದಕ್ಕೆ ಪ್ರಮುಖ ಕಾರಣ ಬಿ. ಆರ್. ಅಂಬೇಡ್ಕರ್ ಅವರು. ಬುದ್ಧನ ಶಾಂತಿ ಮಾರ್ಗ ಹಾಗೂ ಅಂಬೇಡ್ಕರ್ ಅವರ ಹೋರಾಟದ ಮನೋಭಾವವನ್ನು ಪ್ರತಿಯೊಬ್ಬರೂ ಮಾದರಿಯಾಗಿ ತೆಗೆದುಕೊಳ್ಳಬೇಕು," ಎಂದರು.

ನಗರದಲ್ಲಿ ಮಾದಕ ವಸ್ತುಗಳ ಹಾವಳಿ ಹೆಚ್ಚಾಗುತ್ತಿರುವ ಹಿನ್ನೆಲೆ ಅದನ್ನು ತಡೆಗಟ್ಟಲು ಪೋಷಕರ ಪಾತ್ರವೂ ಮಹತ್ವದ್ದಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಾಧ್ಯಮ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ಹಿರಿಯ ಪತ್ರಕರ್ತರಾದ ಗಂಡಸಿ ಸದಾನಂದಸ್ವಾಮಿ, ಸುಬ್ರಹ್ಮಣ್ಯ ಹಂಡಿಗೆ ಹಾಗೂ ಶಿವರಾಜ್ ಮೌರ್ಯ ಅವರಿಗೆ "ಮಾಧ್ಯಮ ಸೇವಾ ರತ್ನ" ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಹಿರಿಯ ವಕೀಲರಾದ ಪ್ರೇಮಿಳಾ ನೇಸರ್ಗಿ ಹಾಗೂ ಡಿಸಿಪಿ ಡಾ. ಹೆಚ್. ಮಂಜುನಾಥ್ ಬಾಬು ಅವರಿಗೆ "ಡಾ. ಬಿ.ಆರ್. ಅಂಬೇಡ್ಕರ್ ಪ್ರಶಸ್ತಿ" ನೀಡಿ ಸತ್ಕರಿಸಲಾಯಿತು.


ಇದೇ ವೇಳೆ ಸಂಜೀವಿನಿ ರೇಖಿ ಹೀಲಿಂಗ್ ಸೆಂಟರ್‌ನ ಡಾ. ವಿ. ಭರಣಿ ರಾಜು ಅವರಿಗೆ "ವಿಶಿಷ್ಟ ಸೇವಾ ರತ್ನ" ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಪುಟಾಣಿ ಮಕ್ಕಳು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಟ್ಟು ಪ್ರೇಕ್ಷಕರ ಮನರಂಜಿಸಿದರು. ಈ ಸಂದರ್ಭದಲ್ಲಿ "ಇದು ನಿಮ್ಮ ವಾಹಿನಿ" ಪ್ರಧಾನ ಕಾರ್ಯದರ್ಶಿ ಕಿಶೋರ್ ಕುಮಾರ್ ಕೆ. ಎಸ್., ಕಾರ್ಯಕ್ರಮ ಸಂಯೋಜಕಿ ಚಂದ್ರಿಕಾ ಬಿ. ವಿ. ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಫ್ರೀಡಂ ಬೆಂಗಳೂರು ಹಾಫ್ ಮ್ಯಾರಥಾನ್ 2026 ಯಶಸ್ವಿ

ಬೆಂಗಳೂರು

ಫ್ರೀಡಂ ಹೆಲ್ತಿ ಕುಕ್ಕಿಂಗ್ ಆಯಿಲ್ ಪ್ರಸ್ತುತಪಡಿಸಿದ ಫ್ರೀಡಂ ಬೆಂಗಳೂರು ಹಾಫ್ ಮ್ಯಾರಥಾನ್ 2026ರ 2ನೇ ಆವೃತ್ತಿ ದೇಶದ ವಿವಿಧ ಭಾಗಗಳಿಂದ ಆಗಮಿಸಿದ 6500ಕ್ಕೂ ಹೆಚ್ಚು ಓಟಗಾರರ ಭಾರೀ ಭಾಗವಹಿಸುವಿಕೆಯಿಂದ ಯಶಸ್ವಿಯಾಗಿ ನೆರವೇರಿತು.



ಬೆಂಗಳೂರು ನಗರದ ಐಕಾನಿಕ್ ರಸ್ತೆ ಮಾರ್ಗದಲ್ಲಿ ಆಯೋಜಿಸಲಾದ ಈ ಮ್ಯಾರಥಾನ್‌ನಲ್ಲಿ ಸಾವಿರಾರು ಓಟಗಾರರು ಬೆಳಗಿನ ಜಾವವೇ ಒಂದೇ ಉದ್ದೇಶದೊಂದಿಗೆ ಒಂದಾಗಿದ್ದರು ತಮ್ಮ ಸಾಮರ್ಥ್ಯವನ್ನು ಸವಾಲು ಹಾಕುವುದು, ಆರೋಗ್ಯಕರ ಜೀವನಶೈಲಿಯನ್ನು ಆಚರಿಸುವುದು ಮತ್ತು ಕೇವಲ ಓಟಕ್ಕಿಂತ ದೊಡ್ಡ ಚಳವಳಿಯ ಭಾಗವಾಗುವುದು.

ಅನುಭವಿಗಳಾದ ಅಥ್ಲೀಟ್ಗಳಿಂದ ಹಿಡಿದು ಮೊದಲ ಬಾರಿಗೆ ಓಡಿದವರು, ಫಿಟ್ನೆಸ್ ಪ್ರಿಯರು, ಕಾರ್ಪೊರೇಟ್ ತಂಡಗಳು, ಕುಟುಂಬಗಳು ಹಾಗೂ ವಿವಿಧ ರನ್ನಿಂಗ್ ಸಮುದಾಯಗಳು ಒಂದೇ ವೇದಿಕೆಯಲ್ಲಿ ಸೇರಿ ಉತ್ಸಾಹ, ಶಕ್ತಿ, ಸಂಕಲ್ಪ ಮತ್ತು ಸಮುದಾಯ ಭಾವನೆಯನ್ನು ಮೂಡಿಸಿದವು.

# ಕೋರಮಂಗಲದಲ್ಲಿ ನಟಫ್ ಕೆಫೆ ಪ್ರಾರಂಭ

**ಬೆಂಗಳೂರು:** ಇಬಿಜಿ ಗ್ರೂಪ್ ಬೆಂಗಳೂರಿನ ಕೋರಮಂಗಲದಲ್ಲಿ ನಟಫ್ ಕೆಫೆ ಪ್ರಾರಂಭಿಸಿದ್ದು ಇದು ಇಬಿಜಿ ಗ್ರೂಪ್ ಅಡಿಯಲ್ಲಿ ಆಹಾರ ಮತ್ತು ಗ್ರಾಹಕ ಬ್ರಾಂಡ್ ಪೋರ್ಟ್ ಫೋಲಿಯೊದಲ್ಲಿ ಪ್ರಮುಖ ಮೈಲಿಗಲ್ಲಾಗಿದೆ.

ಬೆಂಗಳೂರಿನ ಅತ್ಯಂತ ಸಕ್ರಿಯ ಫುಡ್, ಸ್ಟಾರ್ಟಪ್, ವಿದ್ಯಾರ್ಥಿ ಮತ್ತು ಜೀವನಶೈಲಿ ತಾಣಗಳಲ್ಲಿ ಒಂದಾದ ಕೋರಮಂಗಲದಲ್ಲಿರುವ ನಟಫ್ ಕೆಫೆಯನ್ನು ತಾಜಾ, ರುಚಿಕರ ಮತ್ತು ಆಲೋಚನಾಯುಕ್ತವಾಗಿ ಸಿದ್ಧಪಡಿಸಿದ ತಿನಿಸಿನ ಆಧುನಿಕ, ಪ್ರೀಮಿಯಂ ಮತ್ತು ಲಭ್ಯವಿರುವ ಡೈನಿಂಗ್ ತಾಣವನ್ನಾಗಿ ರೂಪಿಸಿದೆ.




2200 ಚದರ ಅಡಿ ವಿಸ್ತೀರ್ಣ ಹೊಂದಿರುವ ಈ ಕೆಫೆಯು 40+ ಅತಿಥಿಗಳಿಗೆ ಅವಕಾಶ ಕಲ್ಪಿಸುತ್ತಿದ್ದು ಇದನ್ನು ಡೈನಿಂಗ್, ವರ್ಕಿಂಗ್ ಲಂಚ್, ಕುಟುಂಬ ಭೇಟಿ, ಸಂಜೆಯ ಸಂವಹನ, ಸಣ್ಣ ಗುಂಪುಗಳ ಭೋಜಕೂಟ ಮತ್ತು ಡೆಲಿವರಿ-ನೀಡುವ ಆರ್ಡರ್ ಗಳಿಗೆ ಸೂಕ್ತ ತಾಣವಾಗಿಸಿದೆ.

ನಟಫ್ ನಲ್ಲಿ ಮಧ್ಯಪ್ರಾಚ್ಯ ಮತ್ತು ಮೆಡಿಟರೇನಿಯನ್-ಸ್ಫೂರ್ತಿಯ ಆಹಾರದ ಅನುಭವವನ್ನು ಭಾರತೀಯ ಗ್ರಾಹಕರಿಗೆ ಒದಗಿಸುತ್ತಿದ್ದು ಹಮ್ಮಸ್, ಫಲಫೆಲ್, ಪಿಟಾ, ರಾಪ್ಸ್, ಬೌಲ್ಸ್, ಡಿಪ್ಸ್, ಸಾಸಸ್, ಫ್ರೆಶ್ ಮೀಲ್ ಫಾರ್ಮಾಟ್ ಗಳು ಮತ್ತು ಕೆಫೆ-ಶೈಲಿ ಕೊಡುಗೆಗಳ ಸುತ್ತಲೂ ನಿರ್ಮಿಸಲಾಗಿದೆ. ಈ ಬ್ರಾಂಡ್ ರುಚಿಕರ, ಅಳವಡಿಕೆ-ಪ್ರೇರಿತ, ಆಧುನಿಕ ನಗರ ಜೀವನಶೈಲಿಗಳಿಗೆ ಸೂಕ್ತ ಆಹಾರಕ್ಕೆ ಆದ್ಯತೆ ನೀಡಿದೆ.

# ಸೆಬಿಗೆ ಡಿಆರ್‌ಎಚ್‌ಪಿ ಸಲ್ಲಿಸಿದ ಧೂತ್ ಟ್ರಾನ್ಸ್‌ಮಿಷನ್ ಲಿಮಿಟೆಡ್

ಬೆಂಗಳೂರು

ಭಾರತದ ಪ್ರಮುಖ ವಿದ್ಯುತ್ ಮತ್ತು ಎಲೆಕ್ಟ್ರಾನಿಕ್ಸ್ ಕಂಪನಿಗಳಲ್ಲಿ ಒಂದಾದ ಬೈನ್ ಕ್ಯಾಪಿಟಲ್ ಬೆಂಬಲಿತ ಧೂತ್ ಟ್ರಾನ್ಸ್‌ಮಿಷನ್ ಲಿಮಿಟೆಡ್, ಆರಂಭಿಕ ಸಾರ್ವಜನಿಕ ಷೇರು ಮಾರಾಟಕ್ಕೆ ಮುಂದಾಗಿದ್ದು, ತನ್ನ ಪರಿಷ್ಕೃತ ಕರಡು ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್1 (ಯುಡಿಆರ್‌ಎಚ್‌ಪಿ1) ಅನ್ನು ಮಾರುಕಟ್ಟೆ ನಿಯಂತ್ರಕ ಸಂಸ್ಥೆಯಾದ ಸೆಕ್ಯುರಿಟೀಸ್ ಅಂಡ್ ಎಕ್ಸ್‌ಚೇಂಜ್ ಬೋರ್ಡ್ ಆಫ್ ಇಂಡಿಯಾ (ಸೆಬಿ)ಗೆ ಸಲ್ಲಿಸಿದೆ.

ಪ್ರಸ್ತಾವಿತ ಸಾರ್ವಜನಿಕ ಷೇರು ಮಾರಾಟ ಕೊಡುಗೆಯು ಹೊಸ ಷೇರುಗಳ ಬಿಡುಗಡೆ ಹಾಗೂ ಮಾರಾಟದ ಪ್ರಸ್ತಾಪದ ಸಂಯೋಜನೆಯಾಗಿದ್ದು, ಒಟ್ಟು 1,400 ಕೋಟಿ ಮೌಲ್ಯದ ಹೊಸ ಈಕ್ವಿಟಿ ಷೇರುಗಳ ಬಿಡುಗಡೆ ಒಳಗೊಂಡಿದೆ. ಈ ಷೇರುಗಳು ತಲಾ 2 ಮುಖಬೆಲೆಯವಾಗಿರಲಿವೆ.

ಇದಕ್ಕೆ ಜೊತೆಯಾಗಿ, ಷೇರುಗಳ ಮಾರಾಟ ಕೊಡುಗೆಯಡಿಯಲ್ಲಿ ತಲಾ 2 ಮುಖಬೆಲೆಯ 1,63,10,733 ಈಕ್ವಿಟಿ ಷೇರುಗಳನ್ನು ಮಾರಾಟ ಮಾಡಲು ಉದ್ದೇಶಿಸಲಾಗಿದೆ. ಮಾರಾಟದ ಈ ಪ್ರಕ್ರಿಯೆಯಲ್ಲಿ ಪ್ರವರ್ತಕರು ಮತ್ತು ಪ್ರವರ್ತಕ ಗುಂಪಿನ ಮಾರಾಟಗಾರ ಷೇರುದಾರರು ಭಾಗವಹಿಸಲಿದ್ದಾರೆ.

# ಸುಸ್ಥಿರ ಮದ್ಯ ಉತ್ಪಾದನೆಗೆ ರಾಜ್ಯ ಸರ್ಕಾರ ಸಾಥ್

ಬೆಂಗಳೂರು

ಭಾರತದ ಪ್ರಮುಖ ಆಲ್ಕೋಹಾಲ್ ಮತ್ತು ಮದ್ಯ ಉತ್ಪಾದನೆ ಹಾಗೂ ಹೊಸತನದ ಹಬ್ ಆಗಿ ಕರ್ನಾಟಕ ತನ್ನ ಸ್ಥಾನವನ್ನು ಮತ್ತಷ್ಟು ಭದ್ರಪಡಿಸಿಕೊಳ್ಳುತ್ತಿದೆ. ಪರಿಸರ ಪೂರಕ (ಸುಸ್ಥಿರ) ಬೆಳವಣಿಗೆ, ದೇಶೀಯ ಉತ್ಪಾದನೆ ಮತ್ತು ಬೆಂಗಳೂರಿನಿಂದ ಹೊರಗೆ ಬ್ರೂವರಿ ಪರಿಸರ ವ್ಯವಸ್ಥೆಯ ವಿಸ್ತರಣೆಗೆ ರಾಜ್ಯ ಸರ್ಕಾರವು ಸಂಪೂರ್ಣ ಬೆಂಬಲ ಘೋಷಿಸಿದೆ. ಬೆಂಗಳೂರಿನಲ್ಲಿ ನಡೆದ ಉದ್ಯಮದ ಪ್ರಮುಖ ಸಮಾವೇಶದಲ್ಲಿ ಈ ಮಹತ್ವದ ನಿರ್ಧಾರಗಳು ಚರ್ಚೆಗೆ ಬಂದವು. ಕಾರ್ಯಕ್ರಮದಲ್ಲಿ ಮಾನ್ಯ ಅಬಕಾರಿ ಸಚಿವರು, ಜಂಟಿ ಅಬಕಾರಿ ಆಯುಕ್ತರು, ಬ್ರೂವರ್ಗಳು, ಡಿಸ್ಟಿಲರಿಗಳ ಪ್ರತಿನಿಧಿಗಳು, ಪರಿಸರ ಸುಸ್ಥಿರತೆ ತಜ್ಞರು ಹಾಗೂ ತಂತ್ರಜ್ಞಾನ ಪೂರೈಕೆದಾರರು ಭಾಗವಹಿಸಿದ್ದರು.



ಸಮಾವೇಶವನ್ನುದ್ದೇಶಿಸಿ ಮಾತನಾಡಿದ ಮಾನ್ಯ ಅಬಕಾರಿ ಸಚಿವರಾದ ಶ್ರೀ ಆರ್.ಬಿ. ತಿಮ್ಮಾಪುರ ಅವರು, ವ್ಯಾಪಾರ ವಹಿವಾಟು ಸುಲಭಗೊಳಿಸಲು ಮತ್ತು ರಾಜ್ಯದ ಮದ್ಯ ಉತ್ಪಾದನಾ ವ್ಯವಸ್ಥೆಯನ್ನು ಬಲಪಡಿಸಲು ಕ್ರಮವಹಿಸಿದೆ.

ಕರ್ನಾಟಕ ಸರ್ಕಾರವು ಒಂದು ವರ್ಷದಲ್ಲಿ ಮಹತ್ವದ ಅಬಕಾರಿ ಮತ್ತು ನಿಯಂತ್ರಕ ಸುಧಾರಣೆಗಳನ್ನು ತಂದಿದೆ ಎಂದರು.

"ಲೈಸೆನ್ಸ್ ಪ್ರಕ್ರಿಯೆ ಸರಳೀಕರಣ, ಎಂ.ಆರ್.ಪಿ ಪರಿಷ್ಕರಣೆ ವ್ಯವಸ್ಥೆ, ಡಿಜಿಟಲ್ ಅನುಸರಣೆ ಹಾಗೂ ವಾರ್ಷಿಕ ಪರವಾನಗಿ ನವೀಕರಣ ಸುಧಾರಣೆಗಳ ಮೂಲಕ ನಾವು ಹೆಚ್ಚು ಪಾರದರ್ಶಕ ಮತ್ತು ತಂತ್ರಜ್ಞಾನ ಆಧಾರಿತ ವ್ಯವಸ್ಥೆಯನ್ನು ನಿರ್ಮಿಸುತ್ತಿದ್ದೇವೆ.

# ರೈತ ಪ್ರತಿಭಟನೆ ಹತ್ತಿಕ್ಕುವ ಕೆಲಸ: ಆಕ್ರೋಶ

ರಾಮನಗರ

ಕೆಲ ರೈತರನ್ನು ಎತ್ತಿಕಟ್ಟಿ 400ಕ್ಕೂ ಹೆಚ್ಚು ದಿನಗಳಿಂದ ನಿರಂತರವಾಗಿ ನಡೆಯುತ್ತಿರುವ ನಮ್ಮ ಪ್ರತಿಭಟನೆಯನ್ನು ಹತ್ತಿಕ್ಕುವ ಕೆಲಸವನ್ನು ಸರ್ಕಾರ ಮಾಡುತ್ತಿದೆ ಎಂದು ಜಿಬಿಡಿಎ ವಿರೋಧಿ ರೈತ ಹೋರಾಟಗಾರ, ಬೈರಮಂಗಲ, ಕಂಚುಗಾರನಹಳ್ಳಿ ಭೂ ಹಿತರಕ್ಷಣಾ ಸಂಘದ ಖಜಾಂಚಿ ನಾಗರಾಜು ಆರೋಪಿಸಿದರು.

ತಾಲ್ಲೂಕಿನ ಬಿಡದಿ ಹೋಬಳಿ ಬೈರಮಂಗಲ ಗ್ರಾಮದಲ್ಲಿ ನಡೆಯುತ್ತಿರುವ ಧರಣಿ ವೇಳೆ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉಪ ಮುಖ್ಯಮಂತ್ರಿಗಳಿಂದ ಪ್ರೇರೇಪಿತರಾದ ಕೆಲ ರೈತರು ಪ್ರತಿಭಟನೆ ಮಾಡುತ್ತಿರುವ ನಮ್ಮನ್ನು ನಕಲಿ ರೈತರು, ದಲ್ಲಾಳಿಗಳೆಂದು ಕರೆಯುವ ಮೂಲಕ ಶಾಂತಿಯುತ ಹೋರಾಟವನ್ನು ದಿಕ್ಕುತಪ್ಪಿಸಲು ಪ್ರೇರೇಪಿಸುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಹೋರಾಟ ಮಾಡುತ್ತಿರುವ ಪೈಕಿ ಎಷ್ಟು ಮಂದಿ ವ್ಯವಸಾಯ ಮಾಡುತ್ತಿದ್ದಾರೆ ಎಂದು ಒಬ್ಬ ಮಹನೀಯರು ಪ್ರಶ್ನಿಸಿದ್ದಾರೆ. ಅವರಿಗೆ ನಾನು ಹೇಳುವುದಿಷ್ಟು ನೀವು ಬಂದು ನಮ್ಮ ತೋಟವನ್ನು ವೀಕ್ಷಿಸಿ, ಮಾವು, ತೆಂಗು, ಹಲಸು, ಸಪೋಟ, ಅಡಿಕೆ ಸೇರಿದಂತೆ ಮಲ್ಟಿ ಕ್ರಾಪ್ ಬೆಳೆಗಳು, ವಿವಿಧ ರೀತಿಯ ಹಣ್ಣಿನ ಬೆಳೆಗಳನ್ನು ಬೆಳೆದಿದ್ದೇನೆ ಎಂದರು.

ಅಂತಿಮ ಅಧಿಸೂಚನೆ ಹೊರಡಿಸಿ, ರೈತರ ಬ್ಯಾಂಕ್ ಖಾತೆಗಳಿಗೆ ಹಣ ಹಾಕುವುದಾಗಿ ವರ್ಷದಿಂದಲೂ ಹೇಳುತ್ತಲೇ ಬಂದಿದ್ದಾರೆ. ಇದು ಕೇವಲ ಸುಳ್ಳು ಮಾಹಿತಿಯಾಗಿದ್ದು, ರೈತರ ಒಗ್ಗಟ್ಟನ್ನು ಒಡೆಯಲು, ನಮ್ಮ ಹೋರಾಟವನ್ನು ಹತ್ತಿಕ್ಕಲು ಈ ರೀತಿಯಾಗಿ ಅಪಪ್ರಚಾರ ಮಾಡುತ್ತಿದ್ದಾರೆ ಎಂದು ಕಿಡಿ ಕಾರಿದರು.

ನಮ್ಮದು ಬರಡು ಭೂಮಿ ಎನ್ನುತ್ತಾರೆ. ಬರಡು ಭೂಮಿಯಲ್ಲಿ ಬಾಳೆ, ರೇಷ್ಮೆ ಬೆಳೆಯಲು ಸಾಧ್ಯವೇ. ಪ್ರತಿ ತಿಂಗಳು ನಾವು 6 ಲಕ್ಷ ಲೀಟರ್ ಹಾಲು ಉತ್ಪಾದಿಸುತ್ತಿದ್ದೇವೆ. ವರ್ಷಕ್ಕೆ 35 ಕೋಟಿ ರೇಷ್ಮೆ ಬೆಳೆಯುತ್ತಿದ್ದೇವೆ. ನಾವೇನು ಕಂಪ್ಯೂಟರ್‌ನಲ್ಲಿ ಬೆಳೆಯುತ್ತಿಲ್ಲ. ಈ ಭಾಗದ ರೈತರ ಫಲವತ್ತಾದ ಭೂಮಿ ಕಬಳಿಸುವ ಹುನ್ನಾರವಿದು. ದಿನದ ಯಾವುದೇ ವೇಳೆಯಲ್ಲಾದರೂ ನಮ್ಮ ಜಮೀನಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಿ ರೈತ ಎಂದು ನಾಗರಾಜು ಸವಾಲು ಹಾಕಿದರು.

ಪ್ರಾಜೆಕ್ಟ್ ಮಾಡ್ತೀವಿ ಎಂದು ಸಚಿವ ಸಂಪುಟದಲ್ಲಿ ಅನುಮೋದನೆ ಪಡೆದಿದ್ದಾರಷ್ಟೆ. ಭೂಸ್ವಾಧೀನಕ್ಕೆ ಸಚಿವ ಸಂಪುಟದ ಅನುಮೋದನೆ ಪಡೆಯಲೇಬೇಕು. ಏಕಾಏಕಿ ಅಧಿಸೂಚನೆ ಹೊರಡಿಸಿ, ರೈತರ ಬ್ಯಾಂಕ್ ಖಾತೆಗಳಿಗೆ ಹಣ ಹಾಕಲು ಇದೇನು ಕಡ್ಲೆಪುರಿ ವ್ಯಾಪಾರವೇ ಎಂದು ಪ್ರಶ್ನಿಸಿದರು.

ಕುಮಾರಸ್ವಾಮಿ ಅವರು ಕೇಂದ್ರ ಸಚಿವರಾಗಿದ್ದಾರೆ. ಇಬ್ಬರೂ ರಾಜಕೀಯವಾಗಿ ಪ್ರಬಲವಾಗಿದ್ದು, ಅವರು ಟೀಕೆ-ಟಿಪ್ಪಣಿ ಮಾಡಿಕೊಳ್ಳಲಿ. ಅದರಿಂದ ನಮಗಾಗ ಬೇಕಾದ್ದೇನೂ ಇಲ್ಲ ಎಂದರು.

ಬೈರಮಂಗಲ-ಕಂಚುಗಾರನಹಳ್ಳಿ ಭೂ ಹಿತರಕ್ಷಣಾ ಸಮಿತಿ ಅಧ್ಯಕ್ಷ ರಾಮಣ್ಣ ಮಾತನಾಡಿ, ಡಿ.ಕೆ.ಶಿವಕುಮಾರ್ ಹಾಗೂ ಬೆಂಬಲಿಗರು ಅಲ್ಲಿರುವ ಶೇ.80ರಷ್ಟು ರೈತರೇ ಅಲ್ಲ, ಬೆಳೆಯನ್ನೇ ಬೆಳೆಯುವುದಿಲ್ಲ ಎಂದು ಹೇಳುತ್ತಾರೆ.

ಹಾಗೆಯೇ ಈಗಾಗಲೇ 80ರಷ್ಟು ರೈತರು ಒಪ್ಪಿಗೆ ನೀಡಿದ್ದಾರೆಂದೂ ಹೇಳುತ್ತಾರೆ. ಹಾಗಾದರೆ ಒಪ್ಪಿಗೆ ನೀಡಿರುವವರು ಯಾರು ಎಂದು ತರಾಟೆಗೆ ತೆಗೆದುಕೊಂಡರು.

# ಲುಲು ಹೈಪರ್ ಮಾರ್ಕೆಟ್ ಉದ್ಘಾಟನೆ

ಬೆಂಗಳೂರು

ಗೋಪಾಲನ್ ಎಂಟರ್‌ಪ್ರೈಸಸ್ ಹಳೆ ಮದ್ರಾಸ್ ರಸ್ತೆಯ ಗೋಪಾಲನ್ ಗ್ರ್ಯಾಂಡ್ ಮಾಲ್‌ನಲ್ಲಿ ಲುಲು ಹೈಪರ್‌ಮಾರ್ಕೆಟ್ ಅನ್ನು ಯಶಸ್ವಿಯಾಗಿ ಪ್ರಾರಂಭಿಸಿದೆ. ಲುಲು ಹೈಪರ್‌ಮಾರ್ಕೆಟ್ ಉದ್ಘಾಟನೆಯು ಮಾಲ್‌ನ ವಿಕಸಿಸುತ್ತಿರುವ ಚಿಲ್ಲರೆ ವ್ಯಾಪಾರ ಪರಿಸರ ವ್ಯವಸ್ಥೆಯಲ್ಲಿ ಮಹತ್ವದ ಮೈಲಿಗಲ್ಲಾಗಿ ಪರಿಣಮಿಸಿದೆ.




ಬೆಂಗಳೂರಿನ ಪ್ರಮುಖ ಬೆಳವಣಿಗೆಯ ಕಾರಿಡಾರ್‌ಗಳಲ್ಲಿ ಒಂದಾಗಿ ಗುರುತಿಸಿಕೊಂಡಿರುವ ಗೋಪಾಲನ್ ಗ್ರ್ಯಾಂಡ್ ಮಾಲ್, ಬಲವಾದ ವಸತಿ ಪ್ರದೇಶಗಳು, ಉತ್ತಮ ಸಂಪರ್ಕ ವ್ಯವಸ್ಥೆ ಹಾಗೂ ವೇಗವಾಗಿ ವಿಸ್ತರಿಸುತ್ತಿರುವ ಗ್ರಾಹಕರ ನೆಲೆಯಿಂದ ಹೆಚ್ಚಿನ ಪ್ರಾಮುಖ್ಯತೆ ಪಡೆದುಕೊಂಡಿದೆ. ಇದರಿಂದಾಗಿ ಇದು ದೊಡ್ಡ ಪ್ರಮಾಣದ ಚಿಲ್ಲರೆ ವ್ಯಾಪಾರ ಮತ್ತು ಜೀವನಶೈಲಿ ಅನುಭವಗಳಿಗೆ ಆದ್ಯತೆಯ ತಾಣವಾಗಿ ರೂಪುಗೊಂಡಿದೆ.

ಲುಲು ಹೈಪರ್‌ಮಾರ್ಕೆಟ್ ಸೇರ್ಪಡೆಯೊಂದಿಗೆ, ಸಮಗ್ರ ಮತ್ತು ಗಮ್ಯಸ್ಥಾನ-ಆಧಾರಿತ ಚಿಲ್ಲರೆ ವ್ಯಾಪಾರ ಕೇಂದ್ರವಾಗಿ ಗೋಪಾಲನ್ ಗ್ರ್ಯಾಂಡ್ ಮಾಲ್ ತನ್ನ ಸ್ಥಾನಮಾನವನ್ನು ಮತ್ತಷ್ಟು ಬಲಪಡಿಸಿಕೊಂಡಿದೆ.

ಈ ಕುರಿತು ಪ್ರತಿಕ್ರಿಯಿಸಿದ ಗೋಪಾಲನ್ ಎಂಟರ್‌ಪ್ರೈಸಸ್‌ನ ನಿರ್ದೇಶಕ ಡಾ. ಪ್ರಭಾಕರ್, "ಗೋಪಾಲನ್ ಗ್ರ್ಯಾಂಡ್ ಮಾಲ್‌ನಲ್ಲಿ ಲುಲು ಹೈಪರ್‌ಮಾರ್ಕೆಟ್ ಉದ್ಘಾಟನೆಯು ಬೆಂಗಳೂರಿನ ಸಮುದಾಯಗಳ ವಿಕಸನಗೊಳ್ಳುತ್ತಿರುವ ಜೀವನಶೈಲಿ ಮತ್ತು ಆಕಾಂಕ್ಷೆಗಳಿಗೆ ಹೊಂದಿಕೊಳ್ಳುವ ಭವಿಷ್ಯಮುಖಿ ಚಿಲ್ಲರೆ ವ್ಯಾಪಾರ ತಾಣಗಳನ್ನು ಅಭಿವೃದ್ಧಿಪಡಿಸುವ ನಮ್ಮ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ," ಎಂದು ಹೇಳಿದರು.

# ಬೆಂಗಳೂರಿನಲ್ಲಿ ಬ್ಲಾಕ್‌ಚೈನ್ ಶೈಕ್ಷಣಿಕ ಅನುಭವ ಪಡೆದ 2,000 ಜನರು

ಬೆಂಗಳೂರು

ವಿಶ್ವದ ಅತಿದೊಡ್ಡ ಡಿಜಿಟಲ್ ಆಸ್ತಿ ವಿನಿಮಯ ಕೇಂದ್ರ ಮತ್ತು ಪ್ರಮುಖ ಬ್ಲಾಕ್‌ಚೈನ್ ವ್ಯವಸ್ಥೆಯಾಗಿರುವ ಬೈನಾನ್ಸ್, ಬೆಂಗಳೂರಿನ ಫೋರಂ ಮಾಲ್‌ನಲ್ಲಿ ಆಸಕ್ತರಿಗಾಗಿ ವಿಶೇಷ ಶೈಕ್ಷಣಿಕ ಕಾರ್ಯಕ್ರಮ ಆಯೋಜಿಸುವ ಮೂಲಕ 'ಬಿಟ್‌ಕಾಯಿನ್ ಪಿಜ್ಜಾ ದಿನ'ವನ್ನು ಯಶಸ್ವಿಯಾಗಿ ಆಚರಿಸಿತು.




ಬ್ಲಾಕ್‌ಚೈನ್ ತಂತ್ರಜ್ಞಾನ ಮತ್ತು ಡಿಜಿಟಲ್ ಆಸ್ತಿಗಳ ಮೂಲ ತತ್ವಗಳ ಬಗ್ಗೆ ತಿಳಿದುಕೊಳ್ಳಲು ಉತ್ಸುಕರಾಗಿದ್ದ ಸುಮಾರು 2,000 ಜನರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಭಾಗವಹಿಸಿದವರಲ್ಲಿ ಶೇಕಡಾ 88ರಷ್ಟು ಜನರು ಇದೇ ಮೊದಲ ಬಾರಿಗೆ ಡಿಜಿಟಲ್ ಆಸ್ತಿ ಕುರಿತ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

ಮೇ 23 ಮತ್ತು 24ರಂದು ನಡೆದ ಈ ಉಪಕ್ರಮವು, ಸಾಮಾನ್ಯವಾಗಿ ವ್ಯಾಪಾರ ಮತ್ತು ಖರೀದಿ ಚಟುವಟಿಕೆಗಳಿಗೆ ಪ್ರಸಿದ್ಧವಾಗಿರುವ ಮಾಲ್ ವಾತಾವರಣವನ್ನು ಬ್ಲಾಕ್‌ಚೈನ್ ಕಲಿಕೆಯ ಸಂವಾದಾತ್ಮಕ ವೇದಿಕೆಯಾಗಿಸಿತು. ಹೊಸ ತಂತ್ರಜ್ಞಾನವನ್ನು ಸುಲಭವಾಗಿ ಅರ್ಥಮಾಡಿಕೊಳ್ಳಲು ವಿವಿಧ ಸರಳ ಹಾಗೂ ರಂಜನೀಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿತ್ತು.

ಡಿಜಿಟಲ್ ಆಸ್ತಿ ಕುರಿತ ಗೊಂದಲಗಳನ್ನು ನಿವಾರಿಸುವ ಉದ್ದೇಶದಿಂದ ಕಲಿಕೆಯನ್ನು ಸುಲಭಗೊಳಿಸುವ ಬ್ಲಾಕ್‌ಚೈನ್ ಅನುಭವ ವಲಯವನ್ನು ಸೃಷ್ಟಿಸಲಾಗಿತ್ತು. ಮಾಲ್‌ನ ಪ್ರಮುಖ ಸ್ಥಳದಲ್ಲಿ ಬೈನಾನ್ಸ್ ಸಂವಹನ ಬೂತ್ ಸ್ಥಾಪಿಸಲಾಗಿದೆ.

ಅಲ್ಲಿ ಸಂದರ್ಶಕರು ರಸಪ್ರಶ್ನೆಗಳು, ಶೈಕ್ಷಣಿಕ ಚಟುವಟಿಕೆಗಳು ಹಾಗೂ ಮಿನಿ-ಗೇಮ್‌ಗಳ ಮೂಲಕ ಬ್ಲಾಕ್‌ಚೈನ್ ಮತ್ತು ಡಿಜಿಟಲ್ ಆಸ್ತಿಗಳ ಪರಿಕಲ್ಪನೆಗಳನ್ನು ತಿಳಿದುಕೊಂಡರು. ಜಾಗತಿಕ ಮಟ್ಟದಲ್ಲಿ ಡಿಜಿಟಲ್ ಆಸ್ತಿ ಬಳಕೆ ಹೆಚ್ಚುತ್ತಿರುವ ಸಂದರ್ಭದಲ್ಲಿ ಭಾರತದಲ್ಲಿಯೂ ಬ್ಲಾಕ್‌ಚೈನ್ ತಂತ್ರಜ್ಞಾನಕ್ಕೆ ಹೆಚ್ಚಿನ ಆಸಕ್ತಿ ವ್ಯಕ್ತವಾಗುತ್ತಿದೆ. ಈ ಹಿನ್ನೆಲೆಯಲ್ಲಿ ಜ್ಞಾನ ಅಂತರವನ್ನು ಕಡಿಮೆ ಮಾಡಿ, ಹೊಣೆಗಾರಿಕೆಯ ಡಿಜಿಟಲ್ ಆಸ್ತಿ ಸಾಕ್ಷರತೆಯನ್ನು ಉತ್ತೇಜಿಸುವ ಗುರಿಯನ್ನು ಬೈನಾನ್ಸ್ ಹೊಂದಿದೆ.

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ |
ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

24/05/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER



# ‘ಆಳಂದ ಗಲಭೆ ಪ್ರಕರಣ ಹಿಂಪಡೆದ ರಾಜ್ಯ ಸರ್ಕಾರದ ಕ್ರಮ ಖಂಡನೀಯ’



ಬೆಂಗಳೂರು

ಕಲಬುರಗಿ ಜಿಲ್ಲೆಯ ಆಳಂದ ತಾಲ್ಲೂಕಿನಲ್ಲಿ ನಡೆದ ಶಿವಲಿಂಗ ಅಪವಿತ್ರಗೊಳಿಸಿದ ಪ್ರಕರಣಕ್ಕೆ ಸಂಬಂಧಿಸಿದ ಗಲಭೆಕೋರರ ಮೇಲಿನ ಪ್ರಕರಣಗಳನ್ನು ರಾಜ್ಯ ಸರ್ಕಾರ ಹಿಂಪಡೆದಿರುವ ಕ್ರಮವನ್ನು ಹಿಂದೂ ಜನಜಾಗೃತಿ ಸಮಿತಿ ತೀವ್ರವಾಗಿ ಖಂಡಿಸಿದೆ.

ಸಂಸ್ಥೆಯ ರಾಜ್ಯ ವಕ್ತಾರ ಮೋಹನ ಗೌಡ ಅವರು ಮಾಧ್ಯಮ ಪ್ರಕಟಣೆಯಲ್ಲಿ ಮಾತನಾಡಿ, “ಕರ್ನಾಟಕ ಸಚಿವ ಸಂಪುಟವು ಇತ್ತೀಚೆಗೆ 56 ಗಂಭೀರ ಕ್ರಿಮಿನಲ್ ಪ್ರಕರಣಗಳನ್ನು ಹಿಂಪಡೆಯಲು ತೀರ್ಮಾನಿಸಿದೆ. ಇದರಲ್ಲಿ 2022ರಲ್ಲಿ ಆಳಂದ ತಾಲ್ಲೂಕಿನ ರಾಗಚೈತನ್ಯ ಮಹಾಪ್ರಭುಗಳ ಸಮಾಧಿ ಸ್ಥಳದಲ್ಲಿದ್ದ ಶಿವಲಿಂಗಕ್ಕೆ ಮಲಮೂತ್ರ ವಿಸರ್ಜನೆ ಮಾಡಿ ಅಪವಿತ್ರಗೊಳಿಸಿದ ಪ್ರಕರಣವೂ ಸೇರಿದೆ,” ಎಂದು ಹೇಳಿದರು.

ಆ ಸಂದರ್ಭದಲ್ಲಿ ಸ್ಥಳವನ್ನು ಹಿಂದೂ ನಾಯಕರು ಶುದ್ಧೀಕರಿಸುವ ವೇಳೆ ಕೆಲ ಮುಸ್ಲಿಂ ಸಮುದಾಯದವರು ದಂಗೆ ಎದ್ದು ಪೊಲೀಸ್ ಸಿಬ್ಬಂದಿ, ಹಿಂದೂ ಮುಖಂಡರು ಹಾಗೂ ಕೇಂದ್ರ ಸಚಿವರ ಮೇಲೆ ಕಲ್ಲು ತೂರಾಟ ನಡೆಸಿದ್ದರು ಎಂದು ಆರೋಪಿಸಿದರು.

“ಈ ಪ್ರಕರಣದಲ್ಲಿ ಮುಸ್ಲಿಮರ ಮೇಲಿನ ಕೇಸುಗಳನ್ನು ಹಿಂಪಡೆಯುವಂತೆ ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಅವರು ಪತ್ರ ಬರೆದಿದ್ದರು. ಡಿಜಿಪಿ ಹಾಗೂ ಪ್ರಾಸಿಕ್ಯೂಷನ್ ಇಲಾಖೆಯಂತಹ ಕಾನೂನು ಸಂಸ್ಥೆಗಳು ತೀವ್ರ ವಿರೋಧ ವ್ಯಕ್ತಪಡಿಸಿದರೂ ಸರ್ಕಾರ ಪ್ರಕರಣ ಹಿಂಪಡೆದಿರುವುದು ಅತ್ಯಂತ ಖಂಡನೀಯ,” ಎಂದು ಹೇಳಿದರು. ಹುಬ್ಬಳ್ಳಿಯಲ್ಲಿ ಪೊಲೀಸ್ ಠಾಣೆ ಮೇಲೆ ದಾಳಿ ನಡೆಸಿ ಬೆಂಕಿ ಹಚ್ಚಿದ ಪ್ರಕರಣವನ್ನು ಹಿಂದೆ ಸರ್ಕಾರ ಹಿಂಪಡೆದಾಗ, ಉಚ್ಚ ನ್ಯಾಯಾಲಯವೇ ಆ ಆದೇಶವನ್ನು ರದ್ದುಪಡಿಸಿತ್ತು ಎಂದು ಅವರು ನೆನಪಿಸಿದರು.

“ಇದಕ್ಕೂ ಮೊದಲು ಕಾಂಗ್ರೆಸ್ ಸರ್ಕಾರ 176 ಪಿಎಫ್‌ಐ ಹಾಗೂ ಎಸ್‌ಡಿಪಿಐ ಕಾರ್ಯಕರ್ತರ ಮೇಲಿನ ಪ್ರಕರಣಗಳನ್ನು ಹಿಂಪಡೆದಿತ್ತು. ಈಗ ಸರ್ಕಾರ ಸಂಪೂರ್ಣವಾಗಿ ಓಲೈಕೆ ರಾಜಕಾರಣದಲ್ಲಿ ತೊಡಗಿದೆ,” ಎಂದು ಟೀಕಿಸಿದರು.

“ಗಲಭೆ, ದಂಗೆ, ಪೊಲೀಸ್ ಠಾಣೆ ಮೇಲೆ ದಾಳಿ ಹಾಗೂ ಸಾರ್ವಜನಿಕ ಆಸ್ತಿಪಾಸ್ತಿಗೆ ಹಾನಿ ಮಾಡಿದಂತಹ ಗಂಭೀರ ಕ್ರಿಮಿನಲ್ ಪ್ರಕರಣಗಳನ್ನು ಯಾವುದೇ ಕಾರಣಕ್ಕೂ ಹಿಂಪಡೆಯಬಾರದು,” ಎಂದು ಆಗ್ರಹಿಸಿದರು. ರಾಜ್ಯ ಸರ್ಕಾರವು ಡಿಜಿಪಿ, ಐಜಿಪಿ ಹಾಗೂ ಪ್ರಾಸಿಕ್ಯೂಷನ್ ಇಲಾಖೆಗಳ ಕಾನೂನಾತ್ಮಕ ಸಲಹೆಗಳನ್ನು ಗೌರವಿಸಬೇಕು. ಕಾನೂನು ಮತ್ತು ಸುವ್ಯವಸ್ಥೆಯನ್ನು ರಾಜಕೀಯ ಪ್ರಭಾವದಿಂದ ಮುಕ್ತಗೊಳಿಸಬೇಕು ಎಂದು ಅವರು ಒತ್ತಾಯಿಸಿದರು. “ಇಂತಹ ಗಂಭೀರ ಪ್ರಕರಣಗಳನ್ನು ಹಿಂಪಡೆಯುವುದರಿಂದ ಅಪರಾಧಿಗಳಿಗೆ ಮತ್ತೆ ಕ್ರಿಮಿನಲ್ ಚಟುವಟಿಕೆಗಳಲ್ಲಿ ತೊಡಗಲು ಸರ್ಕಾರವೇ ಪ್ರೋತ್ಸಾಹ ನೀಡಿದಂತಾಗುತ್ತದೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ಹಾಗೂ ಸಮಾಜದಲ್ಲಿ ಶಾಂತಿ ನೆಲೆಸುವಂತೆ ಮಾಡಲು ಸರ್ಕಾರ ತಕ್ಷಣವೇ ಈ ಆದೇಶವನ್ನು ರದ್ದುಪಡಿಸಬೇಕು,” ಎಂದು ಹಿಂದೂ ಜನಜಾಗೃತಿ ಸಮಿತಿ ಒತ್ತಾಯಿಸಿದೆ.

# ‘ಯಾವ ಸರ್ಕಾರ ಬಂದರೂ ಸಮಸ್ಯೆಗಳಿಗೆ ಸ್ಪಂದನೆ ಇಲ್ಲ’

ತಿಪಟೂರು

ಪಕ್ಷ ನೀಡಿರುವ ಜವಾಬ್ದಾರಿಗಳನ್ನು ಸಮರ್ಪಕವಾಗಿ ನಿರ್ವಹಿಸಿ ಸಂಘಟನೆ ಬಲಪಡಿಸದ ಮುಖಂಡರು ಹುದ್ದೆಯಿಂದ ಹೊರನಡೆಯಬಹುದು, ಇಲ್ಲವಾದರೆ ಅಂತಹವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಶಾಸಕ ಕೆ. ಷಡಕ್ಷರಿ ಎಚ್ಚರಿಕೆ ನೀಡಿದರು.

ನಗರದ ಕಾಂಗ್ರೆಸ್ ಪಕ್ಷದ ಕಚೇರಿಯಲ್ಲಿ ನಡೆದ ಮುಖಂಡರ ಸಭೆಯಲ್ಲಿ ಮಾತನಾಡಿದ ಅವರು, “ಪಕ್ಷದ ಜವಾಬ್ದಾರಿಗಳನ್ನು ಹೊತ್ತಿರುವವರು ಕಾರ್ಯಕರ್ತರನ್ನು ಸಂಘಟಿಸಿ ಪಕ್ಷವನ್ನು ಬಲಪಡಿಸಬೇಕು,” ಎಂದು ಹೇಳಿದರು.

“ಶೀಘ್ರದಲ್ಲೇ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿ ಚುನಾವಣೆಗಳು ನಡೆಯಲಿವೆ. ಈ ಬಾರಿ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲೂ ಪಕ್ಷದ ಚಿಹ್ನೆ ಬರುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಪಕ್ಷ ಸಂಘಟನೆಗೆ ಹೆಚ್ಚಿನ ಒತ್ತು ನೀಡಬೇಕು,” ಎಂದು ಸೂಚಿಸಿದರು.

“ಯಾರಿಗೆ ಜವಾಬ್ದಾರಿ ನಿರ್ವಹಿಸಲು ಸಾಧ್ಯವಿಲ್ಲವೋ ಅವರು ರಾಜೀನಾಮೆ ನೀಡಿ ಬೇರೆಯವರಿಗೆ ಅವಕಾಶ ಮಾಡಿಕೊಡಬೇಕು. ಕಾರ್ಯಕರ್ತರು ಹಾಗೂ ಮುಖಂಡರಿಗೆ ಯಾವುದೇ ಸಮಸ್ಯೆಗಳಿದ್ದರೆ ನೇರವಾಗಿ ನನ್ನೊಂದಿಗೆ ಚರ್ಚಿಸಬಹುದು,” ಎಂದು ಹೇಳಿದರು.

ರಾಜ್ಯ ಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳು ಹಾಗೂ ಅಭಿವೃದ್ಧಿ ಕಾರ್ಯಕ್ರಮಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕೆಲಸವನ್ನು ಕಾರ್ಯಕರ್ತರು ಮಾಡಬೇಕು ಎಂದು ತಿಳಿಸಿದರು. “ಪಕ್ಷದಲ್ಲಿ ಯಾವುದೇ ಭಿನ್ನಾಭಿಪ್ರಾಯಗಳಿಲ್ಲ. ಎಲ್ಲ ನಾಯಕರು ಮತ್ತು ಕಾರ್ಯಕರ್ತರು ವರಿಷ್ಠರ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸಬೇಕು,” ಎಂದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಡೇನೂರು ಕಾಂತರಾಜು ಮಾತನಾಡಿ, “ಪ್ರತಿ ಬೂತ್ ಮಟ್ಟದಲ್ಲಿ ಪಕ್ಷವನ್ನು ಸದೃಢಗೊಳಿಸಬೇಕು. ಕ್ಷೇತ್ರದ ಸಂಘಟನೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಶಾಸಕರೊಂದಿಗೆ ಚರ್ಚಿಸಿ ಪರಿಹಾರ ಕಂಡುಕೊಳ್ಳಬೇಕು,” ಎಂದು ಹೇಳಿದರು.

“ಪ್ರತಿ ಬೂತ್‌ನಿಂದ ಇಬ್ಬರು ಬೂತ್ ಏಜೆಂಟ್‌ಗಳ ಹೆಸರನ್ನು ಸಲ್ಲಿಸುವಂತೆ ಪಕ್ಷ ಸೂಚಿಸಿದ್ದು, ಎಲ್ಲ ಮುಖಂಡರು ತುರ್ತಾಗಿ ಹೆಸರುಗಳನ್ನು ನೀಡಬೇಕು,” ಎಂದು ತಿಳಿಸಿದರು.

ಕೆಪಿಸಿಸಿ ಸದಸ್ಯ ವಿ. ಯೋಗೇಶ್ ಮಾತನಾಡಿ, “ಎಲ್ಲ ಕಾರ್ಯಕರ್ತರು ಒಗ್ಗಟ್ಟಿನಿಂದ ಕೆಲಸ ಮಾಡಿ ಪಕ್ಷವನ್ನು ಬೇರುಮಟ್ಟದಿಂದ ಬಲಪಡಿಸಬೇಕು. ಸ್ಥಳೀಯ ಸಂಸ್ಥೆಗಳಲ್ಲಿ ಅಧಿಕಾರ ಹಿಡಿಯುವ ಜೊತೆಗೆ ಮುಂದಿನ ವಿಧಾನಸಭೆ ಚುನಾವಣೆಯಲ್ಲೂ ಕಾಂಗ್ರೆಸ್ ಗೆಲುವಿಗೆ ಶ್ರಮಿಸಬೇಕು,” ಎಂದು ಹೇಳಿದರು.

# ಬಕ್ರೀದ್ ವೇಳೆ ಗೋಹತ್ಯೆ ತಡೆಗೆ ಕ್ರಮ ಕೈಗೊಳ್ಳಲು ಮನವಿ

ದೊಡ್ಡಬಳ್ಳಾಪುರ



ಬಕ್ರೀದ್ ಹಬ್ಬದ ಸಂದರ್ಭದಲ್ಲಿ ಗೋಗಳ ಅಕ್ರಮ ಸಾಗಾಣಿಕೆ ಹಾಗೂ ಗೋಹತ್ಯೆ ತಡೆಯುವಂತೆ ಆಗ್ರಹಿಸಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಕರ್ನಾಟಕ ಶ್ರೀರಾಮ ಸೇನೆ ವತಿಯಿಂದ ಬೆಂಗಳೂರು ಗ್ರಾಮಾಂತರ ಹೆಚ್ಚುವರಿ ಜಿಲ್ಲಾಧಿಕಾರಿ ಸೈಯಿದ್ ಆಯಿಷಾ ಅವರಿಗೆ ಮನವಿ ಸಲ್ಲಿಸಲಾಯಿತು.

ಈ ಕುರಿತು ಮಾತನಾಡಿದ ಶ್ರೀರಾಮ ಸೇನೆ ರಾಜ್ಯ ಧರ್ಮಪ್ರಚಾರಕ ಶ್ರೀನಿವಾಸ ಗುರೂಜಿ, “ಗೋಮಾತೆಯ ರಕ್ಷಣೆ ಪ್ರತಿಯೊಬ್ಬ ಹಿಂದೂವಿನ ಕರ್ತವ್ಯವಾಗಿದೆ. ಗೋಹಿಂಸಾ ಚಟುವಟಿಕೆಗಳನ್ನು ತಡೆಯುವಂತೆ ಸರ್ಕಾರ ಹಾಗೂ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದೇವೆ,” ಎಂದು ಹೇಳಿದರು.

“ಬಕ್ರೀದ್ ಹಬ್ಬದ ಹಿನ್ನೆಲೆಯಲ್ಲಿ ಜಾನುವಾರುಗಳ ಕಳ್ಳಸಾಗಣೆ ಪ್ರಕರಣಗಳು ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಜಿಲ್ಲೆಯ ಸಾರ್ವಜನಿಕರಲ್ಲಿ ಆತಂಕ ಉಂಟಾಗಿದೆ. ಜಿಲ್ಲಾಡಳಿತ ಸೂಕ್ತ ಮುನ್ನೆಚ್ಚರಿಕಾ ಕ್ರಮ ಕೈಗೊಂಡು ಕಾನೂನು ಸುವ್ಯವಸ್ಥೆ ಕಾಪಾಡಬೇಕು,” ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ದೊಡ್ಡಬಳ್ಳಾಪುರ ತಾಲೂಕು ಅಧ್ಯಕ್ಷ ಮಲ್ಲೇಶ್, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿಂಗಂ ಸುರೇಶ್, ಕವಿತಾ, ಸುಮಲತಾ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಯುವಜನರಿಗೆ ಕೇಂದ್ರ ಸರ್ಕಾರಿ ಉದ್ಯೋಗಗಳ ನೇಮಕಾತಿ ಆದೇಶ ಪತ್ರಗಳ ಹಸ್ತಾಂತರ



ಪಾಲಕ್ಕಾಡ್ (ಕೇರಳ)

ಪ್ರಧಾನಿ ನರೇಂದ್ರ ಮೋದಿ ಅವರ ಮಹತ್ವಾಕಾಂಕ್ಷೆಯ ರೋಜ್‌ಗಾರ್ ಮೇಳದಲ್ಲಿ ಪಾಲ್ಗೊಂಡ ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು, ಪ್ರಧಾನಿಗಳ ಪರವಾಗಿ ಕೇರಳದ ಪಾಲಕ್ಕಾಡ್‌ನಲ್ಲಿ ಆಯ್ಕೆಯಾದ ಅರ್ಹ ಯುವಜನರಿಗೆ ಕೇಂದ್ರ ಸರ್ಕಾರಿ ಉದ್ಯೋಗಗಳ ನೇಮಕಾತಿ ಆದೇಶ ಪತ್ರಗಳನ್ನು ಹಸ್ತಾಂತರ ಮಾಡಿದರು.

ಶನಿವಾರ ನಡೆದ ಈ ಮೇಳದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯಿಂದ ವರ್ಚುವಲ್ ಮೂಲಕ ಭಾಗವಹಿಸಿದ್ದರು. ದೇಶದ 47 ಸ್ಥಳಗಳಲ್ಲಿ ಏಕಕಾಲದಲ್ಲಿ ನಡೆದ ಮೇಳದಲ್ಲಿ ಸಚಿವ ಕುಮಾರಸ್ವಾಮಿ ಅವರು ಕೇರಳದ ಪಾಲಕ್ಕಾಡ್‌ನಲ್ಲಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ವಿವಿಧ ಸಚಿವಾಲಯಗಳು ಮತ್ತು ಇಲಾಖೆಗಳಿಗಾಗಿ ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರಗಳನ್ನು ವಿತರಿಸಿದರು.

ದೇಶದಾದ್ಯಂತ 51 ಸಾವಿರಕ್ಕೂ ಹೆಚ್ಚು ಅಭ್ಯರ್ಥಿಗಳಿಗೆ ಕೇಂದ್ರ ಸರ್ಕಾರದ ಉದ್ಯೋಗ ನೇಮಕಾತಿ ಪತ್ರಗಳನ್ನು ನೀಡಲಾಗಿದೆ. ಮುಖ್ಯವಾಗಿ 18 ರಿಂದ 35 ವರ್ಷದೊಳಗಿನ ಅಭ್ಯರ್ಥಿಗಳು ಹೆಚ್ಚಿನ ಪ್ರಯೋಜನ ಪಡೆದಿದ್ದಾರೆ ಎಂದು ಸಚಿವರು ಹೇಳಿದರು.

ಪಾಲಕ್ಕಾಡ್‌ನಲ್ಲಿ ನಡೆದ 19ನೇ ಆವೃತ್ತಿಯ ರೋಜ್‌ಗಾರ್ ಮೇಳದಲ್ಲಿ ಭಾಗವಹಿಸಿದ್ದಕ್ಕೆ ಸಂತಸ ವ್ಯಕ್ತಪಡಿಸಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿಯ ನಾಯಕತ್ವದಲ್ಲಿ ಉದ್ಯೋಗ ಸೃಷ್ಟಿ ಮತ್ತು ಯುವಜನರ ಸಬಲೀಕರಣದತ್ತ ಭಾರತ ಸರ್ಕಾರ ಹೊಂದಿರುವ ಅಚಲ ಬದ್ಧತೆಯನ್ನು ಈ ಮೇಳ ಪ್ರತಿಬಿಂಬಿಸುತ್ತದೆ ಎಂದರು.

“ದೇಶದ ಯುವಜನತೆಗೆ ದೀಪಾವಳಿ ಉಡುಗೊರೆಯಾಗಿ 2022ರ ಅಕ್ಟೋಬರ್ 22ರಂದು ಪ್ರಧಾನಿಗಳು ರೋಜ್‌ಗಾರ್ ಮೇಳವನ್ನು ಪ್ರಾರಂಭಿಸಿದರು. ಇದು ಕೇವಲ ಸಾಂಪ್ರದಾಯಿಕ ಉದ್ಯೋಗ ಮೇಳವಲ್ಲ; ಭಾರತ ಸರ್ಕಾರದ ಅತ್ಯಂತ ಮಹತ್ವದ ಕಾರ್ಯಕ್ರಮವಾಗಿದೆ,” ಎಂದು ಹೇಳಿದರು.

ಪಾರದರ್ಶಕ, ಸಮಯೋಚಿತ ಹಾಗೂ ತಂತ್ರಜ್ಞಾನ ಆಧಾರಿತ ಪ್ರಕ್ರಿಯೆಯ ಮೂಲಕ ದೇಶಾದ್ಯಂತ ಏಕಕಾಲದಲ್ಲಿ ನೇಮಕಾತಿ ಪತ್ರಗಳನ್ನು ವಿತರಿಸಲಾಗುತ್ತಿದೆ. 19ನೇ ರೋಜ್‌ಗಾರ್ ಮೇಳವನ್ನು 20 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ 47 ಸ್ಥಳಗಳಲ್ಲಿ ಏಕಕಾಲದಲ್ಲಿ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಈವರೆಗೆ ರೋಜ್‌ಗಾರ್ ಮೇಳದ ಮೂಲಕ 11 ಲಕ್ಷಕ್ಕೂ ಹೆಚ್ಚು ಯುವಜನರಿಗೆ ನೇಮಕಾತಿ ಪತ್ರಗಳನ್ನು ವಿತರಿಸಲಾಗಿದೆ. ಉದ್ಘಾಟನಾ ಸಂದರ್ಭದಲ್ಲೇ 75 ಸಾವಿರ ಯುವಜನರಿಗೆ ನೇಮಕಾತಿ ಪತ್ರಗಳನ್ನು ನೀಡಲಾಗಿತ್ತು. ಫೆಬ್ರವರಿ 2024ರಲ್ಲಿ ಒಂದೇ ದಿನದಲ್ಲಿ ಒಂದು ಲಕ್ಷಕ್ಕೂ ಅಧಿಕ ನೇಮಕಾತಿ ಮಾಡಲಾಗಿತ್ತು ಎಂದು ಹೇಳಿದರು.

ಈ ಆವೃತ್ತಿಯಲ್ಲಿ ಸಾವಿರಾರು ಯುವಜನರು ರೈಲ್ವೆ, ಗೃಹ ಸಚಿವಾಲಯ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಹಣಕಾಸು ಸೇವೆಗಳು ಹಾಗೂ ಉನ್ನತ ಶಿಕ್ಷಣ ಸೇರಿದಂತೆ ಹಲವು ಕೇಂದ್ರ ಸಚಿವಾಲಯಗಳು ಮತ್ತು ಇಲಾಖೆಗಳಿಗೆ ಸೇರ್ಪಡೆಯಾಗಲಿದ್ದಾರೆ ಎಂದು ಮಾಹಿತಿ ನೀಡಿದರು.

ಈ ಮೇಳದ ಪ್ರಮುಖ ವಿಶೇಷತೆಯೆಂದರೆ, ಎಂಟನೇ ತರಗತಿ ಉತ್ತೀರ್ಣರಿಂದ ಹಿಡಿದು ಪದವೀಧರರು, ಐಟಿಐ ಮತ್ತು ಡಿಪ್ಲೊಮಾ ಹೊಂದಿದವರು ಹಾಗೂ ರಾಷ್ಟ್ರೀಯ ಕೌಶಲ್ಯ ಅರ್ಹತಾ ಚೌಕಟ್ಟಿನ ಪ್ರಮಾಣಪತ್ರ ಹೊಂದಿರುವ ಯುವಜನರವರೆಗೆ ವಿವಿಧ ಶೈಕ್ಷಣಿಕ ಹಿನ್ನೆಲೆಯ ಅಭ್ಯರ್ಥಿಗಳಿಗೆ ಅವಕಾಶ ಕಲ್ಪಿಸಲಾಗಿದೆ ಎಂದು ಸಚಿವರು ಹೇಳಿದರು.

# “ಕೋಮುಗಲಭೆ ಆರೋಪಿಗಳ ಕೇಸ್ ವಾಪಸ್ ರಾಜ್ಯದ ಭದ್ರತೆಗೆ ಅಪಾಯ”

ಬೆಂಗಳೂರು




ಕಲಬುರ್ಗಿ ಜಿಲ್ಲೆಯ ಆಳಂದ ಪ್ರದೇಶದಲ್ಲಿ ನಡೆದ ಕೋಮುಗಲಭೆ ಪ್ರಕರಣಗಳ ಆರೋಪಿಗಳ ವಿರುದ್ಧದ ಕೇಸುಗಳನ್ನು ಹಿಂಪಡೆದಿರುವ ಕಾಂಗ್ರೆಸ್ ಸರ್ಕಾರದ ಕ್ರಮ ರಾಜ್ಯದ ಭದ್ರತೆಗೆ ಅಪಾಯಕಾರಿಯಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಆರೋಪಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಲಾಡ್ಲೆ ಮಶಾಕ್ ದರ್ಗಾ ಸಮೀಪ ಪೊಲೀಸರ ಮೇಲೆ ಹಲ್ಲೆ, ಸಚಿವರ ವಾಹನದ ಮೇಲೆ ಕಲ್ಲು ತೂರಾಟ ಹಾಗೂ ಕೋಮುಗಲಭೆಗೆ ಸಂಬಂಧಿಸಿದ ಪ್ರಕರಣಗಳಲ್ಲಿ ಸುಮಾರು 150 ಮಂದಿಯ ವಿರುದ್ಧದ ಕೇಸುಗಳನ್ನು ಸರ್ಕಾರ ವಾಪಸ್ ಪಡೆದಿದೆ ಎಂದು ದೂರಿದರು. ಪಿಎಫ್‌ಐ ಸಂಘಟನೆಗೆ ಸಂಬಂಧಿಸಿದವರ ಮೇಲಿನ ಪ್ರಕರಣಗಳನ್ನೂ ಕೈಬಿಡಲಾಗಿದೆ ಎಂದು ಆರೋಪಿಸಿದರು.

“ಮತಬ್ಯಾಂಕ್ ರಾಜಕಾರಣಕ್ಕಾಗಿ ಕಾಂಗ್ರೆಸ್ ಸರ್ಕಾರ ಈ ನಿರ್ಧಾರ ಕೈಗೊಂಡಿದೆ. ಮತ ನೀಡಿದರೆ ಸಾಕು, ಯಾವುದೇ ಕೃತ್ಯ ಮಾಡಿದರೂ ಬೆಂಬಲ ಸಿಗುತ್ತದೆ ಎಂಬ ಸಂದೇಶ ನೀಡಲಾಗುತ್ತಿದೆ” ಎಂದು ಟೀಕಿಸಿದರು.

ಬಾಂಗ್ಲಾದೇಶ ಮೂಲದ ಅಕ್ರಮ ಪ್ರವೇಶಕರ ಬಗ್ಗೆ ಉಲ್ಲೇಖಿಸಿದ ಅವರು, ರಾಜ್ಯದಲ್ಲಿ ಕೋಮುಗಲಭೆಗಳಿಗೆ ಪ್ರೋತ್ಸಾಹ ಸಿಗುತ್ತಿರುವುದು ಆತಂಕಕಾರಿ ಬೆಳವಣಿಗೆ ಎಂದರು. ಸರ್ಕಾರ ಈ ನಿರ್ಧಾರದಿಂದ ಹಿಂದೆ ಸರಿಯದಿದ್ದರೆ ಬಿಜೆಪಿ ಹೋರಾಟ ನಡೆಸಲಿದೆ ಎಂದು ಎಚ್ಚರಿಕೆ ನೀಡಿದರು.

ಶಾಲಾ–ಕಾಲೇಜುಗಳಲ್ಲಿ ಹಿಜಾಬ್‌ಗೆ ಅವಕಾಶ ಹಾಗೂ ಅಲ್ಪಸಂಖ್ಯಾತ ಸಮುದಾಯಕ್ಕೆ ನೀಡಿರುವ ಅನುದಾನಗಳ ವಿಚಾರವನ್ನೂ ಉಲ್ಲೇಖಿಸಿದ ಅವರು, “ಕೇವಲ ಮತಗಳಿಗಾಗಿ ಓಲೈಕೆ ರಾಜಕಾರಣ ನಡೆಯುತ್ತಿದೆ” ಎಂದು ಆರೋಪಿಸಿದರು.

ಆನೇಕಲ್‌ನಲ್ಲಿ ನಿರ್ಮಾಣವಾಗುತ್ತಿರುವ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣ ಯೋಜನೆ ಕುರಿತು ಪ್ರತಿಕ್ರಿಯಿಸಿದ ಅವರು, “ರೈತರು ಹಾಗೂ ಪರಿಸರವಾದಿಗಳ ವಿರೋಧದ ನಡುವೆಯೂ ಯೋಜನೆ ಮುಂದುವರಿದಿದೆ. ಕ್ರೀಡಾಂಗಣದ ಸುತ್ತಲಿನ ಜಮೀನುಗಳ ಬೆಲೆ ಏರಿಸಿ ಕಮಿಷನ್ ಪಡೆಯುವ ಉದ್ದೇಶ ಇದರಲ್ಲಿ ಇದೆ” ಎಂದು ಆರೋಪಿಸಿದರು.

“ಚಿನ್ನಸ್ವಾಮಿ ಕ್ರೀಡಾಂಗಣವೇ ವರ್ಷಕ್ಕೆ ಕೆಲವೇ ಬಾರಿ ಬಳಸಲಾಗುತ್ತದೆ. ಹೊಸ ಕ್ರೀಡಾಂಗಣದ ಅಗತ್ಯವೇನು?” ಎಂದು ಪ್ರಶ್ನಿಸಿದರು.

ಪೆಟ್ರೋಲ್ ಮತ್ತು ಡೀಸೆಲ್ ದರ ಏರಿಕೆ ಬಗ್ಗೆ ಮಾತನಾಡಿದ ಅವರು, ಅಂತಾರಾಷ್ಟ್ರೀಯ ಮಾರುಕಟ್ಟೆಯ ಯುದ್ಧ ಪರಿಸ್ಥಿತಿಯಿಂದ ತೈಲದರ ಏರಿಕೆಯಾಗಿದೆ ಎಂದರು. “ರಾಜ್ಯ ಸರ್ಕಾರಕ್ಕೂ ಹೆಚ್ಚುವರಿ ತೆರಿಗೆ ಆದಾಯ ಬರುತ್ತಿದೆ. ಜನರ ಬಗ್ಗೆ ಕಾಳಜಿ ಇದ್ದರೆ ರಾಜ್ಯ ಸರ್ಕಾರ ತೆರಿಗೆ ಕಡಿಮೆ ಮಾಡಲಿ” ಎಂದು ಆಗ್ರಹಿಸಿದರು.

“ನ್ಯಾಯಾಲಯದ ತೀರ್ಪು ಹಾಗೂ ಅಭಿಪ್ರಾಯಗಳಿಗೆ ಎಲ್ಲರೂ ಗೌರವ ಕೊಡಬೇಕು. ನ್ಯಾಯಾಂಗದ ವಿರುದ್ಧ ಮಾತನಾಡುವುದು ಸರಿಯಲ್ಲ” ಎಂದು ಅವರು ಹೇಳಿದರು.

# ಬೆಳ್ಳಂ ಬೆಳಗ್ಗೆ ಜಟಿಜಟಿ ಮಳೆ

ಬೆಂಗಳೂರು

ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಮೇ 23ಬೆಳ್ಳಂಬೆಳಗ್ಗೆಯೇ ಜಿಟಿ ಜಿಟಿ ಮಳೆಯಾಗಿದೆ. ನಗರದ ಹಲವು ಭಾಗಗಳಲ್ಲಿ ಮಳೆ ಆರಂಭವಾಗಿದ್ದು, ವೀಕೆಂಡ್ ಮೂಡ್‌ನಲ್ಲಿದ್ದ ಬೆಂಗಳೂರಿಗರಿಗೆ ತಂಪಾದ ವಾತಾವರಣದ ಅನುಭವ ನೀಡಿದೆ.

ಕಳೆದ ಕೆಲವು ದಿನಗಳಿಂದ ಸಾಧಾರಣ ಬಿಸಿಲಿನಿಂದ ಕೂಡಿದ್ದ ರಾಜಧಾನಿಯಲ್ಲಿ, ಇಂದು ಮುಂಜಾನೆಯಿಂದಲೇ ಮೋಡ ಕವಿದ ವಾತಾವರಣವಿತ್ತು. ಸದ್ಯ ನಗರದ ಪ್ರಮುಖ ಪ್ರದೇಶಗಳಾದ ಶಾಂತಿನಗರ, ರಿಚ್ಮಂಡ್ ಟೌನ್, ಮೆಜೆಸ್ಟಿಕ್, ಕಾರ್ಪೊರೇಷನ್ ಮತ್ತು ಸುತ್ತಮುತ್ತಲಿನ ಹತ್ತಿರದ ಜಾಗಗಳಲ್ಲಿ ಮಳೆಯ ಸಿಂಚನವಾಗುತ್ತಿದೆ.

ವೀಕೆಂಡ್ ಆರಂಭದ ದಿನವಾದ ಶನಿವಾರ ಮುಂಜಾನೆಯೇ ಮಳೆ ಶುರುವಾಗಿರುವುದರಿಂದ ಕಚೇರಿಗೆ ಹೋಗುವವರು ಮತ್ತು ಅಗತ್ಯ ಕೆಲಸಗಳಿಗಾಗಿ ಹೊರಟಿದ್ದ ವಾಹನ ಸವಾರರು ಕೊಂಚ ಪರದಾಡುವಂತಾಯಿತು.

ಆದರೆ, ಸುಡುವ ಬಿಸಿಲಿಗೆ ಬಸವಳಿದಿದ್ದ ಜನರಿಗೆ ಈ ಜಿಟಿ ಜಿಟಿ ಮಳೆ ಸದ್ಯ ನೆಮ್ಮದಿ ತಂದಿದ್ದು, ನಗರದಾದ್ಯಂತ ಹಿತಕರ ಹಾಗೂ ತಂಪಾದ ಹವಾಮಾನ ನಿರ್ಮಾಣವಾಗಿದೆ.

ಮುಂದಿನ ಕೆಲವು ಗಂಟೆಗಳ ಕಾಲ ನಗರದ ಹಲವೆಡೆ ಇದೇ ರೀತಿಯ ಸಾಧಾರಣ ಅಥವಾ ಜಿಟಿ ಜಿಟಿ ಮಳೆ ಮುಂದುವರಿಯುವ ಸಾಧ್ಯತೆಯಿದೆ ಎಂದು ಹವಾಮಾನ ಮೂಲಗಳು ತಿಳಿಸಿವೆ.

# ‘ಮಾದಾವರ-ತುಮಕೂರು ಮೆಟ್ರೋಗೆ ಡಿಪಿಆರ್ ಸಲ್ಲಿಕೆ

ತುಮಕೂರು

ಬೆಂಗಳೂರು ಮತ್ತು ತುಮಕೂರು ನಿವಾಸಿಗಳ ಬಹುದಿನಗಳ ಕನಸಾದ ‘ಮಾದಾವರ–ತುಮಕೂರು ಮೆಟ್ರೋ ಯೋಜನೆ’ಗೆ ಸಂಬಂಧಿಸಿದಂತೆ ಗೃಹ ಸಚಿವ ಜಿ. ಪರಮೇಶ್ವರ್ ಶನಿವಾರ ಮಹತ್ವದ ಘೋಷಣೆ ಮಾಡಿದ್ದಾರೆ.

ಯೋಜನೆಯ ವಿಸ್ತೃತ ಯೋಜನಾ ವರದಿ ಸಿದ್ಧವಾಗಿದ್ದು, ಶೀಘ್ರದಲ್ಲೇ ಅದನ್ನು ರಾಜ್ಯ ಸಚಿವ ಸಂಪುಟ ಸಭೆಯ ಮುಂದೆ ಮಂಡಿಸಲಾಗುವುದು ಎಂದು ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಘೋಷಣೆಯಂತೆ ಈ ಹಿಂದೆ ಹೈದರಾಬಾದ್ ಮೂಲದ ಕಂಪನಿಯೊಂದಕ್ಕೆ 3.5 ಕೋಟಿ ರೂ. ವೆಚ್ಚದಲ್ಲಿ ಕಾರ್ಯಸಾಧ್ಯತಾ ವರದಿ ಸಿದ್ಧಪಡಿಸಲು ಜವಾಬ್ದಾರಿ ನೀಡಲಾಗಿತ್ತು. ಆ ವರದಿಯಲ್ಲಿ ಯೋಜನೆ ಜಾರಿ ಸಾಧ್ಯ ಎಂದು ಬಲವಾಗಿ ಶಿಫಾರಸು ಮಾಡಲಾಗಿತ್ತು. ಅದರ ಬೆನ್ನಲ್ಲೇ ಮೆಟ್ರೋ ಅಧಿಕಾರಿಗಳು ಟೆಂಡರ್ ಕರೆದು ಡಿಪಿಆರ್ ಸಿದ್ಧಪಡಿಸುವ ಕೆಲಸ ವಹಿಸಿದ್ದರು. ಈಗ ಆ ಕಂಪನಿಯು ಡಿಪಿಆರ್ ಪೂರ್ಣಗೊಳಿಸಿ ಸರ್ಕಾರಕ್ಕೆ ಸಲ್ಲಿಸಿದೆ ಎಂದು ವಿವರಿಸಿದರು.

ಸುಮಾರು 20,000 ಕೋಟಿ ರೂಪಾಯಿ ವೆಚ್ಚದ ಈ ಬೃಹತ್ ಮೆಟ್ರೋ ಯೋಜನೆಯನ್ನು ಸಾರ್ವಜನಿಕ–ಖಾಸಗಿ ಸಹಭಾಗಿತ್ವದ ಮಾದರಿಯಲ್ಲಿ ಜಾರಿಗೊಳಿಸಲು ಸರ್ಕಾರ ಸಿದ್ಧತೆ ನಡೆಸುತ್ತಿದೆ.

# ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಿ: ಡಿಸಿ



ಬೆಂಗಳೂರು ಗ್ರಾಮಾಂತರ

ಮುಂಗಾರು ಹಂಗಾಮಿನಲ್ಲಿ ಮಳೆಯಿಂದಾಗಿ ಸೊಳ್ಳೆಗಳ ಉತ್ಪತ್ತಿ ಹೆಚ್ಚಾಗಲಿದ್ದು ಇದರಿಂದ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಇರುವುದರಿಂದ ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಿ ಎಂದು ಜಿಲ್ಲಾಧಿಕಾರಿ ಡಾ.ಕೆ ಎನ್ ಅನುರಾಧ ಅವರು ಆರೋಗ್ಯಾಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಡೆಂಗಿ ಜ್ವರ, ಚಿಕನ್ ಗುನ್ಯಾ ಹಾಗೂ ಜಿಕಾ ಸೋಂಕು ಹರಡುವ ಈಡೀಸ್ ಜಾತಿಯ ಸೊಳ್ಳೆಗಳು ಪೂರ್ವ ಮುಂಗಾರು ಹಾಗೂ ಮುಂಗಾರು ನಂತರದ ದಿನಗಳಲ್ಲಿ ಹೆಚ್ಚಾಗಿ ಉತ್ಪತ್ತಿಯಾಗುತ್ತವೆ, ಇದರಿಂದ ಡೆಂಗ್ಯೂ ಸೇರಿದಂತೆ ಇತರೆ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಅಧಿಕವಾಗಿರುತ್ತದೆ. ಹವಾಮಾನ ಬದಲಾವಣೆ ಪರಿಣಾಮ, ತ್ವರಿತ ನಗರೀಕರಣ, ನೀರಿನ ಕೊರತೆ, ವ್ಯವಸ್ಥಿತವಲ್ಲದ ಕಟ್ಟಡ ಕಾಮಗಾರಿ, ಹೆಚ್ಚುತ್ತಿರುವ ಜನರ ಚಲನವಲನ ಜೊತೆಗೆ ಘನ ತ್ಯಾಜ್ಯ ವಸ್ತುಗಳ ಅಸಮರ್ಪಕ ವಿಲೇವಾರಿಯಿಂದ ಈಡಿಸ್ ಸೊಳ್ಳೆಗಳ ಉತ್ಪತ್ತಿ ಕಾರಣವಾಗುತ್ತಿದೆ.

ಸೊಳ್ಳೆಗಳಿಂದ ಹರಡುವ ರೋಗಗಳಾದ ಮಲೇರಿಯಾ, ಮೆದುಳು ಜ್ವರ, ಡೆಂಗಿ ಜ್ವರ, ಚಿಕ್ಕನ್ ಗುನ್ಯಾ ಹಾಗೂ ಆನೇಕಾಲು ರೋಗಗಳನ್ನು ತಡೆಗಟ್ಟಲು ಮತ್ತು ನಿಯಂತ್ರಿಸಲು ಸಂಬಂಧಪಟ್ಟ ಇಲಾಖೆಗಳ ಸಹಕಾರವು ಮುಖ್ಯ ಜೊತೆಗೆ ಸಾರ್ವಜನಿಕರು ಕೂಡ ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳಬೇಕು ಎಂದರು.

ಸೊಳ್ಳೆ ಉತ್ಪತ್ತಿ ತಾಣಗಳಾದ ತೆರೆದ ತೊಟ್ಟಿ, ಸಿಮೆಂಟ್ ತೊಟ್ಟಿ, ಪ್ಲಾಸ್ಟಿಕ್ ಡ್ರಂಗಳು, ಮೇಲ್ಹಾವಣಿ ಇಲ್ಲದ ತೊಟ್ಟಿಗಳು, ಕಿರು ನೀರು ಸರಬರಾಜು ಮಾಡುವಂತಹ ತೊಟ್ಟಿಗಳು ಹೀಗೆ ಎಲ್ಲೆಲ್ಲಿ ಸ್ವಚ್ಛ ನೀರು ನಿಲ್ಲಬಹುದು ಅಲ್ಲೆಲ್ಲ ಸೊಳ್ಳೆಗಳು ಹೇರಳವಾಗಿ ಉತ್ಪತ್ತಿಯಾಗುತ್ತವೆ. ಹಾಗಾಗಿ ಸಾರ್ವಜನಿಕರು ಎಲ್ಲಾ ನೀರಿನ ತೊಟ್ಟಿಗಳು, ಡ್ರಮ್ ಬ್ಯಾರೆಲ್ ಗಳು ಏರ್ ಕೂಲರ್ ಇತ್ಯಾದಿಗಳನ್ನು ವಾರಕ್ಕೊಮ್ಮೆ ಖಾಲಿ ಮಾಡಿ ಸ್ವಚ್ಛಪಡಿಸಿ ಮತ್ತೆ ಭರ್ತಿ ಮಾಡಿಕೊಳ್ಳುವುದು. ಜೊತೆಗೆ ಭದ್ರವಾದ ಮುಚ್ಚಳ ಅಥವಾ ಬಟ್ಟೆಯನ್ನು ಮುಚ್ಚಬೇಕು. ಆರೋಗ್ಯ ಇಲಾಖೆಯಿಂದ ಹಮ್ಮಿಕೊಂಡ ಸೊಳ್ಳೆ ನಿಯಂತ್ರಣ ಕ್ರಮಗಳಿಗೆ ಸಹಕಾರ ನೀಡುವುದು. ಸ್ವಯಂ ರಕ್ಷಣಾ ವಿಧಾನಗಳಾದ ಸೊಳ್ಳೆ ನಿರೋಧಕಗಳನ್ನು ಹಾಗೂ ಸೊಳ್ಳೆ ಪರದೆಗಳನ್ನು ಬಳಸುವುದು. ಮನೆ ಕಿಟಕಿಗಳಿಗೆ ಮೆಶ್ ಅಳವಡಿಸುವುದು ಮೈತುಂಬ ಬಟ್ಟೆ ಧರಿಸುವುದು. ಜೊತೆಗೆ ಹಗಲಿನಲ್ಲಿ ಸೊಳ್ಳೆಗಳ ಕಚ್ಚುವಿಕೆಯಿಂದ ಸಾಧ್ಯವಾದಷ್ಟು ದೂರ ಇರಬೇಕು.

ಒಡೆದ ಟೈರ್ ಗಳು, ತೆಂಗಿನ ಚಿಪ್ಪುಗಳು, ಸಿಮೆಂಟ್ ತೊಟ್ಟಿಗಳು, ತೆರೆದ ಪ್ಲಾಸ್ಟಿಕ್ ಪರಿಕರಗಳು, ಪ್ಲಾಸ್ಟಿಕ್ ಡ್ರಮ್ ಗಳು, ಬಕೆಟ್ಗಳು, ನೀರಿನ ತೊಟ್ಟಿಗಳು, ಅನುಪಯುಕ್ತ ಒರಳು ಕಲ್ಲುಗಳು, ಬಿಸಾಡಿದ ಪ್ಲಾಸ್ಟಿಕ್ ಲೋಟಗಳು, ಬಾಟಲ್ ಗಳು, ಮಡಕೆಗಳು, ಹೊಡೆದ ಪಿಂಗಾಣಿ ಪಾತ್ರೆಗಳು, ಹೂವಿನ ಕುಂಡಗಳ ತಟ್ಟೆಗಳು ಇತ್ಯಾದಿ.

ಸಭೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಆರೋಗ್ಯಾಧಕಾರಿ ಲಕ್ಕ ಕೃಷ್ಣ ರೆಡ್ಡಿ, ಅರೋಗ್ಯಾಧಿಕಾರಿಗಳಾದ ಡಾ.ಹೇಮಾವತಿ, ಡಾ.ಕೋಮಲ, ಜಿಲ್ಲಾ ಮತ್ತು ತಾಲೂಕು ಆರೋಗ್ಯ ಅಧಿಕಾರಿಗಳು, ವೈದ್ಯಾಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

# ಉಚಿತ ದಂತ ತಪಾಸಣಾ ಶಿಬಿರ

ಕೋಲಾರ

ಕೋಲಾರ ಚಿಕ್ಕಬಳ್ಳಾಪುರ ಕಾರ್ಯನಿರತ ಪತ್ರಕರ್ತರ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತದ ಸಹಯೋಗದಲ್ಲಿ ನಗರದ ಅರಳೇಪೇಟೆಯಲ್ಲಿರುವ ಡಾ.ರಕ್ಷಣ್‌ರ ದಂತಿಕಾ ಕ್ಲಿನಿಕ್ ನಲ್ಲಿ ಮೇ.24 ರಂದು ಭಾನುವಾರ ಬೆಳಿಗ್ಗೆ 9.30 ರಿಂದ ಸಂಜೆ 4 ಗಂಟೆಯವರೆಗೆ ಉಚಿತ ದಂತ ತಪಾಸಣಾ ಶಿಬಿರವನ್ನು ಏರ್ಪಡಿಸಲಾಗಿದೆ.

ಶಿಬಿರದಲ್ಲಿ ಆಧುನಿಕ ದಂತ ಚಿಕಿತ್ಸಾ ಪದ್ಧತಿಗಳಲ್ಲಿ ಪರಿಣಿತರಾದ ದಂತ ವೈದ್ಯ ಡಾ.ರಕ್ಷಣ್ ನೇತೃತ್ವದ ವೈದ್ಯರ ತಂಡವು ದಂತ ತಪಾಸಣೆಯನ್ನು ನಡೆಸಲಿದ್ದು, ಪತ್ರಕರ್ತರು, ಪತ್ರಕರ್ತರ ಕುಟುಂಬದ ಸದಸ್ಯರು ಹಾಗೂ ಸಾರ್ವಜನಿಕರು ಈ ಶಿಬಿರದ ಪ್ರಯೋಜನ ಪಡೆದುಕೊಳ್ಳಬೇಕೆಂದು ಸಹಕಾರ ಸಂಘದ ಅಧ್ಯಕ್ಷ ಕೆ.ಎಸ್. ಗಣೇಶ್ ಉಪಾಧ್ಯಕ್ಷ ಅಬ್ಬಣಿ ಶಂಕರ್ ಕೋರಿದ್ದಾರೆಂದು ಸಂಘದ ಕಾರ್ಯದರ್ಶಿ ಬಿ.ಎಸ್.ಗಂಗಾಧರ್ ತಿಳಿಸಿದ್ದಾರೆ.

ದಂತ ತಪಾಸಣಾ ಶಿಬಿರದಲ್ಲಿ ಚಿಕಿತ್ಸೆ ಅಗತ್ಯವಿರುವ ರೋಗಿಗಳಿಗೆ ರಿಯಾಯಿತಿ ದರದಲ್ಲಿ ವಿವಿಧ ದಂತ ಚಿಕಿತ್ಸೆಗಳನ್ನು ಮಾಡಲಾಗುವುದು ಎಂದು ಡಾ.ರಕ್ಷಣ್ ತಿಳಿಸಿದ್ದಾರೆ.



23, ಮೇ 2026 ಅಧಿಕ ಜ್ಯೇಷ್ಠ ಶುದ್ಧ ಸಪ್ತಮಿ, ಶನಿವಾರದಂದು ಶ್ರೀಮನ್ಮಾಧವತೀರ್ಥ ಮಠದ ಪೀಠಾಧಿಪತಿಗಳಾದ ಶ್ರೀಶ್ರೀ108 ಶ್ರೀವಿದ್ಯಾವಲ್ಲಭ ಮಾಧವತೀರ್ಥ ಶ್ರೀಪಾದಂಗಳವರಿಂದ ಬೆಂಗಳೂರಿನ ಮತ್ತಿಕೆರೆ ಶ್ರೀರಾಘವೇಂದ್ರಸ್ವಾಮಿಗಳವರ ಮಠದಲ್ಲಿರುವ ಶ್ರೀಕಂಬಾಲೂರು ರಾಮಚಂದ್ರತೀರ್ಥ ಶ್ರೀಪಾದಂಗಳವರಿಂದ ಪೂಜಿತ ಶ್ರೀಸೀತಾಲಕ್ಷ್ಮಣ ಸಮೇತ ಶ್ರೀರಾಮಚಂದ್ರದೇವರಿಗೆ ಹಾಗು ಶ್ರೀಮುಖ್ಯಪ್ರಾಣದೇವರು ಮತ್ತು ಶ್ರೀರಾಘವೇಂದ್ರಸ್ವಾಮಿಗಳವರ ಮೃತ್ತಿಕಾ ವೃಂದಾವನಕ್ಕೆ 108 ಕೆಜಿ ಮಧು ಅಭಿಷೇಕ ನೆರವೇರಿತು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
24/05/2026
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ತೆರಿಗೆ ಸಂಗ್ರಹಣೆಯಲ್ಲಿ ಉತ್ತಮ ಸಾಧನೆ

ವಿಜಯಪುರ

ಹೋಬಳಿಯ ಕೋರಮಂಗಲ ಗ್ರಾಮ ಪಂಚಾಯಿತಿಯು 2025–26 ನೇ ಸಾಲಿನಲ್ಲಿ, ಜಿಲ್ಲೆಯಲ್ಲೆ, ಅತಿ ಹೆಚ್ಚು ತೆರಿಗೆ ಸಂಗ್ರಹಣೆ ವಸೂಲಿ ಮಾಡಿ ಗಣನೀಯವಾದ ಸಾಧನೆ ಮಾಡಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಪ್ರಶಂಸನಾ ಪತ್ರವನ್ನು ನೀಡಿ ಅಭಿನಂದಿಸಿದೆ.

ಗ್ರಾಮ ಪಂಚಾಯಿತಿಯು 2025–26 ನೇ ಸಾಲಿಗೆ ಪಂಚಾಯಿತಿಯಲ್ಲಿ ತಯಾರಿಸಿದ್ದ ಅಂದಾಜು ಬಜೆಟ್ ನಲ್ಲಿ 13 ಲಕ್ಷ 113 ರೂಪಾಯಿಗಳ ತೆರಿಗೆ ಸಂಗ್ರಹಣೆಯ ಗುರಿಯನ್ನು ಹೊಂದಿತ್ತು. ಮಾರ್ಚ್. 2026 ರವರೆಗೆ 17 ಲಕ್ಷ 32 ಸಾವಿರದ 464 ರೂಪಾಯಿಗಳು ತೆರಿಗೆ ಸಂಗ್ರಹಿಸುವ ಮೂಲಕ ಶೇ.133.25 ರಷ್ಟು ಸಾಧನೆ ಮಾಡಿದೆ.

ಕೋರಮಂಗಲ ಗ್ರಾಮ ಪಂಚಾಯಿತಿಯಲ್ಲಿ, ಅತಿ ಹೆಚ್ಚು ತೆರಿಗೆ ಸಂಗ್ರಹಣೆ ಮಾಡಲು ಸ್ಥಳೀಯ ಜನಪ್ರತಿನಿಧಿಗಳು ತೋರಿದ ಬದ್ಧತೆ ಮತ್ತು ಸ್ಥಳೀಯವಾಗಿ ಸಾರ್ವಜನಿಕರು, ತೋರಿದ ಪ್ರಮಾಣೀಕತೆಯಿಂದ ಪಂಚಾಯಿತಿಗೆ ಪ್ರಶಂಸನಾ ಪತ್ರದ ಗರಿ ಮುಡಿಗೇರಿದೆ.

ಗ್ರಾಮೀಣ ಪ್ರದೇಶದಲ್ಲಿ, ಹಳ್ಳಿಗಳ ಸರ್ವತೋಮುಖ ಅಭಿವೃದ್ಧಿಯಲ್ಲಿ ಸಾರ್ವಜನಿಕರು ಕಟ್ಟುವಂತಹ ತೆರಿಗೆ ಹಣದ ಪ್ರಮಾಣದ ಮೇಲೆ, ಸರಕಾರದಿಂದ ಗ್ರಾಮ ಪಂಚಾಯಿತಿ ಬಿಡುಗಡೆ ಮಾಡಲಾಗುವಂತಹ ಅನುದಾನಗಳ ಪ್ರಮಾಣವನ್ನೂ ನಿರ್ಧರಿಸಲಾಗುತ್ತದೆ. ಸರಕಾರದಿಂದ ಹೆಚ್ಚು ಅನುದಾನ ಸಿಗಬೇಕಾದರೆ, ಪಂಚಾಯಿತಿಗಳಲ್ಲಿಯೂ ಹೆಚ್ಚು ತೆರಿಗೆ ಸಂಗ್ರಹವಾಗಬೇಕಿದೆ. ಈ ನಿಟ್ಟಿನಲ್ಲಿ ಪಂಚಾಯಿತಿ ಅಧಿಕಾರಿಗಳು, ಸಿಬ್ಬಂದಿ, ನಿರಂತರವಾಗಿ ಪಂಚಾಯಿತಿ ವ್ಯಾಪ್ತಿಯ ಹಳ್ಳಿಗಳಿಗೆ ಸಂಚರಿಸಿ, ತೆರಿಗೆ ಸಂಗ್ರಹ ಮಾಡಿರುವುದು ಸಹಾ ಪಂಚಾಯಿತಿಗೆ ಕೀರ್ತಿ ತಂದುಕೊಟ್ಟಿದೆ.

ಸಾರ್ವಜನಿಕರಿಂದ ಪೂರ್ಣ ಪ್ರಮಾಣದಲ್ಲಿ ತೆರಿಗೆ ಕಟ್ಟಿಸಿಕೊಳ್ಳುವುದು ಸುಲಭದ ಮಾತಲ್ಲ. ಸಿಬ್ಬಂದಿ ಸಾಕಷ್ಟು ಬಾರಿ ಮನೆಗಳ ಬಳಿಗೆ ಸುತ್ತಬೇಕಾಗುತ್ತದೆ. ಆದರೂ ನಮ್ಮ ಪಂಚಾಯಿತಿ ವ್ಯಾಪ್ತಿಯ ಹಳ್ಳಿಗಳಲ್ಲಿ, ಆಯಾ ಗ್ರಾಮಗಳ ಜನಪ್ರತಿನಿಧಿಗಳ ಸಹಕಾರದಿಂದ ತೆರಿಗೆ ಸಂಗ್ರಹ ಮಾಡಿರುವುದರಿಂದ ಅಭಿವೃದ್ಧಿ ಕಾರ್ಯಗಳಿಗೆ ಸಹಕಾರಿಯಾಗುತ್ತದೆ. ಹಿಂದಿನ ಸಾಲಿನ ಅಧ್ಯಕ್ಷರು, ಸದಸ್ಯರುಗಳು, ಅಧಿಕಾರಿಗಳು ಮತ್ತು ಸಿಬ್ಬಂದಿ ಅಭಿನಂದನಾರ್ಹರು.

# ‘ಉತ್ತಮವಾದ ಆರೋಗ್ಯವಂತ ಸಮಾಜ ನಿರ್ಮಾಣಕ್ಕಾಗಿ ಪರಿಸರವನ್ನು ಸಂರಕ್ಷಣೆ ಮಾಡುವುದು ಅಗತ್ಯ’

ವಿಜಯಪುರ

ಉತ್ತಮವಾದ ಆರೋಗ್ಯವಂತ ಸಮಾಜ ನಿರ್ಮಾಣ ಮಾಡಬೇಕಾದರೆ, ನಮ್ಮ ಸುತ್ತಮುತ್ತಲಿನ ಪರಿಸರವನ್ನು ಸಂರಕ್ಷಣೆ ಮಾಡುವುದರ ಜೊತೆಗೆ, ಹೆಚ್ಚಿನ ಪ್ರಮಾಣದಲ್ಲಿ ಗಿಡಮರಗಳನ್ನು ಬೆಳೆಸುವುದು ನಮ್ಮ ಬದ್ಧತೆಯಾಗಬೇಕು ಎಂದು ಶ್ರೀ ಸಾಯಿ ಸಮೂಹ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಡಾ.ಬಿ.ಮಂಜುನಾಥ್ ಹೇಳಿದರು.

ಹೋಬಳಿಯ ಚಂದೇನಹಳ್ಳಿ ಗೇಟ್ ನಲ್ಲಿರುವ ಶ್ರೀಸಾಯಿ ಜ್ಞಾನಗಂಗಾ ಪದವಿ ಕಾಲೇಜಿನ ಆವರಣದಲ್ಲಿ, ಆಯೋಜಿಸಿದ್ದ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸ್ವಚ್ಛವಾದ ವಾತಾವರಣ ನಿರ್ಮಾಣ ಮಾಡುವುದರ ಜೊತೆಗೆ, ಪರಿಸರ ಮಾಲಿನ್ಯವಾಗದಂತೆ ತಡೆಯುವುದು, ಮಣ್ಣಿನ ಸವಕಳಿ ತಡೆಯುವುದಕ್ಕಾಗಿ ಗಿಡಗಳನ್ನು ಬೆಳೆಸುವುದೊಂದೇ ನಮಗೆ ಉತ್ತಮವಾದ ಮಾರ್ಗವಾಗಿದೆ ಎಂದರು.

ಶ್ರೀ ಸಾಯಿ ಜ್ಞಾನಗಂಗಾ ಪದವಿ ಕಾಲೇಜಿನ ಪ್ರಾಂಶುಪಾಲ ಎಸ್.ಎಸ್. ಪ್ರದೀಪ್ ಮಾತನಾಡಿ, ನಗರೀಕರಣ ಹೆಚ್ಚಾಗುತ್ತಿದ್ದಂತೆ, ಪರಿಸರದ ಮೇಲೆ ನಿರಂತರವಾಗಿ ದಾಳಿಯಾಗುತ್ತಿರುವುದರ ಪರಿಣಾಮವಾಗಿ, ಜಾಗತಿಕವಾಗಿ ತಾಪಮಾನ ನಿರಂತರವಾಗಿ ಏರಿಕೆಯಾಗುತ್ತಿದ್ದು, ಯುವಪೀಳಿಗೆ ಇದನ್ನು ಮನಗಾಣಬೇಕು. ಪ್ರತಿಯೊಬ್ಬರೂ ತಮ್ಮ ಹೆಸರಿನಲ್ಲಿ ಒಂದೊಂದು ಸಸಿಯನ್ನು ನೆಟ್ಟು ಪೋಷಣೆ ಮಾಡಬೇಕು ಎಂದರು.

ಕಾಲೇಜಿನ ಕೈ–ತೋಟದ ಆವರಣಗಳ ಸ್ವಚ್ಛತೆ, ಪ್ಲಾಸ್ಟಿಕ್ ನಿರ್ಮೂಲನೆ ಯೊಂದಿಗೆ ವಿವಿಧ ರೀತಿಯ ಹೂ ಹಾಗೂ ಹಣ್ಣಿನ ಗಿಡಗಳನ್ನು ನೆಡಲಾಯಿತು.

ನಾರಾಯಣಪುರದ ಶ್ರೀಸಾಯಿ ಜ್ಞಾನಗಂಗಾ ಪದವಿ ಪೂರ್ವ ಕಾಲೇಜಿನ ಕಾರ್ಯದರ್ಶಿ ಬಿ.ಕೆ. ನಾರಾಯಣಸ್ವಾಮಿ, ರಾಷ್ಟ್ರೀಯ ಯುವ ಯೋಜನೆಯ ರಾಜ್ಯ ಸಂಯೋಜಕ ಡಾ.ವಿ.ಪ್ರಶಾಂತ್, ಎನ್. ಪ್ರಸನ್ನಕುಮಾರ್, ಉಪನ್ಯಾಸಕರಾದ ಮುರಳಿಮೋಹನ್, ಮುಬಾರಕ್, ಕೆ.ಅರ್ಚನ,. ಎಂ.ಅಂಬಿಕಾ, ಡಿ.ಎನ್.ನಾಗೇಶ್, ಎಂ.ಜಿ. ಹರೀಶ್, ಲಕ್ಷ್ಮಿದೇವಮ್ಮ, ಕೆ.ಎಂ.ನಾಗರಾಜ್, ಬಿ.ಎಸ್.ಶರತ್, ಎಂ.ಚೈತ್ರ ಹಾಜರಿದ್ದರು.

# ಅವಿರೋಧ ಆಯ್ಕೆ



ಕೋಲಾರ

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಕೋಲಾರ ತಾಲ್ಲೂಕು ಅಧ್ಯಕ್ಷರಾಗಿ ನೆರ್ನಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕ ಹಾಗೂ ಜಿಲ್ಲಾ ಸರ್ಕಾರಿ ನೌಕರರ ಸಂಘದ ನಿರ್ದೇಶಕರೂ ಆದ ಬಿ.ಎಸ್.ವೆಂಕಟಾಚಲಪತಿಗೌಡ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಕಾರ್ಯದರ್ಶಿಯಾಗಿ ಚೌಡದೇನಹಳ್ಳಿ ಶಾಲೆಯ ಶಿಕ್ಷಕ ಬಿ.ಸತೀಶ್, ಉಪಾಧ್ಯಕ್ಷರುಗಳಾಗಿ ನಗರದ ಕೋಟೆಯ ಉರ್ದು ಶಾಲೆ ಶಿಕ್ಷಕ ಅಯಾಜ್ ಅಹಮದ್, ವಕ್ಕಲೇರಿ ಶಾಲೆಯ ವಿ.ಭಾಗ್ಯಲಕ್ಷ್ಮಮ್ಮ ಹಾಗೂ ಖಜಾಂಚಿಯಾಗಿ ಸೀತಿ ಸರ್ಕಾರಿ ಶಾಲೆಯ ಟಿ.ಎನ್.ಅಶ್ವಥಪ್ಪ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಉಳಿದಮತೆ ಸಂಘದ ಸಹಕಾರ್ಯದರ್ಶಿಗಳಾಗಿ ಮೈಲಾಂಡಹಳ್ಳಿ ಶಾಲೆಯ ಆರ್.ಸವಿತಾ, ಮಟ್ನಹಳ್ಳಿ ಶಾಲೆಯ ಎಂ.ವಿ.ಸುಬ್ರಹ್ಮಣ್ಯಂ, ಸಂಘಟನಾ ಕಾರ್ಯದರ್ಶಿಗಳಾಗಿ ಐತರಾಸನಹಳ್ಳಿ ಶಾಲೆಯ ಸಿ.ಮುನಿರಾಜ, ಬೆಗ್ಲಿ ಬೆಣಜೇನಹಳ್ಳಿ ಶಾಲೆಯ ವಿ.ಮಂಜುಳಾ ಆಯ್ಕೆಯಾಗಿದ್ದಾರೆ ಎಂದು ಚುನಾವಣಾ ಧಿಕಾರಿಗಳು ತಿಳಿಸಿದ್ದಾರೆ.

ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ವೆಂಕಟಾಚಲಪತಿಗೌಡ ಮಾತನಾಡಿ, ಶಿಕ್ಷಕರು ನಮ್ಮ ಮೇಲೆ ನಂಬಿಕೆಯಿಟ್ಟು ಗೆಲ್ಲಿಸಿದ್ದಾರೆ ಅವರ ಆಶಯಗಳಿಗೆ ಕುತ್ತು ತರುವುದಿಲ್ಲ, ನಂಬಿಕೆ ಉಳಿಸಿಕೊಂಡು ಕೆಲಸ ಮಾಡುತ್ತೇನೆ ಎಂದು ತಿಳಿಸಿದರು.

ಶಿಕ್ಷಕರಿಗೆ ತಿಂಗಳ ಒಂದನೇ ತಾರೀಖು ವೇತನ ಬಟವಾಡೆ, ಅನುದಾನ ಬಿಡುಗಡೆ, ವೈದ್ಯಕೀಯ ಬಿಲ್ಲುಗಳ ಮಂಜೂರು, ಸೇವಾ ಪುಸ್ತಕ ದಾಖಲು ಸೇರಿದಂತೆ ಯಾವುದೇ ಸಮಸ್ಯೆಗಳಿದ್ದರೆ ಅವರ ಬೆನ್ನಲುಬಾಗಿ ನಿಲ್ಲುವುದಾಗಿ ತಿಳಿಸಿದ ಅವರು, ಶಿಕ್ಷಕರ ಹಿತ ಕಾಯಲು ಬದ್ದತೆಯಿಂದ ಕೆಲಸ ಮಾಡುವ ಭರವಸೆ ನೀಡಿದರು.

ನೂತನ ಅಧ್ಯಕ್ಷರಿಗೆ ಶಿಕ್ಷಕ ಗೆಳೆಯರ ಬಳಗದ ಅಧ್ಯಕ್ಷ ನಾರಾಯಣಸ್ವಾಮಿ ಸೇರಿದಂತೆ ನೂರಾರು ಶಿಕ್ಷಕರು ಅಭಿನಂದನೆ ಸಲ್ಲಿಸಿದರು.

# ಎಲ್‌ಒಸಿಯಲ್ಲಿ ಗುಂಡಿನಕಾಳಗ

ಜಮ್ಮು

ಜಮ್ಮು ಮತ್ತು ಕಾಶ್ಮೀರದ ರಜೌರಿ ಜಿಲ್ಲೆಯ ನಿಯಂತ್ರಣ ರೇಖೆ (ಎಲ್‌ಒಸಿ) ಬಳಿ ಶನಿವಾರ ಭಯೋತ್ಪಾದಕರು ಮತ್ತು ಭದ್ರತಾ ಪಡೆಗಳ ನಡುವೆ ಗುಂಡಿನ ಚಕಮಕಿ ಆರಂಭವಾಗಿದೆ. ಬೆಳಗ್ಗೆ 11:30ರ ಸುಮಾರಿಗೆ ಭಯೋತ್ಪಾದಕರ ಚಲನವಲನ ಕಂಡುಬಂದ ಬಳಿಕ ಕಾರ್ಯಾಚರಣೆ ನಡೆಯುತ್ತಿದೆ ಎಂದು ಭಾರತೀಯ ಸೇನೆಯ ವೈಟ್ ನೈಟ್ ಕಾರ್ಪ್ಸ್ (16 ಕಾರ್ಪ್ಸ್) ವಕ್ತಾರರು ಮಾಹಿತಿ ನೀಡಿದ್ದಾರೆ.

ಬೆಳಗ್ಗೆ 11:30ರ ಸುಮಾರಿಗೆ, ಜಮ್ಮು ಮತ್ತು ಕಾಶ್ಮೀರ ಪೊಲೀಸರು ಮತ್ತು ಸಿಆರ್‌ಪಿಎಫ್ ಜೊತೆಗೆ ನಡೆಸಿದ ಗುಪ್ತಚರ ಆಧಾರಿತ ಜಂಟಿ ಕಾರ್ಯಾಚರಣೆಯ ಸಮಯದಲ್ಲಿ ರಜೌರಿಯ ಗಂಭೀರ್ ಮುಗ್ಲಾನ್ ಸಾಮಾನ್ಯ ಪ್ರದೇಶದಲ್ಲಿ ಭಯೋತ್ಪಾದಕರ ಇರುವಿಕೆಯನ್ನು ಪತ್ತೆ ಮಾಡಲಾಯಿತು. ಸೇನಾ ಪಡೆಗಳು ತ್ವರಿತವಾಗಿ ಪ್ರತಿಕ್ರಿಯಿಸಿದವು. ಗುಂಡಿನ ಚಕಮಕಿ ಆರಂಭವಾಗಿದ್ದು, ಪ್ರದೇಶವನ್ನು ಸುತ್ತುವರೆಯಲಾಗಿದೆ” ಎಂದು ವಕ್ತಾರರು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.



ಮುಂಬರುವ ಬಕ್ರಿದ್ ಹಬ್ಬದ ಸಂದರ್ಭದಲ್ಲಿ ರಾಜ್ಯ, ಜಿಲ್ಲಾ ಮತ್ತು ತಾಲೂಕುಗಳಲ್ಲಿ ಅಕ್ರಮ ಗೋ ಸಾಗಣಿಕೆ ಮತ್ತು ಗೋಹತ್ಯೆಯನ್ನು ಸಂಪೂರ್ಣವಾಗಿ ನಿಲ್ಲಿಸುವಂತೆ (ತಡೆಗಟ್ಟುವಂತೆ) ಕೋರಿ ನಗರ ಪೊಲೀಸ್ ಠಾಣೆಯ ಸರ್ಕಲ್ ಇನ್ಸ್‌ಪೆಕ್ಟರ್ ಹಾಗೂ ಉಪ ವಿಭಾಗಾಧಿಕಾರಿಗಳಿಗೆ ವಿಶ್ವ ಹಿಂದೂ ಪರಿಷತ್ ಮತ್ತು ಬಜರಂಗದಳ ವತಿಯಿಂದ ಮನವಿ ಪತ್ರ ಸಲ್ಲಿಸಲಾಯಿತು.

# ಕೋಮುಲ್ ಹಾಲು ಸರಬರಾಜು ಕೇಂದ್ರ ಉದ್ಘಾಟನೆ

ಮುಳಬಾಗಿಲು

ಹಾಲು ಸರಬರಾಜು ಕ್ಷೇತ್ರದಲ್ಲಿ ಕೋಲಾರ ಹಾಲು ಒಕ್ಕೂಟವು ರಾಜ್ಯದಲ್ಲಿ ಎರಡನೇ ಸ್ಥಾನದಲ್ಲಿದ್ದು, ಗ್ರಾಹಕರಿಗೆ ಉತ್ತಮ ಗುಣಮಟ್ಟದ ಹಾಲು ಪೂರೈಸುತ್ತಿದೆ ಎಂದು ಕೋಮುಲ್ ನಿರ್ದೇಶಕ ಕಾಡೇನಹಳ್ಳಿ ನಾಗರಾಜ್ ಹೇಳಿದರು.

ನಗರದ ಶಿವಕೇಶವನಗರದಲ್ಲಿ ನೂತನ ಕೋಮುಲ್ ಹಾಲು ಸರಬರಾಜು ಕೇಂದ್ರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

“ಪ್ರತಿದಿನ ಸುಮಾರು 7.5 ಲಕ್ಷ ಲೀಟರ್ ಹಾಲು ಸರಬರಾಜು ಮಾಡಲಾಗುತ್ತಿದೆ. ಜೊತೆಗೆ ತಿರುಪತಿಗೆ ಉತ್ತಮ ಗುಣಮಟ್ಟದ ತುಪ್ಪವನ್ನು ಪೂರೈಸಲಾಗುತ್ತಿದೆ,” ಎಂದು ತಿಳಿಸಿದರು.

ಕೋಲಾರ ಹಾಲು ಒಕ್ಕೂಟವು ಗುಣಮಟ್ಟದ ಉತ್ಪನ್ನಗಳ ಮೂಲಕ ಗ್ರಾಹಕರ ವಿಶ್ವಾಸ ಗಳಿಸಿದ್ದು, ಗ್ರಾಮೀಣ ಹಾಲು ಉತ್ಪಾದಕರ ಆರ್ಥಿಕ ಅಭಿವೃದ್ಧಿಗೂ ಸಹಕಾರಿಯಾಗುತ್ತಿದೆ ಎಂದು ಹೇಳಿದರು.




ಕಾರ್ಯಕ್ರಮದಲ್ಲಿ ಕೋಮುಲ್ ನಿರ್ದೇಶಕ ಬಿ.ವಿ. ಶ್ಯಾಮೇಗೌಡ, ತಾಪಂ ಮಾಜಿ ಅಧ್ಯಕ್ಷ ಸಿ.ವಿ. ಗೋಪಾಲ್, ಎಂ.ಎಸ್. ಶ್ರೀನಿವಾಸರೆಡ್ಡಿ, ನಗರಸಭೆ ಮಾಜಿ ಸದಸ್ಯ ಠಾಕೂರ್ ಸಿಂಗ್, ಕೋಮುಲ್ ವ್ಯವಸ್ಥಾಪಕ ನಿರ್ದೇಶಕ ಗೋಪಾಲ್ ಮೂರ್ತಿ, ಕೆ.ವಿ. ರಾಜೇಂದ್ರ, ಅಜಯ್, ಚಿನ್ನಪ್ಪ, ಕಾರ್ತಿಕ್ ರೆಡ್ಡಿ, ನಂಜುಂಡಗೌಡ, ರಾಮಾಂಜಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.




ಶ್ರೀ ಪುತ್ತಿಗೆ ಮಠದ ಬಸವನಗುಡಿ ಶಾಖೆಯಲ್ಲಿ ಮಕ್ಕಳಿಗೆ ಶ್ರೀ ಸುಗುಣ ಸ್ಕೂಲ್, ವಿಪ್ರ ಮಹಿಳೆಯರಿಗೆ "ಮಹಿಳಾ ವಿದ್ಯಾಪೀಠ" ಹಾಗೂ ವಿಪ್ರ ಪುರುಷರಿಗೆ "ಸಂಧ್ಯಾ ವಿದ್ಯಾಪೀಠ" ಶುಭಾರಂಭಗೊಂಡಿತು. ವಿದ್ಯಾಪೀಠದ ಉದ್ಘಾಟನಾ ಸಮಾರಂಭದಲ್ಲಿ ಶ್ರೀ ಸುಗುಣೇಂದ್ರ ತೀರ್ಥ ಶ್ರೀಪಾದರು ಶ್ರೀಭಂಡಾರಕೇರಿ ಮಠದ ಪೀಠಾಧಿಪತಿಗಳಾದ ಶ್ರೀವಿದ್ಯೇಶ ತೀರ್ಥ ಶ್ರೀಪಾದರು ಸಾನಿಧ್ಯ ವಹಿಸಿದ್ದರು. ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಕುಲಪತಿ ಶ್ರೀಮತಿ ಅಹಲ್ಯ ಶರ್ಮ ಹಾಗೂ ಬ್ರಾಹ್ಮಣ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಸಗೋಡು ಜಯಸಿಂಹ ಪಾಲ್ಗೊಂಡು ಶುಭ ಹಾರೈಸಿದರು.

# ಗುಡಿಬಂಡೆ ಶಿಕ್ಷಕರ ಸಂಘದ ಅಧ್ಯಕ್ಷರಾಗಿ ಬಾಲಾಜಿ ಆಯ್ಕೆ

ಗುಡಿಬಂಡೆ

2026–31 ನೇ ಅವಧಿಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷರಾಗಿ ಬಾಲಾಜಿ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಕೆ.ಸುಬ್ಬಲಕ್ಷ್ಮಮ್ಮ ರವರು ಆಯ್ಕೆಯಾಗಿದ್ದಾರೆಂದು ಚುನಾವಣಾಧಿಕಾರಿ ಕೃಷ್ಣಕುಮಾರಿ ಘೋಷಣೆ ಮಾಡಿದರು.

ಈ ವೇಳೆ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಬಾಲಾಜಿ ಮಾತನಾಡಿ, ಪ್ರಾಥಮಿಕ ಶಾಲಾ ಶಿಕ್ಷಕರು ನನ್ನ ಮೇಲೆ ಸತತ ಮೂರು ಬಾರಿಯಿಂದಲೂ ನಂಬಿಕೆಯಿಟ್ಟು ನನ್ನನ್ನು ಗೆಲ್ಲಿಸುತ್ತಿದ್ದಾರೆ. ಈ ಬಾರಿಯೂ ಸಹ ನನ್ನನ್ನು ಗೆಲ್ಲಿಸಿದ್ದಾರೆ.

ಅವರ ನಂಬಿಕೆಯನ್ನು ನಾನು ಉಳಿಸಿಕೊಳ್ಳುತ್ತೇನೆ. ಶಿಕ್ಷಕರ ಹಲವಾರು ಸಮಸ್ಯೆಗಳನ್ನು ಈ ಹಿಂದೆ



ಸಹ ಪ್ರಾಮಾಣಿಕವಾಗಿ ಬಗೆಹರಿಸುವಂತಹ ಕೆಲಸ ಮಾಡಿದ್ದೇನೆ. ಮುಂದೆ ಸಹ ಶಿಕ್ಷಕರ ಒಳಿತಿಗಾಗಿ ಶ್ರಮಿಸುತ್ತೇನೆ ಎಂದರು.

ಈ ವೇಳೆ ಪ್ರಾಥಮಿಕ ಶಾಲಾ ಶಿಕ್ಷಕರಾದ ವಿ.ಶ್ರೀರಾಮಪ್ಪ, ರಾಜಪ್ಪ, ಉಮಾಶಂಕರ್, ನಾಗಲಿಂಗಪ್ಪ, ವನಜ, ಉಮಾದೇವಿ, ಆದಿನಾರಾಯಣಪ್ಪ, ಗಂಗನಾರಾಯಣ, ಗೋಪಾಲಕೃಷ್ಣ ಸಿಂಗ್, ರಾಮಾಂಜನೇಯ, ರಮೇಶ್, ನಾರಾಯಣಸ್ವಾಮಿ, ನರಸಿಂಹಮೂರ್ತಿ. ವೆಂಕಟೇಶಪ್ಪ ಸೇರಿದಂತೆ ಹಲವರು ಇದ್ದರು.

# 84 ಅಭ್ಯರ್ಥಿಗಳಿಗೆ ನೇಮಕಾತಿ ಪತ್ರ ವಿತರಣೆ

ಬೆಂಗಳೂರು

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಉದ್ಯೋಗ ಅಭಿಯಾನದ ಭಾಗವಾಗಿ 19ನೇ ಉದ್ಯೋಗ ಮೇಳವನ್ನು ಇಂದು ದೇಶಾದ್ಯಂತ 47 ಸ್ಥಳಗಳಲ್ಲಿ ಭವ್ಯವಾಗಿ ಆಯೋಜಿಸಲಾಯಿತು.

ಈ ಸಂದರ್ಭದಲ್ಲಿ ವಿವಿಧ ಕೇಂದ್ರ ಸರ್ಕಾರಿ ಇಲಾಖೆಗಳಿಗೆ ಆಯ್ಕೆಯಾದ 51 ಸಾವಿರಕ್ಕೂ ಹೆಚ್ಚು ಅಭ್ಯರ್ಥಿಗಳಿಗೆ ಮಾನ್ಯ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಅಂತರ್ಜಾಲದ ಮೂಲಕ ನೇಮಕಾತಿ ಪತ್ರಗಳನ್ನು ವಿತರಿಸಿದರು.

ಬೆಂಗಳೂರುದ ಎಂಜಿ ರೈಲ್ವೆ ಕಾಲೋನಿಯ ಅನುಗ್ರಹ ಸಮುದಾಯ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಮುಖ್ಯ ಅತಿಥಿಯಾಗಿ ಭಾಗವಹಿಸಿ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರಗಳನ್ನು ವಿತರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, 2047ರಲ್ಲಿ ಭಾರತವು ಸ್ವಾತಂತ್ರ್ಯದ 100 ವರ್ಷಗಳನ್ನು ಆಚರಿಸುವ ವೇಳೆಗೆ ದೇಶವನ್ನು “ವಿಕಸಿತ ಭಾರತ”ವನ್ನಾಗಿ ರೂಪಿಸುವುದು ಪ್ರಧಾನ ಮಂತ್ರಿಯವರ ದೂರದೃಷ್ಟಿಯಾಗಿದೆ ಎಂದು ಹೇಳಿದರು. ದೇಶದ ಪ್ರತಿಯೊಂದು ರಾಜ್ಯ ಹಾಗೂ ಪ್ರತಿಯೊಂದು ಇಲಾಖೆಯೂ ಅಭಿವೃದ್ಧಿಯ ದಿಕ್ಕಿನಲ್ಲಿ ಸಾಗಬೇಕು ಎಂಬುದು ಸರ್ಕಾರದ ಉದ್ದೇಶ ಎಂದು ಅವರು ತಿಳಿಸಿದರು.

“ಭಾರತವನ್ನು 2047ರ ವೇಳೆಗೆ ವಿಶ್ವದ ಅಗ್ರ ರಾಷ್ಟ್ರವನ್ನಾಗಿಸುವ ಗುರಿ ನಮ್ಮದು. ಅದಕ್ಕಾಗಿ ಯುವಜನರ ಪಾತ್ರ ಅತ್ಯಂತ ಮಹತ್ವದ್ದು,” ಎಂದು ಅವರು ಹೇಳಿದರು.

ಪ್ರಸ್ತುತ ಯುವ ಪೀಳಿಗೆಯನ್ನು “ಅಮೃತ



ಪೀಳಿಗೆ” ಎಂದು ಬಣ್ಣಿಸಿದ ಸಚಿವರು, ಹೊಸದಾಗಿ ನೇಮಕಗೊಂಡ ಅಭ್ಯರ್ಥಿಗಳು ತಮ್ಮ ಇಲಾಖೆಯಲ್ಲಿ ಬದ್ಧತೆ ಮತ್ತು ಪ್ರಾಮಾಣಿಕತೆಯಿಂದ ಸೇವೆ ಸಲ್ಲಿಸಬೇಕು ಎಂದು ಕರೆ ನೀಡಿದರು. ಸರ್ಕಾರಿ ಸೇವೆಯ 30ರಿಂದ 35 ವರ್ಷಗಳ ಅವಧಿಯನ್ನು ರಾಷ್ಟ್ರ ನಿರ್ಮಾಣಕ್ಕೆ ಸಮರ್ಪಿಸಬೇಕು ಎಂದು ಸಲಹೆ ನೀಡಿದರು.

“ಸರ್ಕಾರಕ್ಕೆ ಸೇವೆ ಸಲ್ಲಿಸುವುದು ಎಂದರೆ ದೇಶ ಮತ್ತು ಸಮಾಜಕ್ಕೆ ಸೇವೆ ಸಲ್ಲಿಸುವುದೇ ಆಗಿದೆ. ಕರ್ತವ್ಯ ನಿರ್ವಹಿಸುವಾಗ ರಾಷ್ಟ್ರದ ಹಿತಾಸಕ್ತಿಯೇ ಪ್ರಾಥಮಿಕ ಗುರಿಯಾಗಿರಬೇಕು,” ಎಂದು ಅವರು ಹೇಳಿದರು.

ಕೇಂದ್ರ ಸರ್ಕಾರ ಆರಂಭಿಸಿರುವ “ಕರ್ಮಯೋಗಿ” ಕಾರ್ಯಕ್ರಮದ ಕುರಿತು ಪ್ರಸ್ತಾಪಿಸಿದ ಸಚಿವರು, ಹೊಸದಾಗಿ ನೇಮಕಗೊಂಡ ಎಲ್ಲಾ ಅಭ್ಯರ್ಥಿಗಳು ಅದರಲ್ಲಿ ಭಾಗವಹಿಸಿ ತಮ್ಮ ಜ್ಞಾನ ಹಾಗೂ ಕೌಶಲ್ಯಗಳನ್ನು ವೃದ್ಧಿಸಿಕೊಳ್ಳಬೇಕು ಎಂದು ಪ್ರೋತ್ಸಾಹಿಸಿದರು.

ಬೆಂಗಳೂರುದಲ್ಲಿ ಒಟ್ಟು 84 ಅಭ್ಯರ್ಥಿಗಳಿಗೆ ನೇಮಕಾತಿ ಪತ್ರಗಳನ್ನು ವಿತರಿಸಲಾಯಿತು. ಇವರಲ್ಲಿ 35 ಮಂದಿ ರೈಲ್ವೆ ಇಲಾಖೆಗೆ ಸೇರಿದವರಾಗಿದ್ದು, ಉಳಿದವರು ಅಂಚೆ ಇಲಾಖೆ, ನಾಗರಿಕ ವಿಮಾನಯಾನ ಮಹಾನಿರ್ದೇಶನಾಲಯ, ಬ್ಯಾಂಕ್ ಆಫ್ ಬರೋಡಾ, ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ ಸೇರಿದಂತೆ ವಿವಿಧ ಕೇಂದ್ರ ಸರ್ಕಾರಿ ಸಂಸ್ಥೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳಾಗಿದ್ದರು.

ಕಾರ್ಯಕ್ರಮದಲ್ಲಿ ಬೆಂಗಳೂರು ವಿಭಾಗದ ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಆಶುತೋಷ್ ಕುಮಾರ್ ಸಿಂಗ್, ಹೆಚ್ಚುವರಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಪ್ರವೀಣ್ ಕಟಾರ್ಕಿ, ಹಿರಿಯ ವಿಭಾಗೀಯ ಸಿಬ್ಬಂದಿ ಅಧಿಕಾರಿ ಉಮಾ ಶರ್ಮಾ ಸೇರಿದಂತೆ ರೈಲ್ವೆ ಇಲಾಖೆಯ ಹಿರಿಯ ಅಧಿಕಾರಿಗಳು ಹಾಗೂ ಅಭ್ಯರ್ಥಿಗಳು ಭಾಗವಹಿಸಿದ್ದರು.

# ಒಕ್ಕಲಿಗರ ಸಂಘದಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ತಿಪಟೂರು

2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಉತ್ತಮ ಅಂಕಗಳೊಂದಿಗೆ ಉತ್ತೀರ್ಣರಾದ ತಾಲೂಕಿನ ಒಕ್ಕಲಿಗ ಸಮಾಜದ ವಿದ್ಯಾರ್ಥಿಗಳಿಗೆ ಹಾಗೂ ಇತರೆ ಸಮುದಾಯದ ಟಾಪರ್ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲು ಒಕ್ಕಲಿಗರ ಸಂಘ ಮುಂದಾಗಿದೆ ಎಂದು ಸಂಘದ ತಾಲ್ಲೂಕು ಅಧ್ಯಕ್ಷ ಎನ್. ಚಿದಾನಂದ್ ತಿಳಿಸಿದ್ದಾರೆ.

ನಗರದ ಹೌಸಿಂಗ್ ಬೋರ್ಡ್ ಬಡಾವಣೆಯಲ್ಲಿರುವ ಒಕ್ಕಲಿಗರ ಸಂಘದ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, “ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ಡಾ. ನಿರ್ಮಲಾನಂದನಾಥ ಸ್ವಾಮೀಜಿಗಳ ದಿವ್ಯಸಾನಿಧ್ಯದಲ್ಲಿ ಮುಂದಿನ ತಿಂಗಳು ನಡೆಯಲಿರುವ ರಾಷ್ಟ್ರಕವಿ ಕುವೆಂಪು ಜಯಂತೋತ್ಸವ ಕಾರ್ಯಕ್ರಮದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ ನಡೆಯಲಿದೆ,” ಎಂದು ಹೇಳಿದರು.

ತಾಲೂಕಿನ ಗ್ರಾಮಾಂತರ ಭಾಗದ ಒಕ್ಕಲಿಗ ಸಮಾಜದ ವಿದ್ಯಾರ್ಥಿಗಳು ಶೇಕಡಾ 75ಕ್ಕಿಂತ ಹೆಚ್ಚು ಅಂಕ, ನಗರ ಭಾಗದ ವಿದ್ಯಾರ್ಥಿಗಳು ಶೇಕಡಾ 85ಕ್ಕಿಂತ ಹೆಚ್ಚು ಅಂಕ ಹಾಗೂ ತಿಪಟೂರಿನ ಹೊರಗಿನ ಶಾಲಾ–ಕಾಲೇಜುಗಳಲ್ಲಿ ವ್ಯಾಸಂಗ ಮಾಡಿದ ತಾಲೂಕಿನ ವಿದ್ಯಾರ್ಥಿಗಳು ಶೇಕಡಾ 85ಕ್ಕಿಂತ ಹೆಚ್ಚು ಅಂಕ ಪಡೆದಿದ್ದರೆ ಅರ್ಜಿ ಸಲ್ಲಿಸಬಹುದು ಎಂದು ತಿಳಿಸಿದರು.

ಹಾಗೆಯೇ ಎಲ್ಲಾ ಪದವಿ ಹಾಗೂ ಸ್ನಾತಕೋತ್ತರ ಪದವಿಗಳಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳೂ ಅರ್ಹರಾಗಿದ್ದು, ಜೂನ್ 15, 2026ರೊಳಗೆ ಹೌಸಿಂಗ್ ಬೋರ್ಡ್ ಬಡಾವಣೆಯಲ್ಲಿರುವ ಸಂಘದ ಕಚೇರಿಯಲ್ಲಿ ಅರ್ಜಿ ಪಡೆದು ಸಲ್ಲಿಸಬೇಕು ಎಂದು ಮನವಿ ಮಾಡಿದರು.

ಪ್ರತಿಭಾ ಪುರಸ್ಕಾರ ಸಮಿತಿ ಅಧ್ಯಕ್ಷ ದೇವಾನಂದ್ ಮಾತನಾಡಿ, “ಈ ವರ್ಷದಿಂದ ಒಕ್ಕಲಿಗ ಸಮುದಾಯದ ವಿದ್ಯಾರ್ಥಿಗಳ ಜೊತೆಗೆ ಇತರೆ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳನ್ನೂ ಅಭಿನಂದಿಸಲು ತೀರ್ಮಾನಿಸಲಾಗಿದೆ,” ಎಂದು ಹೇಳಿದರು.

“ಹತ್ತನೇ ತರಗತಿ ಪರೀಕ್ಷೆಯಲ್ಲಿ ತಾಲೂಕಿಗೆ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗೆ ವಿಶೇಷ ಸನ್ಮಾನ ನೀಡಲಾಗುವುದು. ಜೊತೆಗೆ ಪಿಯುಸಿ ವಾಣಿಜ್ಯ, ಕಲಾ ಹಾಗೂ ವಿಜ್ಞಾನ ವಿಭಾಗಗಳಲ್ಲಿ ಅತಿ ಹೆಚ್ಚು ಅಂಕ ಪಡೆದ ತಲಾ ಒಬ್ಬ ವಿದ್ಯಾರ್ಥಿಯನ್ನು ಸನ್ಮಾನಿಸಲು ತೀರ್ಮಾನಿಸಲಾಗಿದೆ,” ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಒಕ್ಕಲಿಗರ ಸಂಘದ ಪ್ರಧಾನ ಕಾರ್ಯದರ್ಶಿ ಬಸವರಾಜು, ಖಜಾಂಚಿ ಡಿ.ಬಿ. ಲಕ್ಷ್ಮಣಗೌಡ, ಪ್ರತಿಭಾ ಪುರಸ್ಕಾರ ಸಮಿತಿ ಕಾರ್ಯದರ್ಶಿ ದೇವರಾಜು, ಖಜಾಂಚಿ ಡಾ. ಚಂದ್ರಶೇಖರ್, ನಿರ್ದೇಶಕರಾದ ಮಂಜುನಾಥ್, ಸ್ವಾಮಿ, ರವಿಕುಮಾರ್, ಕುಮಾರ್ ಸೇರಿದಂತೆ ಸಂಘ ಹಾಗೂ ಸಮಿತಿಯ ಪದಾಧಿಕಾರಿಗಳು, ನಿರ್ದೇಶಕರು ಮತ್ತು ಸದಸ್ಯರು ಉಪಸ್ಥಿತರಿದ್ದರು.

# ಕಾನ್‌ಸ್ಟೇಬಲ್ ಪತ್ನಿ ಆತ್ಮಹತ್ಯೆ

ಬೆಂಗಳೂರು

ಪೊಲೀಸ್ ಕ್ವಾರ್ಟಸ್‌ನಲ್ಲೇ ನೇಣುಬಿಗಿದುಕೊಂಡು ಕಾನ್‌ಸ್ಟೇಬಲ್ ಪತ್ನಿ ಆತ್ಮಹತ್ಯೆಗೆ ಶರಣಾಗಿರುವ ಘಟನೆ ಕೆ.ಆರ್.ಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬೆಳಕಿಗೆ ಬಂದಿದ್ದು, ವರದಕ್ಷಿಣೆ ಕಿರುಕುಳ ಆರೋಪ ಕೇಳಿಬಂದಿದೆ.

ಲಕ್ಷ್ಮೀ ಪ್ರಿಯಾ (26) ಆತ್ಮಹತ್ಯೆಗೆ ಶರಣಾದ ಮಹಿಳೆ. ಮೃತಳ ತಂದೆ ಕುಮಾರ್ ಆರಾಧ್ಯ ಅವರು ನೀಡಿದ ದೂರಿನ ಮೇರೆಗೆ ಹೆಚ್‌ಎಎಲ್ ಠಾಣೆಯ ಕಾನ್‌ಸ್ಟೇಬಲ್ ರಾಜೇಶ್ ಹಾಗೂ ತಂದೆ–ತಾಯಿ ಸೇರಿದಂತೆ ನಾಲ್ವರ ವಿರುದ್ಧ ವರದಕ್ಷಿಣೆ ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದ್ದಾರೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ಮೈಸೂರು ಮೂಲದ ಲಕ್ಷ್ಮೀ ಪ್ರಿಯಾಗೆ 2023ರಲ್ಲಿ ಕಾನ್‌ಸ್ಟೇಬಲ್ ಜೊತೆ ಮದುವೆಯಾಗಿತ್ತು.

ಈ ವೇಳೆ 350 ಗ್ರಾಂ ಚಿನ್ನ, 1 ಕೆ.ಜಿ.ಬೆಳ್ಳಿ ಹಾಗೂ ಗೃಹ ಬಳಕೆ ವಸ್ತುಗಳು ನೀಡಲಾಗಿತ್ತು. ದಂಪತಿಗೆ 8 ತಿಂಗಳ ಹೆಣ್ಣು ಮಗುವಿದೆ. ಮದುವೆಯಾದ ಕೆಲ ತಿಂಗಳ ಬಳಿಕ ವರದಕ್ಷಿಣೆ ಹಣಕ್ಕಾಗಿ ಪತಿ ಪೀಡಿಸುತ್ತಿದ್ದ. ಬಾಣಂತನಕ್ಕಾಗಿ ತವರು ಮನೆಗೆ ಬಂದಾಗಲೂ ಮಾನಸಿಕ ಬೆಂಬಲ ಹಾಗೂ ಆರೈಕೆ ಮಾಡದೇ ಕಿರುಕುಳ ನೀಡಿದ್ದ.

ಈ ಮಧ್ಯೆ ಇನ್ನೋರ್ವ ಯುವತಿಯ ಜೊತೆ ವಿವಾಹೇತರ ಸಂಬಂಧ ಹೊಂದಿದ್ದ. ಇದನ್ನು ನನ್ನ ಮಗಳು ಪ್ರಶ್ನಿಸಿದ್ದಕ್ಕೆ ಕಿರುಕುಳ ನೀಡುವುದನ್ನ ಮುಂದುವರೆಸಿದ್ದ. ಮೇ 22ರಂದು ತನ್ನ ಮಗಳು ವಾಟ್ಸಾಪ್‌ನಲ್ಲಿ ಮೊಬೈಲ್ ಪಾಸ್‌ವರ್ಡ್ ಕಳುಹಿಸಿ, ಮೊಬೈಲ್ ಸ್ವಿಚ್ ಆಫ್ ಮಾಡಿಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾಳೆ.

ಈ ಸಂಬಂಧ ರಾಜೇಶ್ ಹಾಗೂ ಆತನ ಮನೆಯವರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಮೃತಳ ತಂದೆ ತಿಳಿಸಿದ್ದಾರೆ.

# ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ರಾಜ್ಯ ಪ್ರವಾಸ

ಬೆಂಗಳೂರು

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ಅವರು ಇಂದು ರಾತ್ರಿ ಬೆಂಗಳೂರಿಗೆ ಆಗಮಿಸಲಿದ್ದಾರೆ ಎಂದು ಶಾಸಕ ಹಾಗೂ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ.

ರಾಜ್ಯ ಬಿಜೆಪಿ ಕಾರ್ಯಾಲಯದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಿತಿನ್ ನಬೀನ್ ಅವರು ರಾಷ್ಟ್ರೀಯ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಬಳಿಕ ಮೊದಲ ಬಾರಿಗೆ ಕರ್ನಾಟಕಕ್ಕೆ ಭೇಟಿ ನೀಡುತ್ತಿರುವುದಾಗಿ ಹೇಳಿದರು.

"ನಾಳೆ ಮೇ 24ರಂದು ಮುಂಜಾನೆ ಪಕ್ಷದ ಹಿರಿಯ ನಾಯಕ ಹಾಗೂ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ನಿವಾಸದಲ್ಲಿ ಉಪಾಹಾರ ಸೇವಿಸಲಿದ್ದಾರೆ," ಎಂದು ತಿಳಿಸಿದರು.

ಅದಾದ ಬಳಿಕ ಕಾಡುಮಲ್ಲೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಲಿರುವ ಅವರು, ಬೆಳಿಗ್ಗೆ 10 ಗಂಟೆಗೆ ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನಕ್ಕೆ ಆಗಮಿಸಲಿದ್ದಾರೆ ಎಂದು ಹೇಳಿದರು.

"ಅಲ್ಲಿ ಸುಮಾರು ಎರಡು ಗಂಟೆಗಳ ಕಾಲ ರಾಜ್ಯದ ಬಿಜೆಪಿ ಸಂಸದರು ಹಾಗೂ ಶಾಸಕರೊಂದಿಗೆ ಸಮಾಲೋಚನೆ ನಡೆಸಲಿದ್ದು, ರಾಜ್ಯದ ರಾಜಕೀಯ ಸ್ಥಿತಿಗತಿಯ ಅವಲೋಕನ ಮಾಡಲಿದ್ದಾರೆ," ಎಂದು ವಿವರಿಸಿದರು.

ನಂತರ ಕೋರ್ ಕಮಿಟಿ ಸಭೆಯಲ್ಲಿ ಭಾಗವಹಿಸಿ, ಬೆಂಗಳೂರು ಉತ್ತರ ಜಿಲ್ಲೆಯಲ್ಲಿ ನಡೆಯಲಿರುವ ಪ್ರಶಿಕ್ಷಣ ವರ್ಗದಲ್ಲೂ ಪಾಲ್ಗೊಳ್ಳಲಿದ್ದಾರೆ ಎಂದು ಹೇಳಿದರು.

"ರಾಷ್ಟ್ರೀಯ ಅಧ್ಯಕ್ಷರು ಪ್ರಶಿಕ್ಷಣ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿರುವುದು ಹೆಮ್ಮೆಯ ವಿಷಯ. ಅವರ ಭೇಟಿ ಪಕ್ಷದ ಕಾರ್ಯಕರ್ತರಿಗೆ ಹೊಸ ಸ್ಫೂರ್ತಿ ತುಂಬಲಿದೆ," ಎಂದು ಬಿ.ವೈ. ವಿಜಯೇಂದ್ರ ಹೇಳಿದರು.

# ಶಿಕ್ಷಕರ ಸಂಘದ ತಾಲೂಕು ಘಟಕಕ್ಕೆ ಪದಾಧಿಕಾರಿಗಳ ಆಯ್ಕೆ

ಮಾಲೂರು

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಮಾಲೂರು ತಾಲೂಕು ಘಟಕದ ಪದಾಧಿಕಾರಿಗಳ ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ 5 ವರ್ಷಗಳ ಅವಧಿಗೆ ಕೊಂಡ್ರಹಳ್ಳಿ ಸರ್ಕಾರಿ ಪ್ರಾಥಮಿಕ ಶಾಲಾ ಸಹ ಶಿಕ್ಷಕ ಸಿ.ಎಂ.ನಾರಾಯಣಸ್ವಾಮಿ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಮಾಲೂರು ಘಟಕದ ಸಮಿತಿಗೆ ಕಾರ್ಯಕಾರಿ ಸಮಿತಿಗೆ 14 ಮಂದಿ ಆಯ್ಕೆಯಾಗಿದ್ದು ಪದಾಧಿಕಾರಿಗಳ ಹುದ್ದೆಗಳಿಗೆ ನಾಮಪತ್ರಗಳನ್ನು ಸಲ್ಲಿಕೆ ಮಾಡಿದ್ದರು, ಆದರೆ ನ್ಯಾಯಾಲಯವು ತಡೆಯಾಜ್ಞೆ ನೀಡಿದ್ದ ಹಿನ್ನೆಲೆಯಲ್ಲಿ ಚುನಾವಣಾ ಅಧಿಕಾರಿಗಳು ಪದಾಧಿಕಾರಿಗಳ ಹುದ್ದೆಗಳಿಗೆ ನಡೆದ ಫಲಿತಾಂಶವನ್ನು ಪ್ರಕಟಿಸಿರಲಿಲ್ಲ, ಪ್ರಸ್ತುತ ನ್ಯಾಯಾಲಯದ ಆದೇಶದಂತೆ ಪದಾಧಿಕಾರಿಗಳ ಹುದ್ದೆಗಳಿಗೆ ನಾಮಪತ್ರ ಸಲ್ಲಿಕೆ ಮಾಡಿದ್ದವರ ಪಟ್ಟಿಯನ್ನು ಚುನಾವಣಾಧಿಕಾರಿ ವೀರಭದ್ರಚಾರಿ ಅವರು ಪ್ರಕಟಿಸಿದ್ದಾರೆ.



ತಾಲೂಕಿನ ಕೊಂಡ್ರಹಳ್ಳಿ ಪ್ರಾಥಮಿಕ ಶಾಲಾ ಶಿಕ್ಷಕ ಸಿಎಂ ನಾರಾಯಣಸ್ವಾಮಿ (ಅಧ್ಯಕ್ಷರು), ಮುನಿಯಪ್ಪ ಜಿ (ಉಪಾಧ್ಯಕ್ಷರು), ಕಾಂತಮ್ಮ.ವಿ (ಮಹಿಳಾ ಉಪಾಧ್ಯಕ್ಷರು), ರವಿಕುಮಾರ್ (ಪ್ರಧಾನ ಕಾರ್ಯದರ್ಶಿ), ಸುರೇಶ.ಹೆಚ್.ಇ(ಖಜಾಂಚಿ), ಟೇಕಲ್ ಶಶಿಧರ (ಸಹ ಕಾರ್ಯದರ್ಶಿ), ಕೆ.ಚಂದ್ರ ಕಲಾ(ಮಹಿಳಾಕಾರ್ಯದರ್ಶಿ), ಶ್ರೀನಾಥ್, ಆಜಾದ್ (ಸಂಘಟನಾ ಕಾರ್ಯದರ್ಶಿ), ಲಕ್ಷ್ಮಿ. ಎನ್ (ಮಹಿಳಾ ಸಂಘಟನಾ ಕಾರ್ಯದರ್ಶಿ) ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಪ್ರಾಥಮಿಕ ಶಾಲಾ ಶಿಕ್ಷಕರ ಸಂಘಕ್ಕೆ ಅವಿರೋಧವಾಗಿ ಆಯ್ಕೆಯಾದ ಅಧ್ಯಕ್ಷರು ಪ್ರಧಾನ ಕಾರ್ಯದರ್ಶಿ ಸೇರಿದಂತೆ ಎಲ್ಲಾ ಪದಾಧಿಕಾರಿಗಳನ್ನು ಅವರ ಹಿತೈಷಿಗಳು ಸ್ನೇಹಿತರು ಅಭಿನಂದಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ನೂತನ ಅಧ್ಯಕ್ಷ ಸಿಎಂ ನಾರಾಯಣಸ್ವಾಮಿ ಪ್ರಾಥಮಿಕ ಶಾಲಾ ಶಿಕ್ಷಕರು ನಮ್ಮ ತಂಡದ ಮೇಲೆ ವಿಶ್ವಾಸವಿಟ್ಟು ಅತ್ಯಧಿಕ ಮತಗಳನ್ನು ನೀಡಿ 14 ಸ್ಥಾನಗಳಿಗೆ 13 ಸ್ಥಾನಗಳಲ್ಲಿ ಗೆಲ್ಲಿಸುವ ಮೂಲಕ ನಮ್ಮ ಬಣಕ್ಕೆ ಅಭೂತಪೂರ್ವ ಗೆಲುವನ್ನು ತಂದುಕೊಟ್ಟಿದ್ದಾರೆ. ಅದೇ ರೀತಿ ಹಿರಿಯ ಮುಖ್ಯ ಶಿಕ್ಷಕರಾದ ಎಂ ಮುನಿನಾರಾಯಣ, ವೆಂಕಟೇಶ ಗೌಡ, ಶ್ರೀಧರ್‌ರೆಡ್ಡಿ, ಎಂ ರವಿ, ಅವರ ಮಾರ್ಗದರ್ಶನದಲ್ಲಿ ಸಂಘದ ಎಲ್ಲಾ ಸದಸ್ಯರು ಒಗ್ಗಟ್ಟಿನಿಂದ ನನ್ನನ್ನು ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿರುವುದು ಸಂತಸ ತಂದಿದೆ ಸಂಘದ ಪದಾಧಿಕಾರಿಗಳು ಸದಸ್ಯರ ಸಲಹೆ ಸೂಚನೆ ಅಭಿಪ್ರಾಯಗಳನ್ನು ಪಡೆದು ಸಂಘವನ್ನು ಬಲಿಷ್ಠವಾಗಿ ಕಟ್ಟಲಾಗುವುದು.

ಈಗಾಗಲೇ ನಗರದ ಮಾರುತಿ ಬಡಾವಣೆಯಲ್ಲಿ ಗುರುಭವನ ಕಟ್ಟಡ ಕಾಮಗಾರಿ ಪ್ರಗತಿಯಲ್ಲಿದ್ದು ಸಂಘದ ಪದಾಧಿಕಾರಿಗಳು ಹಾಗೂ ಎಲ್ಲಾ ಸದಸ್ಯರು ಶಾಸಕರ ಬಳಿ ಚರ್ಚಿಸಿ ಗುರುಭವನ ಕಟ್ಟಡ ಕಾಮಗಾರಿ ಪೂರ್ಣಗೊಳಿಸಲು ಸಂಪೂರ್ಣ ಸಹಕಾರ ನೀಡಲಾಗುವುದು.

ತಾಲೂಕಿನಲ್ಲಿ ಹಿರಿಯ ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು ಗುಮಾಸ್ತರಂತೆ ಕೆಲಸದ ಒತ್ತಡದಿಂದ ಕಾರ್ಯನಿರ್ವಹಿಸುತ್ತಿದ್ದಾರೆ ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿರುವ ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸುವುದರ ಮೂಲಕ ಪ್ರಾಮಾಣಿಕವಾಗಿ ಬಗೆಹರಿಸುವ ಪ್ರಯತ್ನ ಮಾಡಲಾಗುವುದು ಈ ಹಿಂದೆ ಸಂಘದ ಅಧ್ಯಕ್ಷರುಗಳು ಹಾಕಿಕೊಟ್ಟ ಹಾದಿಯಲ್ಲಿ ಸಂಘದ ಚಟುವಟಿಕೆಗಳನ್ನು ಕ್ರಿಯಾಶೀಲ ಗೊಳಿಸಲಾಗುವುದು ಎಂದರು.

ಇದೇ ಸಂದರ್ಭದಲ್ಲಿ ನೂತನ ಪದಾಧಿಕಾರಿಗಳ ಸ್ನೇಹಿತ ಶಿಕ್ಷಕರು ಹಿತೈಷಿಗಳು ಸಿಹಿ ಹಂಚಿ ಸಂಭ್ರಮಾಚರಣೆ ಮಾಡಿದರು.

# 'ಉತ್ತಮವಾದ ಆರೋಗ್ಯವಂತ ಸಮಾಜ ನಿರ್ಮಾಣಕ್ಕಾಗಿ ಪರಿಸರವನ್ನು ಸಂರಕ್ಷಣೆ ಮಾಡುವುದು ಅಗತ್ಯ'



ವಿಜಯಪುರ

ಉತ್ತಮವಾದ ಆರೋಗ್ಯವಂತ ಸಮಾಜ ನಿರ್ಮಾಣ ಮಾಡಬೇಕಾದರೆ, ನಮ್ಮ ಸುತ್ತಮುತ್ತಲಿನ ಪರಿಸರವನ್ನು ಸಂರಕ್ಷಣೆ ಮಾಡುವುದರ ಜೊತೆಗೆ, ಹೆಚ್ಚಿನ ಪ್ರಮಾಣದಲ್ಲಿ ಗಿಡಮರಗಳನ್ನು ಬೆಳೆಸುವುದು ನಮ್ಮ ಬದ್ಧತೆಯಾಗಬೇಕು ಎಂದು ಶ್ರೀ ಸಾಯಿ ಸಮೂಹ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಡಾ.ಬಿ.ಮಂಜುನಾಥ್ ಹೇಳಿದರು.

ಹೋಬಳಿಯ ಚಂದೇನಹಳ್ಳಿ ಗೇಟ್ ನಲ್ಲಿರುವ ಶ್ರೀಸಾಯಿ ಜ್ಞಾನಗಂಗಾ ಪದವಿ ಕಾಲೇಜಿನ ಆವರಣದಲ್ಲಿ, ಆಯೋಜಿಸಿದ್ದ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸ್ವಚ್ಛವಾದ ವಾತಾವರಣ ನಿರ್ಮಾಣ ಮಾಡುವುದರ ಜೊತೆಗೆ, ಪರಿಸರ ಮಾಲಿನ್ಯವಾಗದಂತೆ ತಡೆಯುವುದು, ಮಣ್ಣಿನ ಸವಕಳಿ ತಡೆಯುವುದಕ್ಕಾಗಿ ಗಿಡಗಳನ್ನು ಬೆಳೆಸುವುದೊಂದೇ ನಮಗೆ ಉತ್ತಮವಾದ ಮಾರ್ಗವಾಗಿದೆ ಎಂದರು.

ಶ್ರೀ ಸಾಯಿ ಜ್ಞಾನಗಂಗಾ ಪದವಿ ಕಾಲೇಜಿನ ಪ್ರಾಂಶುಪಾಲ ಎಸ್.ಎಸ್. ಪ್ರದೀಪ್ ಮಾತನಾಡಿ, ನಗರೀಕರಣ ಹೆಚ್ಚಾಗುತ್ತಿದ್ದಂತೆ, ಪರಿಸರದ ಮೇಲೆ ನಿರಂತರವಾಗಿ ದಾಳಿಯಾಗುತ್ತಿರುವುದರ ಪರಿಣಾಮವಾಗಿ, ಜಾಗತಿಕವಾಗಿ ತಾಪಮಾನ ನಿರಂತರವಾಗಿ ಏರಿಕೆಯಾಗುತ್ತಿದ್ದು, ಯುವಪೀಳಿಗೆ ಇದನ್ನು ಮನಗಾಣಬೇಕು. ಪ್ರತಿಯೊಬ್ಬರೂ ತಮ್ಮ ಹೆಸರಿನಲ್ಲಿ ಒಂದೊಂದು ಸಸಿಯನ್ನು ನೆಟ್ಟು ಪೋಷಣೆ ಮಾಡಬೇಕು ಎಂದರು.

ಕಾಲೇಜಿನ ಕೈ–ತೋಟದ ಆವರಣಗಳ ಸ್ವಚ್ಛತೆ, ಪ್ಲಾಸ್ಟಿಕ್ ನಿರ್ಮೂಲನೆ ಯೊಂದಿಗೆ ವಿವಿಧ ರೀತಿಯ ಹೂ ಹಾಗೂ ಹಣ್ಣಿನ ಗಿಡಗಳನ್ನು ನೆಡಲಾಯಿತು.

ನಾರಾಯಣಪುರದ ಶ್ರೀಸಾಯಿ ಜ್ಞಾನಗಂಗಾ ಪದವಿ ಪೂರ್ವ ಕಾಲೇಜಿನ ಕಾರ್ಯದರ್ಶಿ ಬಿ.ಕೆ.ನಾರಾಯಣಸ್ವಾಮಿ, ರಾಷ್ಟ್ರೀಯ ಯುವ ಯೋಜನೆಯ ರಾಜ್ಯ ಸಂಯೋಜಕ ಡಾ.ವಿ.ಪ್ರಶಾಂತ್, ಎನ್. ಪ್ರಸನ್ನಕುಮಾರ್, ಉಪನ್ಯಾಸಕರಾದ ಮುರಳಿಮೋಹನ್, ಮುಬಾರಕ್, ಕೆ.ಅರ್ಚನ,. ಎಂ.ಅಂಬಿಕಾ, ಡಿ.ಎನ್.ನಾಗೇಶ್, ಎಂ.ಜಿ. ಹರೀಶ್, ಲಕ್ಷ್ಮಿದೇವಮ್ಮ, ಕೆ.ಎಂ.ನಾಗರಾಜ್, ಬಿ.ಎಸ್.ಶರತ್, ಎಂ.ಚೈತ್ರ ಹಾಜರಿದ್ದರು.

# ಪೂರ್ಣಗೊಳ್ಳದ ಕಾಮಗಾರಿ: ಆಕ್ರೋಶ



ಮಾಲೂರು

5 ವರ್ಷಗಳ ಹಿಂದೆ ರಸ್ತೆ ಅಭಿವೃದ್ಧಿ ಕಾಮಗಾರಿಗಾಗಿ ದೊಡ್ಡ ಕಲ್ಲಹಳ್ಳಿ ಗ್ರಾಮದಿಂದ ಮಾಸ್ತಿ ಮುಖ್ಯ ರಸ್ತೆಗೆ ಸಂಪರ್ಕಿಸುವ ರಸ್ತೆ ಅಗೆದು ಒಂದು ವರ್ಷದ ಹಿಂದೆ ಜಲ್ಲಿಕಲ್ಲು ಹಾಕಿ ಹೋದ ಗುತ್ತಿಗೆದಾರ ಕಾಮಗಾರಿಯನ್ನು ಪೂರ್ಣಗೊಳಿಸದೆ ನಾಪತ್ತೆಯಾಗಿದ್ದಾನೆ ಎಂದು ಗ್ರಾಮಸ್ಥರು ಹಾಗೂ ವಾಹನ ಸವಾರರು ಗುತ್ತಿಗೆದಾರನ ಮೇಲೆ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ತಾಲೂಕಿನ ಶಾಸಕರು ಕ್ಷೇತ್ರದಲ್ಲಿ ರಸ್ತೆಗಳ ಅಭಿವೃದ್ಧಿಗಾಗಿ ಸಾವಿರಾರು ಕೋಟಿ ಅನುದಾನ ತಂದರು ಗುತ್ತಿಗೆದಾರರು ಗುಣಮಟ್ಟದ ಕಾಮಗಾರಿಯನ್ನು ನಿರ್ವಹಿಸಿದರೆ ಸರ್ಕಾರದ ಅನುದಾನ ಪೋಲಾಗುವುದಿಲ್ಲ, ಆದರೆ ಇಲ್ಲಿನ ದೊಡ್ಡ ಕಲ್ಲಹಳ್ಳಿ ಗ್ರಾಮದಿಂದ ಮಾಸ್ತಿ ಗ್ರಾಮದ ಮುಖ್ಯರಸ್ತೆಯವರೆಗೆ ಅದಕ್ಕೆ ರಸ್ತೆಯನ್ನು ಶಾಸಕರು ಅನುದಾನವನ್ನು ನೀಡಿ ಟೆಂಡರ್ ಸಹ ಪೂರ್ಣಗೊಂಡು ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಗುತ್ತಿಗೆಗೆ ಪಡೆದ ಗುತ್ತಿಗೆದಾರ ಕಳೆದ ವರ್ಷದ ಹಿಂದೆ ರಸ್ತೆಯನ್ನು ಅಗೆದು ಜಲ್ಲಿ ಹಾಕಿದವರು ಇದುವರೆಗೂ ಈ ಕಡೆ ಮುಖ ಮಾಡಲಿಲ್ಲ, ಆದರೆ ಈ ರಸ್ತೆಯಲ್ಲಿ ವಾಹನ ಚಾಲನೆ ಮಾಡಲು ವಾಹನ ಸವಾರರು ಹರಸಾಹಸ ಪಡುವಂತಾಗಿದೆ.

ಹಲವಾರು ಬಾರಿ ದ್ವಿಚಕ್ರ ವಾಹನ ಸವಾರರು ಬಿದ್ದು ಕೈಕಾಲುಗಳು ಮಾಡಿಕೊಂಡ ಘಟನೆಗಳು ನಡೆದಿದೆ. ಈ ಭಾಗದ ಗ್ರಾಮಗಳ ಗ್ರಾಮಸ್ಥರ ವಾಹನ ಸಂಚಾರಕ್ಕೆ ಬಾರಿ ಅನಾನುಕೂಲವಾಗಿರುವುದರಿಂದ ಶಾಸಕರು ಇತ್ತ ಗಮನಹರಿಸಿ ಗುತ್ತಿಗೆದಾರರಿಂದ ಕಾಮಗಾರಿ ಆರಂಭಿಸಿ ರಸ್ತೆ ಅಭಿವೃದ್ಧಿಯನ್ನು ಪೂರ್ಣಗೊಳಿಸಿ ಮಾಸ್ತಿಯಿಂದ ರಾಜೇನಹಳ್ಳಿ ಗ್ರಾಮಕ್ಕೆ ಸಂಪರ್ಕಿಸುವ ರಸ್ತೆಯನ್ನು ಸಾರ್ವಜನಿಕರು ಹಾಗೂ ವಾಹನ ಸವಾರರಿಗೆ ಅನುಕೂಲ ಕಲ್ಪಿಸುವಂತೆ ದೊಡ್ಡ ಕಲ್ಲಹಳ್ಳಿ, ಚಿಕ್ಕ ಕಲ್ಲಹಳ್ಳಿ ಎಂ ಹೊಸಹಳ್ಳಿ ಸುತ್ತಮುತ್ತಲ ಗ್ರಾಮಗಳ ಗ್ರಾಮಸ್ಥರು ಒತ್ತಾಯಿಸಿದ್ದಾರೆ.

# 14 ದಿನ ನ್ಯಾಯಾಂಗ ಬಂಧನ

ಬೆಂಗಳೂರು

ಬಿಟ್‌ಕಾಯಿನ್ ಹಗರಣದ ಸಂಬಂಧ ದಾಖಲಾಗಿರುವ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಆರೋಪಿಗಳಾಗಿರುವ ಶ್ರೀಕೃಷ್ಣ ರಮೇಶ್ ಅಲಿಯಾಸ್ ಶ್ರೀಕಿ, ಸುನೀಶ್ ಹೆಗಡೆ ಮತ್ತು ರಾಬಿನ್ ಖಂಡೇಲವಾಲ್ ಅವರನ್ನು 14 ದಿನ ಬೆಂಗಳೂರಿನ ವಿಶೇಷ ನ್ಯಾಯಾಲಯವು ಶುಕ್ರವಾರ ನ್ಯಾಯಾಂಗ ಬಂಧನಕ್ಕೆ ನೀಡಿದೆ.

ಬೆಂಗಳೂರಿನ ಪ್ರಧಾನ ಸಿಟಿ ಸಿವಿಲ್ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಎಂ ಚಂದ್ರಶೇಖರ್ ರೆಡ್ಡಿ ಅವರು ಆರೋಪಿಗಳನ್ನು ಜೂನ್ 5ರವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದರು.

ಮೇ 9ರಂದು ಆರೋಪಿಗಳನ್ನು 10 ದಿನ ಇ ಡಿ ಕಸ್ಟಡಿಗೆ ನೀಡಲಾಗಿತ್ತು. ಆನಂತರ ಐದು ದಿನ ಮತ್ತೆ ಇ ಡಿ ಕಸ್ಟಡಿ ವಿಸ್ತರಿಸಲಾಗಿತ್ತು.

ಸರ್ಕಾರದ ಇ–ಪ್ರಕ್ಯೂರ್‌ಮೆಂಟ್ ಪೋರ್ಟಲ್‌ನಿಂದ 11.5 ಕೋಟಿ ಕದ್ದಿರುವುದು, ಭಾರತದ ಗೇಮಿಂಗ್ ವೆಬ್‌ಸೈಟ್‌ಗಳ ಹ್ಯಾಕಿಂಗ್ ಮತ್ತು ವಿದೇಶದಲ್ಲಿ ಕ್ರಿಪ್ಟೋ ಕರೆನ್ಸಿ ಬದಲಾವಣೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣವನ್ನು ಇ ಡಿಯು ತನಿಖೆ ನಡೆಸುತ್ತಿದೆ.

ಇತ್ತೀಚೆಗೆ ಶ್ರೀಕಿ ಸ್ನೇಹಿತ ಎನ್ನಲಾದ ಮೊಹಮ್ಮದ್ ಹ್ಯಾರಿಸ್ ನಲಪಾಡ್ ಮನೆಯಲ್ಲಿಯೂ ಇ ಡಿ ಶೋಧ ನಡೆಸಿತ್ತು. ಯುನೋಕಾಯಿನ್ ಹ್ಯಾಕಿಂಗ್ ಮತ್ತು ಕದ್ದಿರುವ ಆರೋಪಕ್ಕೆ ಸಂಬಂಧಿಸಿದಂತೆ ಸಿಐಡಿಯು ಶ್ರೀಕಿ ಮತ್ತಿತರರ ವಿರುದ್ಧ ತನಿಖೆ ನಡೆಸಿತ್ತು.

ಗೇಮಿಂಗ್ ವೆಬ್‌ಸೈಟ್‌ಗಳ ಹ್ಯಾಕಿಂಗ್ ಮತ್ತು ಬಿಟ್ ಕಾಯಿನ್ ಬಳಸಿ ಡಾರ್ಕ್‌ನೆಟ್ ಮೂಲಕ ಮಾದಕ ದ್ರವ್ಯ ತರಿಸಿದ ಆರೋಪದ ಸಂಬಂಧ ಕಾಟನ್‌ಪೇಟೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

2023ರಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತಿದ್ದಂತೆ ಹಿರಿಯ ಐಪಿಎಸ್ ಅಧಿಕಾರಿ ಮನೀಷ್ ಖರ್ಬೀಕರ್ ನೇತೃತ್ವದಲ್ಲಿ ಬಿಟ್ ಕಾಯಿನ್ ಹಗರಣದ ತನಿಖೆಗೆ ಎಸ್‌ಐಟಿ ನೇಮಿಸಿತ್ತು.

ಆನಂತರ 2024ರ ಜುಲೈನಲ್ಲಿ ಶ್ರೀಕಿ ಮತ್ತು ಖಂಡೇಲವಾಲಾ ವಿರುದ್ಧ ದಾಖಲಾಗಿರುವ ಕೋಕಾ ಪ್ರಕರಣವನ್ನು ಹೈಕೋರ್ಟ್ ರದ್ದುಪಡಿಸಿತ್ತು. ಈ ಇಬ್ಬರೂ 2020ರಲ್ಲಿ ಅಶೋಕ ನಗರ ಠಾಣೆಯಲ್ಲಿ ದಾಖಲಾಗಿರುವ ವಂಚನೆ ಪ್ರಕರಣದ ರದ್ದತಿ ಕೋರಿ ಸಲ್ಲಿಸಿರುವ ಅರ್ಜಿಯು ಹೈಕೋರ್ಟ್‌ನಲ್ಲಿ ವಿಚಾರಣೆಗೆ ಬಾಕಿ ಇದೆ.

# 'ವಿಜಯಪುರ ಅಂಚೆ ಕಚೇರಿಯ ಕಟ್ಟಡವನ್ನು ದುರಸ್ಥಿಗೊಳಿಸುವಂತೆ ಒತ್ತಾಯ'

ವಿಜಯಪುರ

ಪಟ್ಟಣದ ಅಂಚೆ ಕಚೇರಿಯ ಕಟ್ಟಡದ ಗೋಡೆಗಳು ಶಿಥಿಲವಾಸ್ತೆಗೆ ತಲುಪುತ್ತಿದ್ದು, ಕಟ್ಟಡವನ್ನು ದುರಸ್ತಿ ಮಾಡುವ ಮೂಲಕ ಸಾರ್ವಜನಿಕರಿಗೆ ಆಗಲಿರುವ ಅಪಾಯವನ್ನು ತಪ್ಪಿಸಬೇಕು ಎಂದು ಸ್ಥಳೀಯ ನಿವಾಸಿಗಳು ಒತ್ತಾಯಿಸಿದ್ದಾರೆ.

ಬಸ್ ನಿಲ್ದಾಣ ಸಮೀಪವಿರುವ ಅಂಚೆ ಕಚೇರಿಯ ಕಟ್ಟಡವು, 1970 ರಲ್ಲಿ ನಿರ್ಮಾಣವಾಗಿದ್ದು, ಕಟ್ಟಡದ ಗೋಡೆಗಳಿಗೆ ಮಾಡಿದ್ದ ಸಿಮೆಂಟ್ ಪ್ಲಾಸ್ಟರಿಂಗ್ ಉದುರುತ್ತಿದೆ. ಕಟ್ಟಡದ ಮೇಲೆ ಮರಗಳು ಬೆಳೆಯುತ್ತಿವೆ. ಕಿಟಕಿಗಳ ಮೇಲೆ ಅಳವಡಿಸಿದ್ದ ಸಜ್ಜಾ ಕೆಳಗೆ ಸಿಮೆಂಟ್ ಉದುರುತ್ತಿದೆ. ಪ್ರತಿನಿತ್ಯ ನೂರಾರು ಮಂದಿ ಸಾರ್ವಜನಿಕರು ಕೆಲಸ ಕಾರ್ಯಗಳ ನಿಮಿತ್ತ ಅಂಚೆ ಕಚೇರಿಗೆ ಬಂದು ಹೋಗುತ್ತಾರೆ. ಪಿಂಚಣಿ ಹಣಕ್ಕಾಗಿ ಇಲ್ಲಿ ಬಂದು ನಿಲ್ಲುವಂತಹ ವೃದ್ಧರ ಮೇಲೆ, ಸಜ್ಜಾಗಳಿಂದ ಸಿಮೆಂಟ್ ಬಿದ್ದರೆ ಭಾರಿ ಅಪಾಯವಾಗುವ ಸಾಧ್ಯತೆ ಇದೆ.

ಜೋರಾಗಿ ಮಳೆ ಬಂದರೆ ಕಟ್ಟಡದ ಮೇಲ್ಛಾವಣಿ ನೀರಿನಿಂದ ತೇವವಾಗುತ್ತಿದ್ದು, ನೀರು ಹಣಿಯುತ್ತದೆ. ಇದರಿಂದ ಕಚೇರಿಯಲ್ಲಿನ ದಾಖಲೆಗಳು ನೀರಿನಿಂದ ನಾಶವಾಗುವ ಸಾಧ್ಯತೆಗಳು ಹೆಚ್ಚಾಗಿದ್ದು, ಸಂಬಂಧಪಟ್ಟ ಇಲಾಖೆಯ ಮೇಲಾಧಿಕಾರಿಗಳು ಗಮನಹರಿಸಿ, ಈ ಕಟ್ಟಡವನ್ನು ದುರಸ್ಥಿ ಮಾಡಿ, ಹೊಸ ರೂಪ ಕೊಡಬೇಕಿದೆ ಎಂದು ನಾಗರಿಕರು ಆಗ್ರಹಿಸಿದ್ದಾರೆ.




ಈ ಕುರಿತು ಮಾಹಿತಿ ನೀಡಲು, ಬೆಂಗಳೂರಿನ ಡಿ.ಓ.ಕಚೇರಿಗೆ ಕರೆ ಮಾಡಿದರೂ ಅವರು ಕರೆ ಸ್ವೀಕರಿಸಲಿಲ್ಲ.

ರಾಷ್ಟ್ರೀಕೃತ ಬ್ಯಾಂಕುಗಳು ಎಷ್ಟು ಪ್ರಮಾಣದಲ್ಲಿ ಬಂದರೂ ಅಂಚೆ ಕಚೇರಿಯೊಂದಿಗಿನ ಒಡನಾಟ ಮತ್ತು ಉತ್ತಮ ಬಾಂಧವ್ಯವನ್ನು ಸಾರ್ವಜನಿಕರು ಕಡಿದುಕೊಂಡಿಲ್ಲ. ಇಂದಿಗೂ ಅಂಚೆ ಕಚೇರಿಯಲ್ಲೆ ಹಣಕಾಸಿನ ವ್ಯವಹಾರ ಮಾಡಲು ಹೆಚ್ಚಿನ ಮಂದಿ ಇಷ್ಟಪಡುತ್ತಾರೆ. ಇಂತಹ ಕಚೇರಿಯನ್ನು ಸುಸ್ಥಿತಿಯಲ್ಲಿಡುವುದು ಸೂಕ್ತ. ಸಂಬಂಧಪಟ್ಟ ಅಧಿಕಾರಿಗಳು ಗಮನಹರಿಸಬೇಕಿದೆ.

# ಮಕ್ಕಳ ಉತ್ತಮ ಭವಿಷ್ಯಕ್ಕೆ– ಯಶಸ್ಸಿಗೆ ಶಿಕ್ಷಣವೇ ಸೂತ್ರ




ಬೆಂಗಳೂರು

ನಮ್ಮ ಮಕ್ಕಳ ಭವಿಷ್ಯ ಉತ್ತಮವಾಗಿರಬೇಕು, ಅವರಿಗೆ ಯಶಸ್ಸು ಲಭ್ಯವಾಗಬೇಕೆಂದರೆ ಶಿಕ್ಷಣವೊಂದೇ ಸೂತ್ರ. ಹೀಗಾಗಿ ಎಲ್ಲಾ ಪೋಷಕರು ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಲು ಮುಂದಾಗಬೇಕು ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಒತ್ತಾಯಿಸಿದರು.

ಬ್ಯಾಟರಾಯನಪುರ ಕ್ರೀಡಾಂಗಣದಲ್ಲಿ ಶನಿವಾರ ಏರ್ಪಡಿಸಿದ್ದ ನಮ್ಮೂರ ಹೆಮ್ಮೆ–2026 ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ತರಗತಿಯಲ್ಲಿ ಉತ್ತಮ ಅಂಕ ಗಳಿಸಿದ 250ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ನೀಡಿ ಸನ್ಮಾನಿಸಲಾಯಿತು.

ವಿದ್ಯಾರ್ಥಿಗಳನ್ನು ಸನ್ಮಾನಿಸಿ ಮಾತನಾಡಿದ ಸಚಿವ ಕೃಷ್ಣ ಬೈರೇಗೌಡ ಅವರು, "ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ತರಗತಿಗಳಲ್ಲಿ ಉತ್ತಮ ಅಂಕ ಪಡೆದು ಉತ್ತೀರ್ಣಗೊಂಡ ವಿದ್ಯಾರ್ಥಿಗಳಿಗೆ ಇಂದು ಸನ್ಮಾನ ಮಾಡಲಾಗುತ್ತಿದೆ. ನಮ್ಮ ಮಕ್ಕಳ ಭವಿಷ್ಯ ಉತ್ತಮವಾಗಿ ರೂಪಗೊಳ್ಳಲು ಹಾಗೂ ಅವರು ದೊಡ್ಡ ಮಟ್ಟದ ಯಶಸ್ಸನ್ನು ಸಾಧಿಸಲು ಶಿಕ್ಷಣವೇ ಸೂತ್ರ. ಶಿಕ್ಷಣವಿದ್ದರೆ, ನಮ್ಮ ಮಕ್ಕಳು ಜೀವನದಲ್ಲಿ ಗೆಲುವು ಸಾಧಿಸುವುದು ಗ್ಯಾರಂಟಿ" ಎಂದು ಅಭಿಪ್ರಾಯಪಟ್ಟರು.

"ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಲು ವಿದ್ಯಾರ್ಥಿಗಳು ಸಾಕಷ್ಟು ಶ್ರಮವಹಿಸಿರುತ್ತಾರೆ. ಹೀಗಾಗಿ ಅವರ ಭವಿಷ್ಯ ಉತ್ತಮವಾಗಿರಲಿ ಎಂಬ ಕಾರಣಕ್ಕೆ ಹಾಗೂ ಅವರ ಶ್ರಮವನ್ನು ಗೌರವಿಸುವ ನಿಟ್ಟಿನಲ್ಲಿ ಹೀಗೆ ಸಾರ್ವಜನಿಕರ ಎದುರು ಕಾರ್ಯಕ್ರಮ ಮಾಡಿ ಸನ್ಮಾನಿಸಲಾಗುತ್ತಿದೆ.

# ಬೆಲೆ ಏರಿಕೆ ವಿರೋಧಿಸಿ ಸಿಪಿಐ(ಎಂ) ಪ್ರತಿಭಟನೆ

ಕೋಲಾರ

ಪೆಟ್ರೋಲ್–ಡೀಸೆಲ್ ದರ ಏರಿಕೆಯನ್ನು ತಕ್ಷಣ ಹಿಂಪಡೆಯಬೇಕು ಹಾಗೂ ನೀಟ್ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆಗೆ ಕಾರಣರಾದ ಕೇಂದ್ರ ಶಿಕ್ಷಣ ಸಚಿವರನ್ನು ಸಂಪುಟದಿಂದ ವಜಾಗೊಳಿಸಬೇಕು ಎಂದು ಒತ್ತಾಯಿಸಿ ಸಿಪಿಐ(ಎಂ) ತಾಲ್ಲೂಕು ಸಮಿತಿ ವತಿಯಿಂದ ನಗರದ ಮೆಕ್ಕೆ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನಾಕಾರರನ್ನು ಉದ್ದೇಶಿಸಿ ಮಾತನಾಡಿದ ಸಿಪಿಐ(ಎಂ) ತಾಲ್ಲೂಕು ಕಾರ್ಯದರ್ಶಿ ಎನ್. ಎನ್. ಶ್ರೀರಾಮ್, "ಪಂಚ ರಾಜ್ಯಗಳ ಚುನಾವಣೆಯ ವೇಳೆ ಸಾಕಷ್ಟು ಇಂಧನ ದಾಸ್ತಾನು ಇದೆ, ಜನ ಗಾಬರಿಗೊಳ್ಳಬಾರದು ಎಂದು ಹೇಳಿದ್ದ ಮೋದಿ ಸರ್ಕಾರ, ಫಲಿತಾಂಶ ಹೊರಬಿದ್ದ ತಕ್ಷಣವೇ ಎರಡು ಬಾರಿ ಪೆಟ್ರೋಲ್–ಡೀಸೆಲ್ ದರ ಏರಿಕೆ ಮಾಡಿ ಜನರ ಬೆನ್ನು ಮುರಿಯುವ ಕೆಲಸ ಮಾಡಿದೆ. ಇದಕ್ಕಿಂತ ದೊಡ್ಡ ಜನವಿರೋಧಿ ನಡೆ ಮತ್ತೊಂದಿಲ್ಲ," ಎಂದು ಆಕ್ರೋಶ ವ್ಯಕ್ತಪಡಿಸಿದರು.

"ಅನೇಕ ದೇಶಗಳು ತಮ್ಮ ನಾಗರಿಕರ ಹಿತ ರಕ್ಷಣೆಗೆ ಪೆಟ್ರೋಲಿಯಂ ಉತ್ಪನ್ನಗಳ ಬೆಲೆ ನಿಯಂತ್ರಣ ಕ್ರಮ ಕೈಗೊಂಡಿವೆ. ಆದರೆ ಭಾರತದಲ್ಲಿ ಅಂತಹ ಕ್ರಮ ಕೈಗೊಳ್ಳದೇ ದುಡಿಯುವ ಜನರ ಹಾಗೂ ಸಾಮಾನ್ಯರ ಮೇಲೆ ಹೊರೆ ಹೆಚ್ಚಿಸಲಾಗುತ್ತಿದೆ," ಎಂದು ಆರೋಪಿಸಿದರು.




"ಜನಹಿತಕ್ಕಿಂತ ಬಿಜೆಪಿ ಮತ್ತೆ ಮತ್ತೆ ಚುನಾವಣೆಯಲ್ಲಿ ಗೆಲ್ಲುವುದೇ ಮುಖ್ಯ ಎಂಬುದು ಮತ್ತೊಮ್ಮೆ ಸಾಬೀತಾಗಿದೆ," ಎಂದು ಟೀಕಿಸಿದರು.

ನೀಟ್ ಪರೀಕ್ಷೆ ಪ್ರಶ್ನೆಪತ್ರಿಕೆ ಸೋರಿಕೆ ಕುರಿತು ಮಾತನಾಡಿದ ಅವರು, "ಕೇಂದ್ರದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದ ನಂತರ ನೀಟ್ ಸೇರಿದಂತೆ ಹಲವು ಪರೀಕ್ಷೆಗಳ ಪ್ರಶ್ನೆಪತ್ರಿಕೆ ಸೋರಿಕೆ ಸಾಮಾನ್ಯವಾಗಿದೆ. ಕೆಲವು ಶಿಕ್ಷಣ ಸಂಸ್ಥೆಗಳೊಂದಿಗೆ ಬಿಜೆಪಿಯ ಶಾಮೀಲಾತಿ ಇದಕ್ಕೆ ಕಾರಣ," ಎಂದು ಆರೋಪಿಸಿದರು.

"ಈ ಪ್ರಕರಣಕ್ಕೆ ನೈತಿಕ ಹೊಣೆ ಹೊತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ ಅವರನ್ನು ವಜಾಗೊಳಿಸಬೇಕು. ಆರೋಪಿಗಳಿಗೆ ಕಠಿಣ ಶಿಕ್ಷೆ ವಿಧಿಸಬೇಕು," ಎಂದು ಒತ್ತಾಯಿಸಿದರು.

ರಸಗೊಬ್ಬರ ದರ ಏರಿಕೆ ಕುರಿತು ಮಾತನಾಡಿದ ಅವರು, "ರಸಗೊಬ್ಬರ ಬೆಲೆ ಭಾರೀ ಪ್ರಮಾಣದಲ್ಲಿ ಹೆಚ್ಚಿಸಲಾಗಿದೆ. ಪ್ರೂಟ್ ಐಡಿ ಕಡ್ಡಾಯ ಮಾಡಿ ಪ್ರತಿ ಎಕರೆಗೆ ಎರಡು ಮೂಟೆ ಮಾತ್ರ ನೀಡಲಾಗುತ್ತಿದೆ. ರೈತರಿಗೆ ಅಗತ್ಯವಿರುವಷ್ಟು ರಸಗೊಬ್ಬರವನ್ನು ಕಡಿಮೆ ಬೆಲೆಯಲ್ಲಿ ಒದಗಿಸಬೇಕು," ಎಂದು ಆಗ್ರಹಿಸಿದರು.

ಜಿಲ್ಲಾ ಕಾರ್ಯದರ್ಶಿ ಮಂಡಳಿ ಸದಸ್ಯ ಎಂ. ವಿಜಯಕೃಷ್ಣ ಮಾತನಾಡಿ, "ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ ಕಳೆದ 10 ವರ್ಷಗಳಿಂದ 25 ರಿಂದ 35 ಡಾಲರ್ ನಡುವೆ ಇದ್ದರೂ ದೇಶದಲ್ಲಿ ಪೆಟ್ರೋಲ್–ಡೀಸೆಲ್ ಬೆಲೆ ಕಡಿಮೆ ಮಾಡಲಿಲ್ಲ. ಜನರಿಂದ ಸುಮಾರು 27.61 ಲಕ್ಷ ಕೋಟಿ ರೂಪಾಯಿ ಸಂಗ್ರಹಿಸಲಾಗಿದೆ," ಎಂದು ಆರೋಪಿಸಿದರು.

"ಇರಾನ್ ಮತ್ತು ರಷ್ಯಾದಿಂದ ಕಡಿಮೆ ದರದಲ್ಲಿ ಕಚ್ಚಾ ತೈಲ ಖರೀದಿಸುವ ಬದಲು ಅಮೆರಿಕದ ಒತ್ತಡಕ್ಕೆ ಮಣಿದು ದುಬಾರಿ ದರದಲ್ಲಿ ಅಮೆರಿಕಾ ಹಾಗೂ ವೆನೆಜುವೆಲಾದಿಂದ ಖರೀದಿ ಮಾಡಲಾಗುತ್ತಿದೆ. ಇದರ ಹೊರೆ ಜನರ ಮೇಲಿದೆ," ಎಂದು ಹೇಳಿದರು.

"ಇದಕ್ಕೆ ಪ್ರಧಾನಿ ಮೋದಿ ಅವರ ಅಸಮರ್ಥ ಆಡಳಿತವೇ ಕಾರಣ," ಎಂದು ಆರೋಪಿಸಿದರು.

ಪ್ರತಿಭಟನೆಯಲ್ಲಿ ಜಿಲ್ಲಾ ಕಾರ್ಯದರ್ಶಿ ಮಂಡಳಿ ಸದಸ್ಯರಾದ ಗಾಂಧಿನಗರ ನಾರಾಯಣಸ್ವಾಮಿ, ವಿ. ಗೀತಾ, ಮುಖಂಡರಾದ ಎಂ. ಭೀಮರಾಜ್, ವಿ. ಅಂಬರೀಶ್, ಎಸ್. ಆಶಾ, ಹೊಲ್ಲಂಬಳ್ಳಿ ವೆಂಕಟೇಶಪ್ಪ, ಹೆಚ್.ಬಿ. ಕೃಷ್ಣಪ್ಪ, ಅಪ್ಪಯ್ಯಣ, ಆಂಜನಮ್ಮ, ಚಿನ್ನಮ್ಮ, ನಾರಾಯಣಪ್ಪ, ಮುನಿರತ್ನಮ್ಮ ಸೇರಿದಂತೆ ಹಲವರು ಭಾಗವಹಿಸಿದ್ದರು.

24/05/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಕುಂದುಕೊರತೆ ಸಭೆ

ಪಾವಗಡ

ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ ಜಿ. ಅವರು ಪಟ್ಟಣದ ಆಫ್ ಬಂಡೆ ಪ್ರದೇಶದಲ್ಲಿ ಆಯೋಜಿಸಿದ್ದ ಅಲೆಮಾರಿ ಸಮುದಾಯದ ಕುಂದುಕೊರತೆ ಸಭೆಯಲ್ಲಿ ಶನಿವಾರ ಭಾಗವಹಿಸಿದರು.

ಕಾರ್ಯಕ್ರಮದಲ್ಲಿ ಅಲೆಮಾರಿ ಸಮುದಾಯದ ಜನರಿಂದ ವಿವಿಧ ಸಮಸ್ಯೆಗಳ ಕುರಿತ ಅಹವಾಲುಗಳನ್ನು ಸ್ವೀಕರಿಸಿ ಮಾತನಾಡಿದ ಅವರು, ಸರ್ಕಾರ ಕೋಟ್ಯಂತರ ರೂಪಾಯಿ ವೆಚ್ಚದಲ್ಲಿ ಅಲೆಮಾರಿ ಸಮುದಾಯಗಳ ಅಭಿವೃದ್ಧಿಗಾಗಿ ಅನೇಕ ಯೋಜನೆಗಳು ಹಾಗೂ ಕಾರ್ಯಕ್ರಮಗಳನ್ನು ಜಾರಿಗೊಳಿಸಿದೆ ಎಂದು ಹೇಳಿದರು.

"ಅಲೆಮಾರಿ ಸಮುದಾಯಗಳು ಅಭಿವೃದ್ಧಿ ಹೊಂದಬೇಕಾದರೆ ಶಿಕ್ಷಣ ಅತ್ಯಗತ್ಯ. ಅಲೆಮಾರಿ ಅಭಿವೃದ್ಧಿ ನಿಗಮದ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಲು ಈ ರೀತಿಯ ಕಾರ್ಯಕ್ರಮಗಳು ಸಹಕಾರಿಯಾಗುತ್ತವೆ. ಜೊತೆಗೆ ಜನರ ಸಮಸ್ಯೆಗಳನ್ನು ಅರಿಯಲು ಇದು ಉತ್ತಮ ವೇದಿಕೆಯಾಗಿದೆ," ಎಂದು ಹೇಳಿದರು.

ಅಲೆಮಾರಿ ಸಮುದಾಯಗಳ ಅಭಿವೃದ್ಧಿಗಾಗಿ ಪಕ್ಷಾತೀತ ಹಾಗೂ ನಿಷ್ಪಕ್ಷಪಾತವಾಗಿ ಕೆಲಸ ಮಾಡಲಾಗುವುದು. ಸರ್ಕಾರಿ ಸೌಲಭ್ಯಗಳು ನೇರವಾಗಿ ಸಮುದಾಯದ ಜನರಿಗೆ ತಲುಪುವಂತೆ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಸಭೆಯಲ್ಲಿ ಅಂಬೇಡ್ಕರ್ ಕಾರ್ಡ್ ಹಾಗೂ ಅಂಬೇಡ್ಕರ್ ಸಹಾಯಹಸ್ತ ಕಾರ್ಡ್‌ಗಳ ತಾಲ್ಲೂಕುವಾರು ಪ್ರಗತಿ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದ ಅವರು, ಅಲೆಮಾರಿ ಅಭಿವೃದ್ಧಿ ನಿಗಮದಿಂದ ತಾಲ್ಲೂಕಿಗೆ ಬಂದಿರುವ ನಿವೇಶನಗಳ ಸಂಖ್ಯೆಯ ವಿವರಗಳನ್ನೂ ಪರಿಶೀಲಿಸಿದರು.

ಆಧಾರ್ ಕಾರ್ಡ್, ಪಡಿತರ ಚೀಟಿ ಹಾಗೂ ಜಾತಿ ಪ್ರಮಾಣಪತ್ರ ಇಲ್ಲದ ಅಲೆಮಾರಿ ಸಮುದಾಯದ ಜನರನ್ನು ಶೀಘ್ರವಾಗಿ ಗುರುತಿಸಿ ಪಟ್ಟಿ ಸಿದ್ಧಪಡಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಕಾರ್ಯಕ್ರಮದ ಬಳಿಕ ಅಲೆಮಾರಿ ಸಮುದಾಯದವರ ಜೋಪಡಿಗಳಿಗೆ ಭೇಟಿ ನೀಡಿದ ಪಲ್ಲವಿ ಜಿ., ಅಡುಗೆ ಮಾಡುವ ಹಾಗೂ ಮಲಗುವ ಸ್ಥಳಗಳನ್ನು ಪರಿಶೀಲಿಸಿದರು. ಮಹಿಳೆಯರೊಂದಿಗೆ ಮಾತನಾಡಿ ಅವರ ಬದುಕಿನ ಸ್ಥಿತಿ, ಮಕ್ಕಳ ಶಿಕ್ಷಣ, ನಿವೇಶನ ಹಾಗೂ ಹಕ್ಕುಪತ್ರಗಳ ಕುರಿತು ಮಾಹಿತಿ ಪಡೆದುಕೊಂಡರು. ಈ ವೇಳೆ ಮಹಿಳೆಯರು ತೆಲುಗು ಭಾಷೆಯಲ್ಲಿ ನಿವೇಶನದ ಜೊತೆಗೆ ವಾಸಕ್ಕೆ ಜಾಗ ಒದಗಿಸುವಂತೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ವಿಮುಕ್ತ ಬುಡಕಟ್ಟು ಒಕ್ಕೂಟದ ಜಂಟಿ ನಿರ್ದೇಶಕ ಏಕಲವ್ಯ ಆನಂದ್, ಪುರಸಭೆ ಮುಖ್ಯಾಧಿಕಾರಿ ಜಾಫರ್ ಷರೀಫ್, ಜೆಡಿಎಸ್ ಮುಖಂಡ ತಿಮ್ಮಾರೆಡ್ಡಿ, ಸೊಗಡು ವೆಂಕಟೇಶ್, ಸಿಡಿಪಿಒ ಸುನಿತಾ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ದಿನೇಶ್, ಇಒ ಮಧುಸೂದನ್, ಕಂದಾಯ ಅಧಿಕಾರಿ ರಾಜಗೋಪಾಲ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೆಸ್ತೂರು ವಿಎಸ್‌ಎಸ್‌ಎನ್ ಚುನಾವಣೆಯಲ್ಲಿ ಕಾಂಗ್ರೆಸ್ ಮಾತು ತಪ್ಪಿದೆ: ಹರೀಶ್‌ಗೌಡ

ದೊಡ್ಡಬಳ್ಳಾಪುರ



ಕೆಸ್ತೂರು ವಿಎಸ್‌ಎಸ್‌ಎನ್ ಅಧ್ಯಕ್ಷ ಸ್ಥಾನ ನೀಡುವುದಾಗಿ ಭರವಸೆ ನೀಡಿ ಕಾಂಗ್ರೆಸ್ ಪಕ್ಷ ಜೆಡಿಎಸ್‌ಗೆ ಮೋಸ ಮಾಡಿದೆ ಎಂದು ತಾಲೂಕು ಜೆಡಿಎಸ್ ಅಧ್ಯಕ್ಷ ಎಸ್.ಎಂ. ಹರೀಶ್ ಗೌಡ ಆರೋಪಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ತಾಲೂಕು ಜೆಡಿಎಸ್ ಘಟಕ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚುನಾವಣೆಗೆ ಮುನ್ನ ಜೆಡಿಎಸ್ ಅಭ್ಯರ್ಥಿಗಳನ್ನು ಬಳಸಿಕೊಂಡು ಅಧಿಕಾರದ ಚುಕ್ಕಾಣಿ ಹಿಡಿದ ಕಾಂಗ್ರೆಸ್ ಈಗ ಅಧಿಕಾರ ಹಸ್ತಾಂತರಿಸದೆ ತನ್ನ ನಿಲುವು ತೋರಿದೆ ಎಂದು ಟೀಕಿಸಿದರು. "ಇನ್ನು ಮುಂದೆ ಸ್ಥಳೀಯ ಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಜೆಡಿಎಸ್ ಯಾವುದೇ ಕಾರಣಕ್ಕೂ ಬೆಂಬಲ ನೀಡುವುದಿಲ್ಲ," ಎಂದು ಸ್ಪಷ್ಟಪಡಿಸಿದರು.

ತಾಲೂಕಿನಲ್ಲಿ ಜೆಡಿಎಸ್ ಭದ್ರಕೋಟೆಯೆಂದು ಪರಿಗಣಿಸಲ್ಪಡುವ ಕೆಸ್ತೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಿಎಸ್‌ಎಸ್‌ಎನ್ ಚುನಾವಣೆಯಲ್ಲಿ ಕಾಂಗ್ರೆಸ್ ಮತ್ತು ಜೆಡಿಎಸ್ ಮೈತ್ರಿ ಮಾಡಿಕೊಂಡಿದ್ದವು. ಜೆಡಿಎಸ್‌ನಿಂದ ನಾಲ್ವರು ನಿರ್ದೇಶಕರು ಜಯಗಳಿಸಿ ಕಾಂಗ್ರೆಸ್‌ಗೆ ಬೆಂಬಲ ನೀಡಿದ್ದರು. ಚುನಾವಣೆಯ ವೇಳೆ ನೀಡಿದ ಮಾತಿನಂತೆ ಪ್ರಸ್ತುತ ಜೆಡಿಎಸ್ ಸದಸ್ಯರಿಗೆ ಅಧಿಕಾರ ನೀಡಬೇಕಾಗಿತ್ತು. ಆದರೆ ಕಾಂಗ್ರೆಸ್ ತನ್ನ ಸ್ಥಾನ ಬಲಪಡಿಸಿಕೊಳ್ಳಲು ಜೆಡಿಎಸ್ ಸದಸ್ಯರನ್ನು ಕಡೆಗಣಿಸಿ ಅಧಿಕಾರ ಪಡೆದಿದೆ ಎಂದು ಆರೋಪಿಸಿದರು.

"ವಿಎಸ್‌ಎಸ್‌ಎನ್ ನಿರ್ದೇಶಕರಾದ ಅಶ್ವಥ್ ನಾರಾಯಣ್ ಮತ್ತು ರಾಮಮೂರ್ತಿ ಅವರಿಗೆ ನೀಡಿದ್ದ ಮಾತನ್ನು ಕಾಂಗ್ರೆಸ್ ತಪ್ಪಿದೆ. ಜೆಡಿಎಸ್‌ಗೆ ಸಲ್ಲಬೇಕಿದ್ದ ಅಧಿಕಾರವನ್ನು ಕುತಂತ್ರದಿಂದ ಪಡೆದುಕೊಂಡಿದೆ," ಎಂದು ಹರೀಶ್ ಗೌಡ ಹೇಳಿದರು. ಕೆಸ್ತೂರು ವಿಎಸ್‌ಎಸ್‌ಎನ್ ಚುನಾವಣೆಯಲ್ಲಿ ತನ್ನ ಶಕ್ತಿ ಹೆಚ್ಚಿಸಿಕೊಳ್ಳಲು ಕಾಂಗ್ರೆಸ್ ಜೆಡಿಎಸ್ ಜೊತೆ ಮೈತ್ರಿ ಮಾಡಿಕೊಂಡಿತ್ತು. ಚುನಾವಣೆ ಗೆದ್ದ ಬಳಿಕ ಬೆಂಬಲ ನೀಡಿದ ಜೆಡಿಎಸ್ ನಿರ್ದೇಶಕರಿಗೆ ಅಧಿಕಾರ ಹಂಚಿಕೆ ಮಾಡುವ ಭರವಸೆ ನೀಡಲಾಗಿತ್ತು. ಆದರೆ ಅಧಿಕಾರ ಹಸ್ತಾಂತರದ ಸಮಯ ಬಂದಾಗ ಜೆಡಿಎಸ್ ಸದಸ್ಯರನ್ನು ಕಡೆಗಣಿಸಿ ಅಧಿಕಾರ ಕಸಿದುಕೊಳ್ಳಲಾಗಿದೆ ಎಂದು ಅವರು ದೂರಿದರು.

"ದೊಡ್ಡಬಳ್ಳಾಪುರ ಜೆಡಿಎಸ್ ಈ ನಡೆಗೆ ತೀವ್ರ ಖಂಡನೆ ವ್ಯಕ್ತಪಡಿಸುತ್ತದೆ. ಮುಂದಿನ ಚುನಾವಣೆಗಳಲ್ಲಿ ಕಾಂಗ್ರೆಸ್ ವಿರುದ್ಧ ಸ್ಪರ್ಧಿಸಿ ಜೆಡಿಎಸ್ ತನ್ನ ಶಕ್ತಿ ಪ್ರದರ್ಶಿಸಲಿದೆ," ಎಂದು ಹೇಳಿದರು.

ಎನ್‌ಡಿಎ ಮೈತ್ರಿ ಕುರಿತು ಮಾತನಾಡಿದ ಅವರು, "ರಾಜ್ಯ ವರಿಷ್ಠರಿಂದ ಲೋಕಸಭೆ ಚುನಾವಣೆಯಲ್ಲಿ ಮಾತ್ರ ಮೈತ್ರಿ ಪಾಲನೆ ಮಾಡಲು ಸೂಚನೆ ಇದೆ. ಸ್ಥಳೀಯ ಚುನಾವಣೆಗಳಲ್ಲಿ ಮೈತ್ರಿ ಕಡ್ಡಾಯ ಎಂದು ಯಾವುದೇ ಆದೇಶ ಬಂದಿಲ್ಲ. ಸ್ಥಳೀಯ ಅಗತ್ಯಕ್ಕೆ ಅನುಗುಣವಾಗಿ ಮೈತ್ರಿ ಮಾಡಿಕೊಳ್ಳಲು ಅವಕಾಶ ಇದೆ," ಎಂದು ಹೇಳಿದರು.

ತಾಲೂಕಿನಲ್ಲಿ ನಡೆಯುತ್ತಿರುವ ಪಕ್ಷ ವಿರೋಧಿ ಚಟುವಟಿಕೆಗಳನ್ನು ರಾಜ್ಯ ನಾಯಕತ್ವ ಗಮನಿಸುತ್ತಿದೆ. ಸೂಕ್ತ ಸಮಯದಲ್ಲಿ ಕ್ರಮ ಕೈಗೊಳ್ಳಲಿದೆ ಎಂದು ಹೇಳಿದರು.

ಕಳೆದ ನಾಲ್ಕು ತಿಂಗಳ ಹಿಂದೆ ತಾಲೂಕಿಗೆ ಆಗಮಿಸಿದ್ದ ಕೋರ್ ಕಮಿಟಿ ಅಧ್ಯಕ್ಷ ಕೃಷ್ಣಾರೆಡ್ಡಿ ಕಾರ್ಯಕರ್ತರ ಅಭಿಪ್ರಾಯ ಸಂಗ್ರಹಿಸಿದ್ದರು. ನೂತನ ಜಿಲ್ಲಾಧ್ಯಕ್ಷ ಮಂಜುನಾಥ್ ಹಲವು ಸಭೆಗಳನ್ನು ನಡೆಸಿ ತಾಲೂಕು ಘಟಕದ ಹೊಸ ಪದಾಧಿಕಾರಿಗಳನ್ನು ಆಯ್ಕೆ ಮಾಡಿದ್ದಾರೆ ಎಂದು ಹೇಳಿದರು.

"ಕೆಲವರು ಕೋರ್ ಕಮಿಟಿ ಅಧ್ಯಕ್ಷರು, ಜಿಲ್ಲಾಧ್ಯಕ್ಷರು ಮತ್ತು ತಾಲೂಕು ಸಮಿತಿ ಸದಸ್ಯರ ವಿರುದ್ಧ ಏಕವಚನದಲ್ಲಿ ಮಾತನಾಡುತ್ತಿರುವ ಮಾಹಿತಿ ರಾಜ್ಯ ಸಮಿತಿಗೆ ತಿಳಿದಿದೆ. ರಾಜ್ಯ ಯುವ ನಾಯಕ ನಿಖಿಲ್ ಕುಮಾರಸ್ವಾಮಿ ಅವರ ಕಾರ್ಯಕ್ರಮ ಹಾಳು ಮಾಡಲು ಮಾಡಿದ ಪ್ರಯತ್ನಗಳ ಬಗ್ಗೆಯೂ ವರಿಷ್ಠರಿಗೆ ಮಾಹಿತಿ ಇದೆ. ಸಮಯ ಬಂದಾಗ ಸೂಕ್ತ ನಿರ್ಧಾರ ಕೈಗೊಳ್ಳಲಾಗುತ್ತದೆ," ಎಂದು ಹೇಳಿದರು.

ಕೆಸ್ತೂರು ವಿಎಸ್‌ಎಸ್‌ಎನ್ ನಿರ್ದೇಶಕ ರಾಮಮೂರ್ತಿ ಮಾತನಾಡಿ, "ನಾನು ಜೆಡಿಎಸ್‌ನ ನಿಷ್ಠಾವಂತ ಕಾರ್ಯಕರ್ತ. ಚುನಾವಣೆಯ ವೇಳೆ ಕಾಂಗ್ರೆಸ್‌ಗೆ ಮೂರು ವರ್ಷ ಹಾಗೂ ಜೆಡಿಎಸ್‌ಗೆ ಎರಡು ವರ್ಷ ಅಧಿಕಾರ ಎಂಬ ಒಪ್ಪಂದವಾಗಿತ್ತು. ಅದರಂತೆ ಕೇವಲ ಆರು ತಿಂಗಳು ಅಧ್ಯಕ್ಷ ಸ್ಥಾನ ಬಿಡುವಂತೆ ಜೆಡಿಎಸ್ ಮುಖಂಡ ಹುಸ್ಕೂರ್ ಆನಂದ್ ಅವರನ್ನು ಕೇಳಿದ್ದೆ. ಅವರು ಒಪ್ಪಿದ್ದರು," ಎಂದರು.

ಆದರೆ ನಂತರದ ಅಧ್ಯಕ್ಷರ ಚುನಾವಣೆಯಲ್ಲಿ ತಮ್ಮ ಗಮನಕ್ಕೂ ತರದೆ ಕಾಂಗ್ರೆಸ್ ಅಭ್ಯರ್ಥಿಗೆ ಬೆಂಬಲ ನೀಡಲಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. "ಸ್ವಂತ ಪಕ್ಷದವರೇ ನಮಗೆ ಮೋಸ ಮಾಡಿದರೆ ನಾವು ಯಾರನ್ನು ಕೇಳಬೇಕು? ಜೆಡಿಎಸ್ ಕಾರ್ಯಕರ್ತರನ್ನು ಉಳಿಸುವ ನಿಟ್ಟಿನಲ್ಲಿ ರಾಜ್ಯ ನಾಯಕತ್ವ ತೀರ್ಮಾನ ಕೈಗೊಳ್ಳಬೇಕು," ಎಂದು ಮನವಿ ಮಾಡಿದರು.

ವಿಎಸ್‌ಎಸ್‌ಎನ್ ನಿರ್ದೇಶಕ ಮಂಡಿಬ್ಯಾಡರಹಳ್ಳಿ ಅಶ್ವಥ್ ನಾರಾಯಣ್ ಮಾತನಾಡಿ, ಕಾಂಗ್ರೆಸ್ ಜೊತೆ ಮೈತ್ರಿ ಮಾಡಿಕೊಂಡಿದ್ದು ಸತ್ಯ ಎಂದು ಒಪ್ಪಿಕೊಂಡರು. "ಚುನಾವಣೆಯ ಬಳಿಕ ಹೆಚ್ಚು ಮತಗಳಿಂದ ಗೆದ್ದಿದ್ದ ರಾಮಮೂರ್ತಿಯನ್ನು ಅಧ್ಯಕ್ಷರನ್ನಾಗಿ ಮಾಡಬೇಕೆಂದು ಕೇಳಿದ್ದೆವು. ಆಗ ಮೊದಲು ನಮಗೆ ಅವಕಾಶ ನೀಡಿ ನಂತರ ರಾಮಮೂರ್ತಿಯನ್ನು ಮಾಡೋಣ ಎಂದು ಹೇಳಿದ್ದರು. ಆದರೆ ನಂತರ ಕಾಂಗ್ರೆಸ್‌ಗೆ ಮಾತು ಕೊಟ್ಟಿದ್ದೇನೆ ಎಂದು ಹೇಳಿ ನಮ್ಮ ಮತಗಳನ್ನು ಕಾಂಗ್ರೆಸ್ ಪರ ಬಳಸಿದರು," ಎಂದು ಆರೋಪಿಸಿದರು.

"ಈಗ ಮತ್ತೆ ರಾಮಮೂರ್ತಿಗೆ ಅವಕಾಶ ನೀಡದೆ ಕಾಂಗ್ರೆಸ್ ಬೆಂಬಲಿಸಿ ಸ್ವಪಕ್ಷದವರನ್ನೇ ವಂಚಿಸಿದ್ದಾರೆ. ನಮ್ಮವರೇ ವಂಚಿಸಿದರೆ ನ್ಯಾಯಕ್ಕಾಗಿ ಯಾರ ಬಳಿಗೆ ಹೋಗಬೇಕು?" ಎಂದು ಪ್ರಶ್ನಿಸಿದರು. ಸುದ್ದಿಗೋಷ್ಠಿಯಲ್ಲಿ ತಾಲೂಕು ಜೆಡಿಎಸ್ ಮುಖಂಡರಾದ ತ.ನ. ಪ್ರಭುದೇವ್, ಕೆಂಪರಾಜ್, ಪ್ರಭಾಕರ್, ನಾಗರಾಜ್, ಪ್ರವೀಣ್, ಅಶ್ವಥ್ ನಾರಾಯಣ್ ಸೇರಿದಂತೆ ಹಲವು ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

# 5 ಲಕ್ಷ ಸಸಿ ನೆಡುವ ಮಹತ್ವಾಕಾಂಕ್ಷಿ ಯೋಜನೆ

ಚಿಕ್ಕಬಳ್ಳಾಪುರ



ರಾಜ್ಯದಲ್ಲೇ ಮಾದರಿಯಾಗುವ ಗುರಿಯೊಂದಿಗೆ ಚಿಕ್ಕಬಳ್ಳಾಪುರ ಜಿಲ್ಲೆಯನ್ನು ಸಸಿ ನೆಡುವ ಅಭಿಯಾನದ ಪೈಲಟ್ ಯೋಜನೆಯಾಗಿ ಆಯ್ಕೆ ಮಾಡಲಾಗಿದ್ದು, ಮಿಯಾವಾಕಿ ವಿಧಾನದಲ್ಲಿ 5 ಲಕ್ಷ ಸಸಿಗಳನ್ನು ನೆಡುವ ಯೋಜನೆ ಕೈಗೆತ್ತಿಕೊಳ್ಳಲಾಗಿದೆ ಎಂದು ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳು ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಯ ಆಡಳಿತಾತ್ಮಕ ನ್ಯಾಯಾಧೀಶ ಹಂಚಾಟೆ ಸಂಜೀವಕುಮಾರ್ ತಿಳಿಸಿದರು.

ಪರಿಸರ ದಿನಾಚರಣೆ ಅಂಗವಾಗಿ ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ 5 ಲಕ್ಷಕ್ಕೂ ಹೆಚ್ಚು ಗಿಡಗಳನ್ನು ನೆಡುವ ಕುರಿತು ಜಿಲ್ಲಾ ನ್ಯಾಯಾಲಯ ಸಭಾಂಗಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಮೂಲಕ ರಾಜ್ಯದಾದ್ಯಂತ 5 ಕೋಟಿ ಸಸಿಗಳನ್ನು ನೆಡುವ ಮಹತ್ವದ ಅಭಿಯಾನಕ್ಕೆ ಚಾಲನೆ ನೀಡಲಾಗಿದೆ ಎಂದು ಹೇಳಿದರು.

"ಚಿಕ್ಕಬಳ್ಳಾಪುರವು ಗ್ರೀನ್ ರಿಂಗ್ ಬೆಂಗಳೂರು ಕಾರಿಡಾರ್ ವ್ಯಾಪ್ತಿಯಲ್ಲಿ ಬರುತ್ತದೆ. ಈ ಕಾರಿಡಾರ್ ವಿಧಾನಸೌಧದಿಂದ ಸುಮಾರು 50 ಕಿಲೋ ಮೀಟರ್ ವೈಮಾನಿಕ ಅಂತರದೊಳಗಿನ ಪ್ರದೇಶಗಳನ್ನು ಒಳಗೊಂಡಿದೆ. ಈ ಯೋಜನೆಯಡಿ ವಿಸ್ತರಿಸುತ್ತಿರುವ ಬೆಂಗಳೂರು ಸುತ್ತಮುತ್ತ ಜೀವ ವೈವಿಧ್ಯತೆ ಹೆಚ್ಚಿಸುವುದು, ಅಂತರ್ಜಲ ಮರುಪೂರಣ ವೃದ್ಧಿಸುವುದು ಹಾಗೂ ಧೂಳು ಮತ್ತು ವಾಯುಮಾಲಿನ್ಯ ಕಡಿಮೆ ಮಾಡುವ ಉದ್ದೇಶದಿಂದ ರಾಜ್ಯದಲ್ಲಿ 5 ಕೋಟಿ ಸಸಿಗಳನ್ನು ನೆಡಲಾಗುತ್ತಿದೆ," ಎಂದು ವಿವರಿಸಿದರು.

ಚಿಕ್ಕಬಳ್ಳಾಪುರ ಜಿಲ್ಲೆಗೆ ಹೆಚ್ಚಿನ ಅರಣ್ಯ ಪ್ರದೇಶಗಳ ಅಗತ್ಯ ತುರ್ತಾಗಿದೆ. ಜಿಲ್ಲೆ ಗಂಭೀರ ಪರಿಸರ ಒತ್ತಡ ಎದುರಿಸುತ್ತಿದ್ದು, ಅಂತರ್ಜಲ ಮಟ್ಟ ಗಣನೀಯವಾಗಿ ಕುಸಿದಿದೆ ಎಂದು ಅವರು ಹೇಳಿದರು.

"2023ರ ಫೆಬ್ರವರಿಯಲ್ಲಿ ಜಿಲ್ಲೆಯ ಸರಾಸರಿ ಅಂತರ್ಜಲ ಮಟ್ಟ ಭೂಮಿಯ ಮೇಲ್ಮೈಯಿಂದ 17.52 ಮೀಟರ್ ಆಳದಲ್ಲಿತ್ತು. ಆದರೆ 2024ರ ಫೆಬ್ರವರಿಗೆ ಅದು 35.66 ಮೀಟರ್ ಆಳಕ್ಕೆ ಕುಸಿದಿದ್ದು, ಸರಾಸರಿ 18.14 ಮೀಟರ್ ಕುಸಿತ ದಾಖಲಾಗಿದೆ," ಎಂದು ಮಾಹಿತಿ ನೀಡಿದರು.

ಸಂವಿಧಾನ ನಮಗೆ ಹಕ್ಕುಗಳನ್ನು ನೀಡಿದಂತೆ ಕರ್ತವ್ಯಗಳನ್ನೂ ನಿರ್ದಿಷ್ಟ ಪಡಿಸಿದೆ. ಪರಿಸರ ಸಂರಕ್ಷಣೆ ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ ಎಂದು ಡಾ. ಬಿ.ಆರ್. ಅಂಬೇಡ್ಕರ್ ಒತ್ತಿ ಹೇಳಿದ್ದಾರೆ ಎಂದು ಸ್ಮರಿಸಿದರು.

"ಇಂದಿನ ಮತ್ತು ಮುಂದಿನ ಪೀಳಿಗೆಯ ಉಳಿವಿಗಾಗಿ ಪರಿಸರ ಸಂರಕ್ಷಣೆ ಅತ್ಯವಶ್ಯಕ. ಗಿಡಗಳನ್ನು ನೆಟ್ಟು ಅವುಗಳನ್ನು ಪೋಷಿಸುವ ಹೊಣೆಗಾರಿಕೆ ನಮ್ಮೆಲ್ಲರ ಮೇಲಿದೆ. ಚಿಕ್ಕಬಳ್ಳಾಪುರ ನ್ಯಾಯಾಂಗ ಮತ್ತು ಜಿಲ್ಲಾಡಳಿತ ಸೇರಿ 5 ಲಕ್ಷ ಸಸಿಗಳನ್ನು ನೆಟ್ಟು ಬೆಳೆಸುವ ಕಾರ್ಯಕ್ಕೆ ಮುಂದಾಗಿರುವುದು ಶ್ಲಾಘನೀಯ," ಎಂದರು.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಟಿ.ಪಿ. ರಾಮಲಿಂಗೇಗೌಡ ಮಾತನಾಡಿ, ರಾಜ್ಯದಲ್ಲಿ 5 ಕೋಟಿ ಗಿಡಗಳನ್ನು ನೆಟ್ಟು ಪರಿಸರ ಸಂರಕ್ಷಣೆ ಮಾಡುವ ಉದ್ದೇಶದಿಂದ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರವು ಧರೆ ಫೌಂಡೇಶನ್ ಜೊತೆ ಒಪ್ಪಂದ ಮಾಡಿಕೊಂಡಿದೆ ಎಂದು ತಿಳಿಸಿದರು.

"ಶಿಡ್ಲಘಟ್ಟ ತಾಲ್ಲೂಕಿನ ಅಪ್ಪೇಗೌಡನಹಳ್ಳಿಯ ಇಂದಿರಾ ಗಾಂಧಿ ವಸತಿ ಶಾಲೆಯಲ್ಲಿ ಕಳೆದ ಏಪ್ರಿಲ್‌ನಲ್ಲಿ ಗಿಡ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿತ್ತು. ಅದರ ಮುಂದುವರಿದ ಭಾಗವಾಗಿ ಸರ್ ಎಂ. ವಿಶ್ವೇಶ್ವರಯ್ಯ ಸ್ಮಾರಕದ ಬಳಿ 5 ಗುಂಟೆ ಜಮೀನಿನಲ್ಲಿ ಗಿಡ ನೆಡುವ ಕಾರ್ಯ ಆರಂಭಿಸಲಾಗಿದೆ," ಎಂದರು.

ಮುಂದಿನ ದಿನಗಳಲ್ಲಿ ಜಿಲ್ಲೆಯ ವಿವಿಧೆಡೆ ಈ ಯೋಜನೆ ಅನುಷ್ಠಾನಗೊಳ್ಳಲಿದ್ದು, ಒಟ್ಟು 5 ಲಕ್ಷ ಗಿಡಗಳನ್ನು ನೆಟ್ಟು ಬೆಳೆಸುವ ಗುರಿ ಹೊಂದಲಾಗಿದೆ ಎಂದು ಹೇಳಿದರು.

"ಕೇವಲ ಗಿಡ ನೆಡುವುದರಿಂದ ಸಾಲದು. ಅವು ಬೆಳೆಯುವವರೆಗೆ ಕನಿಷ್ಠ ಮೂರು ವರ್ಷ ಸಂರಕ್ಷಣೆ ಅಗತ್ಯ. ಜಿಲ್ಲಾಡಳಿತ, ಅರಣ್ಯ ಇಲಾಖೆ ಹಾಗೂ ಸಾಮಾಜಿಕ ಅರಣ್ಯ ಇಲಾಖೆಯ ಸಹಕಾರದೊಂದಿಗೆ ಗಿಡಗಳನ್ನು ಉಳಿಸಿ ಬೆಳೆಸಲಾಗುವುದು," ಎಂದು ತಿಳಿಸಿದರು.

ಈ ಕಾರ್ಯಕ್ಕೆ ವಕೀಲರು, ಪತ್ರಕರ್ತರು, ಶಿಕ್ಷಕರು, ವಿದ್ಯಾರ್ಥಿಗಳು, ಸರ್ಕಾರೇತರ ಸಂಸ್ಥೆಗಳು ಹಾಗೂ ಸಾರ್ವಜನಿಕರು ಸಹಕರಿಸಬೇಕು ಎಂದು ಮನವಿ ಮಾಡಿದರು. ಜಿಲ್ಲಾಧಿಕಾರಿ ಜಿ. ಪ್ರಭು ಮಾತನಾಡಿ, "ಈ ವರ್ಷ ಮುಂಗಾರು ಅವಧಿಯಲ್ಲಿ 5 ಲಕ್ಷ ಗಿಡಗಳನ್ನು ನೆಡುವುದಕ್ಕೆ ಜಿಲ್ಲಾಡಳಿತ ಸಕಲ ಸಿದ್ಧತೆ ಮಾಡಿಕೊಂಡಿದೆ," ಎಂದರು.

ಸರ್ಕಾರಿ ಶಾಲೆ–ಕಾಲೇಜುಗಳ ಆವರಣ, ಸರ್ಕಾರಿ ಆಸ್ಪತ್ರೆಗಳು, ಮುಜರಾಯಿ ಇಲಾಖೆಯ ಆಸ್ತಿಗಳು, ದೇವಸ್ಥಾನಗಳ ಆವರಣ, ಸ್ಮಶಾನಗಳು, ಕೆರೆಗಳ ಸುತ್ತಮುತ್ತ ಹಾಗೂ ತ್ಯಾಜ್ಯ ವಿಲೇವಾರಿ ಘಟಕಗಳ ವ್ಯಾಪ್ತಿಯಲ್ಲಿ ಗಿಡಗಳನ್ನು ನೆಡುವ ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದರು.

"ಜಿಲ್ಲಾಡಳಿತದ ಕಾರ್ಯಕ್ರಮದ ಜೊತೆಗೆ ಕಾನೂನು ಸೇವಾ ಪ್ರಾಧಿಕಾರದ ಸಹಯೋಗದಲ್ಲಿ ಹೆಚ್ಚುವರಿಯಾಗಿ 5 ಲಕ್ಷ ಸಸಿಗಳನ್ನು ಬೆಳೆಸುವ ಅರ್ಥಪೂರ್ಣ ಕಾರ್ಯಕ್ರಮ ಅನುಷ್ಠಾನಗೊಳ್ಳಲಿದೆ. ಜಿಲ್ಲೆಯಲ್ಲಿ ಈ ವರ್ಷ ನೆಡಲಿರುವ 10 ಲಕ್ಷ ಗಿಡಗಳಲ್ಲಿ ಕನಿಷ್ಠ ಶೇ. 80ರಷ್ಟು ಗಿಡಗಳನ್ನು ಉಳಿಸಿ ಬೆಳೆಸುವ ಗುರಿ ಹೊಂದಿದ್ದೇವೆ," ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರಥಮ ಹೆಚ್ಚುವರಿ ಜಿಲ್ಲಾ ನ್ಯಾಯಾಧೀಶ ಕಾಂತರಾಜ್, ಹಿರಿಯ ಸಿವಿಲ್ ನ್ಯಾಯಾಧೀಶೆ ಬಿ. ಶಿಲ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಅಭಿಲಾಷ್, ಧರೆ ಫೌಂಡೇಶನ್ ಪ್ರತಿನಿಧಿ ವೃಷಾಂಕ್ ಭಟ್, ಬಾರ್ ಕೌನ್ಸಿಲ್ ಸದಸ್ಯ ಹರೀಶ್ ಕುಮಾರ್, ವಕೀಲರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# ನಗರಸಭೆ ಉಪಾಧ್ಯಕ್ಷ ಸ್ಥಾನಕ್ಕೆ ಚುನಾವಣೆ

ದೊಡ್ಡಬಳ್ಳಾಪುರ

ನಗರಸಭೆ ಉಪಾಧ್ಯಕ್ಷರಾಗಿದ್ದ ರೈಲ್ವೇ ಸ್ಟೇಷನ್ ಮಲ್ಲೇಶ್ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿರುವ ಹಿನ್ನೆಲೆಯಲ್ಲಿ ತೆರವಾದ ಉಪಾಧ್ಯಕ್ಷ ಸ್ಥಾನಕ್ಕೆ ಮೇ 25ರಂದು ಚುನಾವಣೆ ನಡೆಯಲಿದೆ. ಜಿಲ್ಲಾಧಿಕಾರಿಗಳ ಆದೇಶದನ್ವಯ ಚುನಾವಣಾ ಪ್ರಕ್ರಿಯೆ ನಡೆಯಲಿದೆ.

ದೊಡ್ಡಬಳ್ಳಾಪುರ ನಗರಸಭೆಯ ಉಪಾಧ್ಯಕ್ಷ ಸ್ಥಾನ ಸಾಮಾನ್ಯ ವರ್ಗಕ್ಕೆ ಮೀಸಲಾಗಿದ್ದು, ಪ್ರಸ್ತುತ ಉಪಾಧ್ಯಕ್ಷರಾಗಿದ್ದ ಎಂ. ಮಲ್ಲೇಶ್ ಅವರು ಮೈತ್ರಿ ಒಪ್ಪಂದದಂತೆ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.

ಕರ್ನಾಟಕ ನಗರಪಾಲಿಕೆ ಚುನಾವಣಾ ನಿಯಮಾವಳಿಗಳ ಅನ್ವಯ ಮೇ 25ರ ಸೋಮವಾರ ಮಧ್ಯಾಹ್ನ 1 ಗಂಟೆಗೆ ನಗರಸಭೆ ಕಚೇರಿಯಲ್ಲಿ ಚುನಾಯಿತ ಸದಸ್ಯರ ಸಮ್ಮುಖದಲ್ಲಿ ಉಪಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಯಲಿದೆ.

ನಗರಸಭೆ ಚುನಾವಣೆಯ ನಂತರ ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು ಮೈತ್ರಿ ಮಾಡಿಕೊಂಡು ಅಧಿಕಾರ ಹಿಡಿದಿದ್ದವು. ಒಪ್ಪಂದದಂತೆ ಬಿಜೆಪಿ ಸುಮಾರು ನಾಲ್ಕೂವರೆ ವರ್ಷಗಳ ಕಾಲ ಅಧ್ಯಕ್ಷ ಸ್ಥಾನದಲ್ಲಿ ಆಡಳಿತ ನಡೆಸಿದ್ದು, ಉಳಿದ ಕೆಲವೇ ತಿಂಗಳ ಅವಧಿಗೆ ಜೆಡಿಎಸ್‌ಗೆ ಅಧ್ಯಕ್ಷ ಸ್ಥಾನ ಬಿಟ್ಟುಕೊಟ್ಟು ಉಪಾಧ್ಯಕ್ಷ ಸ್ಥಾನವನ್ನು ಬಿಜೆಪಿ ಉಳಿಸಿಕೊಳ್ಳಲಿದೆ.

ಪ್ರಸ್ತುತ ಉಪಾಧ್ಯಕ್ಷ ಸ್ಥಾನಕ್ಕಾಗಿ ಬಿಜೆಪಿಯಲ್ಲಿ ಪದ್ಮನಾಭ್ (ಪದ್ದಿ), ವೆಂಕಟೇಶ್ (ಬಂತಿ) ಹಾಗೂ ಲಕ್ಷ್ಮೀಪತಿ ಅವರ ನಡುವೆ ತೀವ್ರ ಪೈಪೋಟಿ ಆರಂಭವಾಗಿದೆ. ಆಶ್ಚರ್ಯಕರ ಸಂಗತಿಯೆಂದರೆ, ಈ ಮೂವರು ಆಕಾಂಕ್ಷಿಗಳೂ ಶಾಸಕ ಧೀರಜ್ ಮುನಿರಾಜ್ ಅವರ ಆಪ್ತ ಬಳಗದಲ್ಲಿ ಗುರುತಿಸಿಕೊಂಡವರಾಗಿದ್ದಾರೆ. ಹೀಗಾಗಿ ಉಪಾಧ್ಯಕ್ಷ ಅಭ್ಯರ್ಥಿ ಆಯ್ಕೆ ಪ್ರಕ್ರಿಯೆ ಶಾಸಕ ಧೀರಜ್ ಮುನಿರಾಜ್ ಅವರಿಗೆ ಸ್ವಲ್ಪ ಮಟ್ಟಿನ ತಲೆನೋವಾಗುವ ಸಾಧ್ಯತೆ ಇದೆ ಎಂದು ರಾಜಕೀಯ ವಲಯದಲ್ಲಿ

# ಕಲ್ಲಿದ್ದಲು ಗಣಿ ಸ್ಫೋಟ: 82 ಜನರು ಸಾವು

ಬೀಜಿಂಗ್ (ಚೀನಾ)

ಉತ್ತರ ಚೀನಾದ ಕಲ್ಲಿದ್ದಲು ಗಣಿಯಲ್ಲಿ ಸಂಭವಿಸಿದ ಅನಿಲ ಸ್ಫೋಟದಲ್ಲಿ ಕನಿಷ್ಠ 82 ಜನರು ಸಾವನ್ನಪ್ಪಿದ್ದಾರೆ ಎಂದು ಅಲ್ಲಿನ ಮಾಧ್ಯಮ ಶನಿವಾರ ವರದಿ ಮಾಡಿದೆ. ಇದು ಇತ್ತೀಚಿನ ವರ್ಷಗಳಲ್ಲಿ ಚೀನಾದಲ್ಲಿ ನಡೆದ ಅತಿದೊಡ್ಡ ಕೈಗಾರಿಕಾ ವಿಪತ್ತುಗಳಲ್ಲಿ ಒಂದಾಗಿದೆ.

ಶಾಂಕ್ಸಿ ಪ್ರಾಂತ್ಯದ ಲಿಯುಶೆನ್ಯು ಕಲ್ಲಿದ್ದಲು ಗಣಿಯಲ್ಲಿ ಶುಕ್ರವಾರ ಸಂಜೆ 7:29ಕ್ಕೆ ಸ್ಫೋಟ ಸಂಭವಿಸಿದೆ ಎಂದು ರಾಜ್ಯ ಸುದ್ದಿ ಸಂಸ್ಥೆ ಕ್ಸಿನ್ಹುವಾ ವರದಿ ಮಾಡಿದೆ. ಆ ಸಮಯದಲ್ಲಿ ಒಟ್ಟು 247 ಕಾರ್ಮಿಕರು ನೆಲದಡಿಯಲ್ಲಿದ್ದರು. ಅವರಲ್ಲಿ ಹೆಚ್ಚಿನವರನ್ನು ಶನಿವಾರ ಬೆಳಗ್ಗೆ ಮೇಲೆ ತರಲಾಯಿತು ಎಂದು ಕ್ಸಿನ್ಹುವಾ ತಿಳಿಸಿದೆ.

ಘಟನೆಯಲ್ಲಿ ಕನಿಷ್ಠ 82 ಜನರು ಸಾವನ್ನಪ್ಪಿದ್ದಾರೆ. ಪತ್ತೆಯಾಗದ ಒಂಬತ್ತು ಜನರಿಗಾಗಿ ರಕ್ಷಣಾ ಕಾರ್ಯಕರ್ತರು ಇನ್ನೂ ತೀವ್ರವಾಗಿ ಹುಡುಕುತ್ತಿದ್ದಾರೆ ಎಂದು ಹೇಳಿದೆ.

ಚೀನಾದ ಸರ್ಕಾರಿ ಮಾಧ್ಯಮವಾಗಿರುವ ಸಿಸಿಟಿವಿ ಪ್ರಕಟಿಸಿದ ದೃಶ್ಯಗಳಲ್ಲಿ ಹೆಲ್ಮೆಟ್ ಧರಿಸಿದ ರಕ್ಷಣಾ ಕಾರ್ಯಕರ್ತರು ಸ್ಥಳದಲ್ಲಿ ಸ್ಟ್ರೆಚರ್‌ಗಳನ್ನು ಹೊತ್ತೊಯ್ಯುತ್ತಿರುವುದು ಕಂಡುಬಂದಿದೆ. ಅಲ್ಲದೇ, ಆಂಬ್ಯುಲೆನ್ಸ್‌ಗಳೂ ಗೋಚರಿಸುತ್ತಿವೆ.

ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರು, ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆ ನೀಡುವಂತೆ ಸೂಚಿಸಿದ್ದಾರೆ. ಘಟನೆಯ ಬಗ್ಗೆ ಸಂಪೂರ್ಣ ತನಿಖೆಗೆ ಆದೇಶ ಮಾಡಿದ್ದಾರೆ ಎಂದು ಕ್ಸಿನ್ಹುವಾ ಹೇಳಿದೆ.

'ಈ ಅಪಘಾತದಿಂದ ಪಾಠಗಳನ್ನು ಕಲಿಯಬೇಕು, ಕೆಲಸದ ಸ್ಥಳದ ಸುರಕ್ಷತೆಯ ಬಗ್ಗೆ ನಿರಂತರವಾಗಿ ಜಾಗರೂಕರಾಗಿರಬೇಕು. ಪ್ರಮುಖ ಮತ್ತು ದುರಂತ ಅಪಘಾತಗಳ ಸಂಭವವನ್ನು ದೃಢನಿಶ್ಚಯದಿಂದ ತಡೆಯಬೇಕು ಮತ್ತು ನಿಗ್ರಹಿಸಬೇಕು' ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಆದೇಶ ನೀಡಿದ್ದಾರೆ.

ಗಣಿಯಲ್ಲಿ ಹೆಚ್ಚು ವಿಷಕಾರಿ, ವಾಸನೆಯಿಲ್ಲದ ಅನಿಲವಾದ ಇಂಗಾಲದ ಮಾನಾಕ್ಸೈಡ್ ಮಟ್ಟವು "ಮಿತಿ ಮೀರಿದೆ" ಎಂದು ಕಂಡುಬಂದ ನಂತರ ನಾಲ್ಕು ಸಾವುಗಳು ಮತ್ತು ಡಜನ್ಗಟ್ಟಲೆ ಜನರು ಸಿಲುಕಿದ್ದಾರೆ ಎಂದು ರಾಜ್ಯ ಮಾಧ್ಯಮಗಳು ಆರಂಭದಲ್ಲಿ ವರದಿ ಮಾಡಿದ್ದವು.

ಚೀನಾದ ಬಡ ಪ್ರಾಂತ್ಯಗಳಲ್ಲಿ ಒಂದಾದ ಶಾಂಕ್ಸಿ, ದೇಶದ ಕಲ್ಲಿದ್ದಲು ಗಣಿಗಾರಿಕೆ ರಾಜಧಾನಿಯಾಗಿದೆ. ಇತ್ತೀಚಿನ ದಶಕಗಳಲ್ಲಿ ದೇಶದಲ್ಲಿ ಗಣಿ ಸುರಕ್ಷತೆ ಸುಧಾರಿಸಿದೆ.

ಆದರೆ, ಸುರಕ್ಷತಾ ಪ್ರೋಟೋಕಾಲ್‌ಗಳು ಸಡಿಲವಾಗಿರುವುದರಿಂದಾಗಿ ಮತ್ತು ನಿಯಮಗಳು ಅಸ್ಪಷ್ಟವಾಗಿರುವುದರಿಂದಾಗಿ ಇನ್ನೂ ಅಲ್ಲಲ್ಲಿ ಇಂತಹ ದುರಂತಗಳು ಸಂಭವಿಸುತ್ತಲೇ ಇವೆ.

# ಗಾಣಕಲ್ ನಟರಾಜ್ ಅಪ್ರಬುದ್ಧ: ಸಬ್ಬಕೆರೆ ಶಿವಲಿಂಗಪ್ಪ

ರಾಮನಗರ

ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಗಾಣಕಲ್ ನಟರಾಜು, ಅಪ್ರಬುದ್ಧರಂತೆ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಬರೆದುಕೊಟ್ಟಿರುವುದನ್ನು ಮಾಧ್ಯಮದ ಮುಂದೆ ಹೇಳುವ ಬದಲು, ಬೈರಮಂಗಲಕ್ಕೆ ಡಿಸಿಎಂ ಜೊತೆಗೂಡಿ ಬರಲಿ, ಸ್ಥಳೀಯ ರೈತರನ್ನು ಮಾತನಾಡಿಸಲಿ ಎಂದು ರಾಮನಗರ ತಾಲ್ಲೂಕು ಜೆಡಿಎಸ್ ಅಧ್ಯಕ್ಷ ಸಬ್ಬಕೆರೆ ಶಿವಲಿಂಗಪ್ಪ ಸವಾಲು ಹಾಕಿದರು.

ನಗರದ ಜೆಡಿಎಸ್ ಕಚೇರಿಯಲ್ಲಿ ಶುಕ್ರವಾರ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಿಖಿಲ್ ಕುಮಾರಸ್ವಾಮಿ ವಿರುದ್ಧ ಗಾಣಕಲ್ ನಟರಾಜು ನೀಡಿದ್ದ ಹೇಳಿಕೆಗೆ ಪ್ರತ್ಯುತ್ತರ ನೀಡಿದರು. ಪಕ್ಷದ ಯುವ ಘಟಕದ ರಾಜ್ಯಾಧ್ಯಕ್ಷ ಬಿಡದಿ ಸ್ಮಾರ್ಟ್ ಸಿಟಿ ಯೋಜನೆ ಕುರಿತು ಹೇಳಿರುವ ಹೇಳಿಕೆಯಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್ ವಿರುದ್ಧ ಏಕವಚನದ ಪದ ಬಳಕೆ ಮಾಡಿಲ್ಲ. ಈ ಬಗ್ಗೆ ಮಾಧ್ಯಮದ ವರದಿಗಳನ್ನು ತೆಗೆದು ನೋಡಿಕೊಳ್ಳಲಿ. ಗಾಣಕಲ್ ನಟರಾಜು ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಬೈರಮಂಗಲಕ್ಕೆ ಆಗಮಿಸಲಿ, ಯಾರು ಯಾರಿಗೆ ಘೇರಾವ್ ಹಾಕುತ್ತಾರೆ ಎಂಬುದು ತಿಳಿಯಲಿದೆ. ನಾವು ನಿಖಿಲ್ ಕುಮಾರಸ್ವಾಮಿ ಅವರನ್ನು ಕರೆದುಕೊಂಡು ಬರುತ್ತೇವೆ ಎಂದು ಸವಾಲೆಸೆದರು.

ಬಿಡದಿ ಸ್ಮಾರ್ಟ್ ಸಿಟಿ ಯೋಜನೆ ಘೋಷಣೆಯಾಗುವ ಮುನ್ನ ಬೈರಮಂಗಲ ಕಂಚುಗಾರನಹಳ್ಳಿ ವ್ಯಾಪ್ತಿಯಲ್ಲಿ ಒಟ್ಟು 2 ಸಾವಿರ ಗೋಮಾಳ ಜಮೀನು ಇತ್ತು. ಈಗ ಕೇವಲ 700 ಎಕರೆಗೆ ಬಂದಿದೆ. ಈ ಬಗ್ಗೆ ಮೊದಲು ಮಾಹಿತಿ ನೀಡಲಿ. ಬಾಕಿ ಉಳಿದ ಗೋಮಾಳ ಜಮೀನುಗಳ ಬಗ್ಗೆ ದಾಖಲಾತಿ ಪಡೆಯಲಾಗುತ್ತಿದೆ. ಎಲ್ಲವನ್ನು ಶೀಘ್ರದಲ್ಲಿಯೇ ಬಿಡುಗಡೆ ಮಾಡುತ್ತೇವೆ. ಈ ಬಗ್ಗೆ ಉತ್ತರ ಕೊಡಬೇಕು ಎಂದು ಆಗ್ರಹಿಸಿದರು. ಬಿಡದಿ ಸ್ಮಾರ್ಟ್ ಸಿಟಿ ಯೋಜನೆ ಸಂಬಂಧ ಎಲ್ಲರನ್ನು ಎತ್ತಿಕಟ್ಟುವುದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ ಶೋಭೆ ತರುವುದಿಲ್ಲ. ಇದರ ಬದಲು ಬೈರಮಂಗಳ ಕಂಚುಗಾರನಹಳ್ಳಿ ಸುತ್ತಮುತ್ತಲಿನ ರೈತರ ಹಿತ ಕಾಯುವ ಕೆಲಸ ಮಾಡಲಿ ಎಂದರು. ಜೆಡಿಎಸ್ ವಕ್ತಾರ ನರಸಿಂಹಮೂರ್ತಿ ಮಾತನಾಡಿ, ಡಿಸಿಎಂ ಡಿ.ಕೆ.ಶಿವಕುಮಾರ್ ಅವರೇ ಕೊತ್ವಾಲ ಶಿಷ್ಯರಾಗಿ ಮಾತನಾಡಬೇಡಿ, ನೀವು ರಾಜ್ಯದ ಉಪಮುಖ್ಯಮಂತ್ರಿ ಎಂಬುದನ್ನು ಮರೆಯಬೇಡಿ, ಕೊತ್ವಾಲ್ ಗರಡಿಯಲ್ಲಿ ಎಂದರು.

# ಮುಂಗಾರು ಪೂರ್ವ ಸಿದ್ಧತೆಗೆ ಕಟ್ಟುನಿಟ್ಟಿನ ಸೂಚನೆ

ಚಿಕ್ಕಬಳ್ಳಾಪುರ




ಈ ತಿಂಗಳ ಅಂತ್ಯದೊಳಗೆ ಮುಂಗಾರು ಪ್ರವೇಶಿಸುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಮಳೆಯಿಂದಾಗುವ ಹಾನಿಗಳನ್ನು ತಡೆಗಟ್ಟಲು ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡು 24x7 ಮಾದರಿಯಲ್ಲಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಜಿ. ಪ್ರಭು ಅವರು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯ ನ್ಯಾಯಾಲಯ ಸಭಾಂಗಣದಲ್ಲಿ ನಡೆದ "ಮಳೆಹಾನಿ ಹಾಗೂ ಬೆಳೆಹಾನಿ ಕುರಿತು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳ ವಿಡಿಯೋ ಸಂವಾದ ಸಭೆ"ಯಲ್ಲಿ ಮಾತನಾಡಿದ ಅವರು, ಕಳೆದ ಎರಡು ದಿನಗಳ ಹಿಂದೆ ಜಿಲ್ಲೆಯಾದ್ಯಂತ ಸುರಿದ ಪೂರ್ವ ಮುಂಗಾರು ಮಳೆಯಿಂದ ವಿವಿಧೆಡೆ ತೋಟಗಾರಿಕಾ ಬೆಳೆಗಳಿಗೆ ಹಾನಿಯಾಗಿದೆ ಎಂದು ತಿಳಿಸಿದರು.

ಗೌರಿಬಿದನೂರು ತಾಲ್ಲೂಕಿನಲ್ಲಿ ಹೆಚ್ಚು ಮಳೆಯಾಗಿದ್ದು, ಜಿಲ್ಲೆಯಲ್ಲಿ 20 ಹೆಕ್ಟೇರ್ ಬಾಳೆ, 1.60 ಹೆಕ್ಟೇರ್ ಅಡಿಕೆ, 1.20 ಹೆಕ್ಟೇರ್ ಟೊಮೆಟೊ ಹಾಗೂ 2 ಹೆಕ್ಟೇರ್ ತರಕಾರಿ ಬೆಳೆ ನಾಶವಾಗಿದೆ ಎಂದು ಮಾಹಿತಿ ನೀಡಿದರು.

"ತಾಲ್ಲೂಕು ತಹಶೀಲ್ದಾರರು ಖುದ್ದಾಗಿ ರೈತರ ಜಮೀನುಗಳಿಗೆ ಭೇಟಿ ನೀಡಿ ಸಂತ್ರಸ್ತರಿಗೆ ಸಾಂತ್ವನ ಹೇಳಬೇಕು. ತೋಟಗಾರಿಕೆ ಇಲಾಖೆ ಹಾಗೂ ಇತರೆ ಇಲಾಖೆಗಳ ಅಧಿಕಾರಿಗಳೊಂದಿಗೆ ಜಂಟಿ ಸಮೀಕ್ಷೆ ನಡೆಸಿ ಪರಿಹಾರಧನ ವಿತರಣೆಗೆ ತುರ್ತು ಕ್ರಮ ಕೈಗೊಳ್ಳಬೇಕು," ಎಂದು ಸೂಚಿಸಿದರು.

ಮುಂದಿನ ದಿನಗಳಲ್ಲಿ ಜಿಲ್ಲೆಯ ಯಾವುದೇ ಭಾಗದಲ್ಲಿ ಮಳೆಹಾನಿ ಸಂಭವಿಸಿದರೆ ತಾಲ್ಲೂಕು ಮಟ್ಟದ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಸ್ಥಳೀಯ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಕಾಲೋಚಿತ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಮಳೆಹಾನಿ ತಡೆಗಟ್ಟುವ ನಿಟ್ಟಿನಲ್ಲಿ ತಾಲ್ಲೂಕು ಮಟ್ಟದಲ್ಲಿ ಟಾಸ್ಕ್‌ಫೋರ್ಸ್ ಸಮಿತಿ ಸಭೆಗಳನ್ನು ನಡೆಸಿ ಸ್ಥಳೀಯ ಸಿಬ್ಬಂದಿಗೆ ಅಗತ್ಯ ಸೂಚನೆ ನೀಡುವಂತೆ ತಹಶೀಲ್ದಾರರಿಗೆ ನಿರ್ದೇಶನ ನೀಡಿದರು. ಈಗಾಗಲೇ ಜಿಲ್ಲೆಯಲ್ಲಿ ಸಿಡಿಲು ಬಡಿದು ಇಬ್ಬರು ಮೃತಪಟ್ಟಿರುವುದನ್ನು ಉಲ್ಲೇಖಿಸಿದ ಅವರು, ಮುಂಗಾರು ಅವಧಿಯಲ್ಲಿ ಸಿಡಿಲಿನ ಅಪಾಯ ಹೆಚ್ಚಿರುವುದರಿಂದ ಜನರಲ್ಲಿ ಜಾಗೃತಿ ಮೂಡಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯ ಅಂಗನವಾಡಿಗಳು, ಶಾಲಾ–ಕಾಲೇಜುಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು, ವಿದ್ಯುತ್ ಪರಿವರ್ತಕಗಳು, ವಿದ್ಯುತ್ ಕಂಬಗಳು ಸೇರಿದಂತೆ ಸಾರ್ವಜನಿಕ ಆಸ್ತಿಗಳಿಗೆ ಹಾನಿಯಾದಲ್ಲಿ ತಕ್ಷಣ ವರದಿ ಸಲ್ಲಿಸಿ ತುರ್ತು ದುರಸ್ತಿ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು. "ವಿದ್ಯುತ್ ಕಂಬಗಳು ಹಾಗೂ ಪರಿವರ್ತಕಗಳು ಹಾಳಾದಲ್ಲಿ ತುರ್ತಾಗಿ ದುರಸ್ತಿ ಮಾಡಿಸಬೇಕು. ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡು ಸದಾ ಸನ್ನದ್ಧರಾಗಿರಬೇಕು," ಎಂದು ಹೇಳಿದರು.

ಈ ವರ್ಷದ ಕೃಷಿ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಪೂರೈಕೆಯ ರೂಪುರೇಷೆಗಳನ್ನು ಸಿದ್ಧಪಡಿಸಿ ಮುಂಗಾರು ಪೂರ್ವದಲ್ಲೇ ರೈತರಿಗೆ ಮಾಹಿತಿ ನೀಡುವಂತೆ ಜಂಟಿ ಕೃಷಿ ನಿರ್ದೇಶಕರಿಗೆ ಸೂಚಿಸಿದರು. "ಎಫ್‌ಐಡಿ ಆಧಾರಿತವಾಗಿ ರಸಗೊಬ್ಬರ ವಿತರಣೆ ಮಾಡಿ, ಅಗತ್ಯ ಪ್ರಮಾಣದಲ್ಲಿ ಆಮದು ಹಾಗೂ ಪೂರೈಕೆಗೆ ಕಾಲೋಚಿತ ಕ್ರಮ ಕೈಗೊಳ್ಳಬೇಕು," ಎಂದು ತಿಳಿಸಿದರು.

ನಗರಗಳನ್ನು ಸಂಪರ್ಕಿಸುವ ಪ್ರಮುಖ ರಸ್ತೆ ಹಾಗೂ ಇತರೆ ರಸ್ತೆ ಇಕ್ಕೆಲಗಳಲ್ಲಿ ಶೇಖರಿಸಿರುವ ಪ್ಲಾಸ್ಟಿಕ್ ಮತ್ತು ತ್ಯಾಜ್ಯ ವಸ್ತುಗಳನ್ನು ಒಂದು ವಾರದೊಳಗೆ ತೆರವುಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು. ಖಾಲಿ ನಿವೇಶನಗಳಲ್ಲಿ ಬೆಳೆದಿರುವ ಗಿಡಗಂಟಿಗಳು ಹಾಗೂ ಘನ ತ್ಯಾಜ್ಯವನ್ನು ಸ್ಥಳೀಯಾಡಳಿತ ಸಂಸ್ಥೆಗಳ ಮೂಲಕ ತೆರವುಗೊಳಿಸಿ, ಅದರ ವೆಚ್ಚವನ್ನು ಸಂಬಂಧಪಟ್ಟ ನಿವೇಶನ ಮಾಲೀಕರಿಂದ ವಸೂಲಿ ಮಾಡುವಂತೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ವೈ. ನವೀನ್ ಭಟ್ ಮಾತನಾಡಿ, "ಮಳೆಯ ಸಂದರ್ಭದಲ್ಲಿ ನೀರು ಸರಾಗವಾಗಿ ಹರಿದುಹೋಗಲು ರಾಜಕಾಲುವೆಗಳು ಹಾಗೂ ಚರಂಡಿಗಳನ್ನು ತುರ್ತಾಗಿ ಸ್ವಚ್ಛಗೊಳಿಸಬೇಕು. ಗಿಡ, ಹುಲ್ಲು ಹಾಗೂ ತ್ಯಾಜ್ಯ ವಸ್ತುಗಳನ್ನು ತೆರವು ಮಾಡಬೇಕು," ಎಂದು ಸೂಚಿಸಿದರು.

ಪ್ರತಿ ಗ್ರಾಮ ಅಥವಾ ವಾರ್ಡ್ ಮಟ್ಟದಲ್ಲಿ ಸ್ವಚ್ಛತಾ ಕಾರ್ಯಕ್ಕಾಗಿ ವಿಶೇಷ ತಂಡ ರಚಿಸಿ ತ್ಯಾಜ್ಯ ವಿಲೇವಾರಿ ಹಾಗೂ ಸ್ವಚ್ಛತಾ ಕಾರ್ಯ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಭೆಯಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy